ಸಂಪುಟ: 22, ಸಂಚಿಕೆ: 273, ಪುಟಗಳು: 8, ಶನಿವಾರ, 12 ಜುಲೈ 2025 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

ಸುಭಾಷಿತ

ನಿನ್ನೆ ಮತ್ತೆ ಬರುವುದಿಲ್ಲ, ನಾಳೆ ನಮ್ಮದಲವೋ ಗೊತ್ತಿಲ್ಲ. ಆದರೆ ಈ ದಿನ ಈ ಕ್ಷಣ ನಮ್ಮದೇ ಮರೆಯದಿರೋಣ, ನಗುತ್ತಲಿರೋಣ.

ಪಂಚಾಂಗ

(ಶನಿವಾರ 12 ಜುಲೈ-2025)

- ಶ್ರೀ ವಿಶ್ವಾವಸುನಾಮ ಸಂವತ್ಸರ
- ಗ್ರೀಷ್ಮ ಋತು, ಆಷಾಢ ಮಾಸ
- ಕೃಷ್ಣ ಪಕ್ಷ, ದ್ವಿತೀಯ, ಶನಿವಾರ
- ಉತ್ತರಾಷಾಢ ನಕ್ಷತ್ರ / ಶ್ರವಣ ನಕ್ಷತ್ರ
- ರಾಹುಕಾಲ: 09:16 ರಿಂದ 10:52
- ಗುಳಿಕಕಾಲ: 06:05 ರಿಂದ 07:40
- ಯಮಗಂಡಕಾಲ: 02:04 ರಿಂದ 03:40

## ಸಂಕ್ಷಿಪ್ತ ಸುದ್ದಿ

### ಕಾರಿನ ಮೇಲೆ ಬಿದ್ದ ಬೃಹತ್ ಮರ ಚಾಲಕ ಗ್ರೇಟ್ ಎಸ್ಕೇಪ್



**ಬೆಂಗಳೂರು:** ನಗರದ ಹಲವೆಡೆ ತಡರಾತ್ರಿ ಭಾರೀ ಮಳೆ ಸುರಿದು, ಪ್ರಮುಖ ರಸ್ತೆಯಲ್ಲಿ ನೀರು ತುಂಬಿಕೊಂಡು ವಾಹನ ಸಂಚಾರಕ್ಕೆ ಅಡ್ಡಿಯಾಗಿದೆ. ವಿವಿಧ ಪ್ರದೇಶಗಳಲ್ಲಿ 3.2 ಸೆಂ.ಮೀ.ವರೆಗೂ ಮಳೆಯಾಗಿದೆ ಎಂದು ತಿಳಿದುಬಂದಿದೆ.

ಮಳೆಯೊಂದಿಗೆ ಭಾರೀ ಗಾಳಿಗೆ ಅಲ್ಲಲ್ಲಿ ಅವಾಂತರಗಳೂ ಸಂಭವಿಸಿವೆ. ಬೃಹತ್ ಮರಗಳು, ವಿದ್ಯುತ್ ಕಂಬಗಳಿಗೆ ಹಾನಿಯಾಗಿದೆ. ಈ ನಡುವೆ ನಿನ್ನೆ ರಾತ್ರಿ ಬಿದ್ದ ಮರಗಳನ್ನ ಈವರೆಗೂ ತೆರವು ಮಾಡದ ಬಿಬಿಎಂಪಿ, ಬೆಸ್ಕಾಂ ಅಧಿಕಾರಿಗಳ ವಿರುದ್ಧ ಸಾರ್ವಜನಿಕರು ಇಡೀ ಶಾಪ ಹಾಕಿದ್ದಾರೆ.

ಕಾರಿನ ಮೇಲೆ ಬಿದ್ದ ಬೃಹತ್ ಮರ; ಚಾಲಕ ಗ್ರೇಟ್ ಎಸ್ಕೇಪ್

ಇನ್ನೂ ನಿನ್ನೆ ಸಂಜೆ 6:10ರ ಸುಮಾರಿಗೆ ಮಳೆ ಸಂದರ್ಭದಲ್ಲಿ ಶೇಷಾದ್ರಿಪುರಂ ಕಾನೂನು ಕಾಲೇಜು ಬಳಿ ಚಲಿಸುತ್ತಿದ್ದ ಕಾರಿನ ಮೇಲೆ ಬಿದ್ದ ಬೃಹತ್ ಮರವೊಂದು ಬಿದ್ದಿದೆ. ಮರ ಬಿದ್ದ ರಭಸಕ್ಕೆ 3 ವಿದ್ಯುತ್ ಕಂಬಗಳು ಧರಾಶಾಯಿಯಾಗಿವೆ. ಪುಟ 2

### ರಾಯಚೂರಿನಲ್ಲಿ ಹೃದಯಾಘಾತಕ್ಕೆ ಮತ್ತೊಂದು ಬಲಿ

**ರಾಯಚೂರು:** ಜಮೀನಿನಲ್ಲಿ ಹೃದಯಾಘಾತಕ್ಕೊಳಗಾಗಿ ಕುಸಿದು ಬಿದ್ದು ರೈತ ಸಾವನ್ನಪ್ಪಿರುವ ಘಟನೆ ರಾಯಚೂರು ಜಿಲ್ಲೆಯ ಡಿ.ರಾಂಪೂರ ಗ್ರಾಮದಲ್ಲಿ ನಡೆದಿದೆ.



ಉಪ್ಪರ ವೆಂಕಟೇಶ್ (45) ಮೃತ ರೈತ. ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ವೇಳೆ ರೈತನಿಗೆ ಏಕಾಏಕಿ ಎದೆನೋವು ಕಾಣಿಸಿಕೊಂಡು ಕುಸಿದು ಬಿದ್ದಿದ್ದಾರೆ. ಕೂಡಲೇ ಸ್ಥಳದಲ್ಲಿದ್ದವರು ಆಸ್ಪತ್ರೆಗೆ ಸಾಗಿಸುತ್ತಿದ್ದ ಮಾರ್ಗ ಮಧ್ಯದಲ್ಲೇ ವೆಂಕಟೇಶ್ ಮೃತಪಟ್ಟಿದ್ದಾರೆ. ಆರೋಗ್ಯವಾಗಿದ್ದ ರೈತ ವೆಂಕಟೇಶ್ ಜಮೀನಿನ ಕೆಲಸಗಳನ್ನ ಮಾಡಿಕೊಂಡಿದ್ದರು. ಆದರೆ ಏಕಾಏಕಿ ಕುಸಿದುಬಿದ್ದು ಸಾವನ್ನಪ್ಪಿರುವುದು ಕುಟುಂಬಸ್ಥರು ಹಾಗೂ ಪುಟ 2



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines



## ವಿಕೃತ ಕಾಮಿ ಬಂಧನ

**ಬೆಂಗಳೂರು:** ಮಹಿಳೆಯರು ಸ್ನಾನ ಮಾಡೋದನ್ನೇ ಕಾಯಕ ಮಾಡಿಕೊಂಡಿದ್ದ ವಿಕೃತ ಕಾಮುಕನನ್ನ ಕಾಡುಗೋಡಿ ಪೊಲೀಸರು ಬಂಧಿಸಿ ಪರಪ್ಪನ ಅಗ್ರಹಾರ ಜೈಲಿಗಟ್ಟಿದ್ದಾರೆ.



ಹಾಜ ಮೊಯಿನುದ್ದಿನ್ ಬಂಧಿತ ಆರೋಪಿ. ಎಲೆಕ್ಟ್ರಿಕಲ್ ಕೆಲಸ ಮಾಡಿಕೊಂಡಿದ್ದ ಚನ್ನಸಂದ್ರ ಮೂಲದ ಮೊಯಿನುದ್ದಿನ್, ಮಹಿಳೆಯರು ಸ್ನಾನ ಮಾಡೋದನ್ನ ಕದ್ದು ಮುಚ್ಚಿ ಮೊಬೈಲ್‌ನಲ್ಲಿ ವಿಡಿಯೋ ಮಾಡೋದನ್ನೇ ಕಾಯಕ ಮಾಡಿಕೊಂಡಿದ್ದ.

ಇದೇ ರೀತಿ ಕಳೆದ ಮಂಗಳವಾರ ಬೆಳಗ್ಗೆ 6:30ರ ಸುಮಾರಿಗೆ ಕಾಡುಗೋಡಿ ಠಾಣಾ ವ್ಯಾಪ್ತಿಯಲ್ಲಿರುವ ಮನೆಯೊಂದರಲ್ಲಿ ತಾಯಿ-ಮಗಳು ಬಾತ್‌ರೂಮ್‌ಗೆ ಸ್ನಾನಕ್ಕೆ ತೆರಳಿದ್ದಾರೆ. ಇದನ್ನ ಗಮನಿಸಿದ ಕಾಮುಕ ಮೊಯಿನುದ್ದಿನ್ ಕಿಟಕಿ ಮೂಲಕ ಕದ್ದು ಮುಚ್ಚಿ ಮೊಬೈಲ್‌ನಲ್ಲಿ ವಿಡಿಯೋ ಮಾಡಿದ್ದಾನೆ.

### ವಿದೇಶಗಳಲ್ಲಿ ಆಸ್ತಿ ಮಾಡಿದ್ರೆ, ಸರ್ಕಾರಕ್ಕೆ ಬರೆದುಕೊಡುವೆ
## ಇಡಿ ದಾಳಿಗೊಳಗಾಗಿದ್ದ ಶಾಸಕ ಸುಬ್ಬಾರೆಡ್ಡಿ ಸವಾಲ್

**ಚಿಕ್ಕಬಳ್ಳಾಪುರ:** ಮಲೇಷ್ಯಾ ಹಾಂಕಾಂಗ್ ಜರ್ಮನಿಯಲ್ಲಿ ಅಕ್ರಮವಾಗಿ ಆಸ್ತಿ ಮಾಡಿರುವ ಆರೋಪದ ಮೇರೆಗೆ ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಕಾಂಗ್ರೆಸ್ ಶಾಸಕ ಎಸ್.ಎನ್ ಸುಬ್ಬಾರೆಡ್ಡಿ ನಿವಾಸಗಳ ಮೇಲೆ ಇಡಿ ದಾಳಿ ಮಾಡಿತ್ತು. ಇಡಿ ದಾಳಿಗೆ ಸಂಬಂಧಿಸಿದಂತೆ ಶಾಸಕ ಎಸ್.ಎನ್ ಸುಬ್ಬಾರೆಡ್ಡಿ ಮೊದಲ ಪ್ರತಿಕ್ರಿಯೆ ನೀಡಿದ್ದಾರೆ. ನಕಲಿ ದಾಖಲೆಗಳನ್ನ ಸೃಷ್ಟಿಸಿ ರಾಜಕೀಯ ವಿರೋಧಿಗಳು ನನ್ನ ಮೇಲೆ ಕುತಂತ್ರ ಮಾಡಿದ್ದಾರೆ ಅಂತ ಸುಬ್ಬಾರೆಡ್ಡಿ ಸ್ಪಷ್ಟನೆ ನೀಡಿ ದಾಖಲೆಗಳನ್ನ ಬಿಡುಗಡೆ ಮಾಡಿದ್ದಾರೆ.

ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಕಾಂಗ್ರೆಸ್ ಶಾಸಕ ಎಸ್.ಎನ್ ಸುಬ್ಬಾರೆಡ್ಡಿ ನಿವಾಸ



ಹಾಗೂ ಕಚೇರಿಗಳ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿದ್ರು. ಈ ಬಗ್ಗೆ ಚಿಕ್ಕಬಳ್ಳಾಪುರದಲ್ಲಿ ಮಾಧ್ಯಮದ ಜೊತೆ ಮಾತನಾಡಿದ ಸುಬ್ಬಾರೆಡ್ಡಿ, ನಾನು ವಿದೇಶಗಳಲ್ಲಿ ಯಾವುದೇ ಆಸ್ತಿ ಮಾಡಿಲ್ಲ. ಯಾರದೋ ದೇಹಕ್ಕೆ ನನ್ನ ಮುಖದ ಫೋಟೋ ಅಂಟಿಸಿ ವಿದೇಶಗಳಲ್ಲಿ ಆಸ್ತಿ ಮಾಡಿರುವ ಹಾಗೆ ನಕಲಿ ದಾಖಲೆಗಳನ್ನು ಸೃಷ್ಟಿ ಮಾಡಿದ್ದಾರೆ. ಇದೇ ದಾಖಲೆಗಳ ಆಧಾರದ ಮೇರೆಗೆ ಇಡಿಯವರು ನಮ್ಮ ಮನೆಗಳ ಮೇಲೆ ದಾಳಿ ಮಾಡಿದ್ದಾರೆ. ನಾನು ನಯಾಪೈಸೆ ವಿದೇಶಗಳಲ್ಲಿ ಹೂಡಿಕೆ ಮಾಡಿದ್ರೆ, ನನ್ನ ಆಸ್ತಿ ಎಲ್ಲಾ ಸರ್ಕಾರಕ್ಕೆ ಬರೆದುಕೊಡ್ತೇನೆ ಅಂತ ಸವಾಲು ಹಾಕಿದ್ದಾರೆ.

**ಜೀವನದಲ್ಲೇ ಜರ್ಮನಿಗೆ ಹೋಗಿಲ್ಲ:** ಇನ್ನೂ ನಾನು 15 ವರ್ಷಗಳಿಂದ ಜರ್ಮನಿ ಮಲೇಷ್ಯಾ ಹಾಂಕಾಂಗ್‌ಗೆ ಹೋಗೇ ಇಲ್ಲ. ಜೀವನದಲ್ಲಿ ಒಮ್ಮೆಯೂ ಸಹ ಜರ್ಮನಿಗೆ ಹೋಗಿಲ್ಲ. ವಿಧಾನಸಭಾ ಚುನಾವಣೆಯಲ್ಲಿ ನನ್ನ ಎದುರು ಪರಾಜಿತನಾದ ಅಭ್ಯರ್ಥಿ ನನಗೆ ತೊಂದರೆ ಕೊಡುವ ಉದ್ದೇಶದಿಂದ ಕುತಂತ್ರ ಮಾಡಿರುವ ಅನುಮಾನ ಇದೆ ಎಂದರು.

**ಫೋಟೋ ಎಡಿಟ್ ಮಾಡಿ ನಕಲಿ ದಾಖಲೆ ಸೃಷ್ಟಿ:** ಶಾಸಕ ಸುಬ್ಬಾರೆಡ್ಡಿ ಹೇಳಿರುವ ಹಾಗೆ ರಾಮಸ್ವಾಮಿ ವೀರನ್ ಎಂಬುವವರ ಹೆಸರಿನಲ್ಲಿ ಇರುವ ಆಸ್ತಿಯನ್ನ ಶಾಸಕ ಸುಬ್ಬಾರೆಡ್ಡಿ ಖರೀದಿ ಮಾಡಿರುವ ಹಾಗೆ ಯಾರದೋ ಫೋಟೋಗೆ ತಮ್ಮ ಮುಖದ ಫೋಟೋ ಎಡಿಟ್ ಮಾಡುವ ಮೂಲಕ ನಕಲಿ ದಾಖಲೆಗಳನ್ನು ಸೃಷ್ಟಿ ಮಾಡಿದ್ದಾರಂತೆ. ಇದೇ ದಾಖಲೆಗಳನ್ನು ಆಧರಿಸಿ ಇಡಿ ರೇಡ್ ಮಾಡಿದ್ದಾರೆ. ಈ ನಕಲಿ ದಾಖಲೆಗಳು ಮೊದಲೇ ನನಗೆ ಸಿಕ್ಕಿದ್ದು ಈ ಬಗ್ಗೆ ನಾನು ಪುಟ 2

### ನೇಪಾಳದ ಮೂಲಕ ಭಾರತದ ಮೇಲೆ ಪಾಕಿಸ್ತಾನ ಭಯೋತ್ಪಾದಕ ಸಂಘಟನೆಗಳಾದ ಲಷ್ಕರ್
# ಜೈಶ್ ದಾಳಿ ಸಾಧ್ಯತೆ

**ಕಠ್ಮಂಡು:** ಲಷ್ಕರ್-ಎ-ತೈಬಾ (ಎಲ್‌ಇಟಿ) ಮತ್ತು ಜೈಶ್-ಎ-ಮೊಹಮ್ಮದ್ (ಜೆಇಎಂ)ನಂತಹ ಪಾಕಿಸ್ತಾನ ಮೂಲದ ಭಯೋತ್ಪಾದಕ ಸಂಘಟನೆಗಳು ಭಾರತವನ್ನು ಗುರಿಯಾಗಿಸಲು ನೇಪಾಳದ ಮಾರ್ಗವನ್ನು ಬಳಸಿಕೊಳ್ಳಬಹುದು ಎಂದು ನೇಪಾಳದ ಉನ್ನತ ಅಧಿಕಾರಿಯೊಬ್ಬರು ಎಚ್ಚರಿಸಿದ್ದಾರೆ. ನೇಪಾಳದ ಅಧ್ಯಕ್ಷರ ಸಲಹೆಗಾರ ಸುನಿಲ್ ಬಹದ್ದೂರ್ ಥಾಪಾ ಅವರು ಬುಧವಾರ (ಜುಲೈ 9) ಕಠ್ಮಂಡುವಿನಲ್ಲಿ ಎನ್‌ಐಐಸಿಇ ಆಯೋಜಿಸಿದ್ದ ಉನ್ನತ ಮಟ್ಟದ ವಿಚಾರ ಸಂಕಿರಣದಲ್ಲಿ ಈ ಹೇಳಿಕೆ ನೀಡಿದ್ದಾರೆ.

ಭಾರತದಲ್ಲಿ ಭಯೋತ್ಪಾದಕ ಘಟನೆಗಳು ಹೆಚ್ಚಾಗಿ ನೇಪಾಳದಲ್ಲಿ ಪ್ರತಿಧ್ವನಿಸುತ್ತವೆ, ಇದು ಪ್ರಾದೇಶಿಕ ಶಾಂತಿ ಮತ್ತು ಸ್ಥಿರತೆಗೆ ಧಕ್ಕೆ ತರುತ್ತದೆ ಎಂದು ಥಾಪಾ ಹೇಳಿದ್ದಾರೆ. ಪಾಕಿಸ್ತಾನದ ಭಯೋತ್ಪಾದನೆಗೆ ಬೆಂಬಲವು ಸಾರ್ಕ್‌ನ ಪರಿಣಾಮಕಾರಿತ್ವ ಮತ್ತು ವಿಶಾಲ ಪ್ರಾದೇಶಿಕ ಏಕೀಕರಣಕ್ಕೆ ಪ್ರಮುಖ ಅಡಚಣೆಯಾಗಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ.



ನೇಪಾಳ ಮತ್ತು ಭಾರತವು 1,751 ಕಿಮೀ ಉದ್ದದ ಗಡಿಯನ್ನು ಹಂಚಿಕೊಂಡಿವೆ ಎಂಬುದನ್ನು ಇಲ್ಲಿ ಗಮನಿಸಬೇಕು. ಇದು ಗಂಭೀರ ಭದ್ರತಾ ಅಪಾಯವನ್ನುಂಟುಮಾಡುವ ಅಂಶವಾಗಿದೆ. ಭಯೋತ್ಪಾದಕರು ಈ ಹಿಂದೆಯೂ ಈ ಮಾರ್ಗವನ್ನು ದುರ್ಬಳಕೆ ಮಾಡಿಕೊಂಡಿದ್ದಾರೆ, ಆಗಾಗ ನಕಲಿ ನೇಪಾಳಿ ದಾಖಲೆಗಳನ್ನು ಬಳಸಿಕೊಂಡು ಭಾರತದ ಪ್ರದೇಶಕ್ಕೆ ನುಸುಳಿದ್ದಾರೆ. ಹಲವು ವರ್ಷಗಳಿಂದ, ಪಾಕಿಸ್ತಾನ ಮೂಲದ ಲಷ್ಕರ್-ಎ-ತೈಬಾ ಮತ್ತು ಜೈಶ್-ಎ-ಮೊಹಮ್ಮದ್‌ನಂತಹ ಸಂಘಟನೆಗಳ ಹಲವಾರು ಕಾರ್ಯಕರ್ತರನ್ನು ನೇಪಾಳ ಮೂಲಕ ಭಾರತಕ್ಕೆ ಪ್ರವೇಶಿಸಲು ಪ್ರಯತ್ನಿಸುತ್ತಿರುವಾಗ ಬಂಧಿಸಲಾಗಿದೆ.

ಭಾರತದ ಇತ್ತೀಚಿನ ಆಪರೇಷನ್ ಸಿಂಧೂರ್ ನಲ್ಲಿ ಸಶಸ್ತ್ರ ಪಡೆಗಳು ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರ (ಪಿಒಕೆ)ದಾದ್ಯಂತ 9 ಭಯೋತ್ಪಾದಕ ಶಿಬಿರಗಳನ್ನು ಗುರಿಯಾಗಿಸಿಕೊಂಡವು. ಇದನ್ನು ಗಡಿಯಾಚೆಗಿನ ಭಯೋತ್ಪಾದನೆಯ ಪುಟ 2

## ಡಾಕ್ಟರೇ ಡ್ರಗ್ ಪೆಡ್ಲರ್!
### ಪೊಲೀಸರ ಭರ್ಜರಿ ಕಾರ್ಯಾಚರಣೆ, ಬೀದರ್ ಮೂಲದ ವೈದ್ಯನ ಬಂಧನ

**ಮಂಗಳೂರು:** ಮಂಗಳೂರಿನಲ್ಲಿ ಡ್ರಗ್ಸ್ ಜಾಲದ ವಿರುದ್ಧ ಭರ್ಜರಿ ಕಾರ್ಯಾಚರಣೆ ನಡೆಸಿರುವ ಪೊಲೀಸರು ಬೀದರ್ ಮೂಲದ ವೈದ್ಯರೊಬ್ಬರನ್ನು ಬಂಧಿಸಿದ್ದಾರೆ. ವೈದ್ಯರ ಬಂಧನದ ಬೆನ್ನಲ್ಲೇ, ದಕ್ಷಿಣ ಕನ್ನಡ ಜಿಲ್ಲೆಯ ಡ್ರಗ್ಸ್ ಜಾಲಕ್ಕೆ ಸಂಬಂಧಿಸಿದ ಅನೇಕ ಸ್ಫೋಟಕ ಮಾಹಿತಿಗಳು ಕೂಡ ಬೆಳಕಿಗೆ ಬಂದಿವೆ. ಬೀದರ್ ಮೂಲದ, ಪ್ರಸ್ತುತ ಬೆಂಗಳೂರಿನ ಕೋಡಿಪಾಳ್ಯ ನಿವಾಸಿಯಾಗಿರುವ ಪ್ರಜ್ವಲ್ ಪೀಣ್ಯಾಸ್ ಬಂಧಿತ ವೈದ್ಯ. ಪ್ರಜ್ವಲ್ ಪೀಣ್ಯಾಸ್ ಹಾಗೂ ಇತರ ಪೆಡ್ಲರ್ ಗಳು ವಿದ್ಯಾರ್ಥಿಗಳನ್ನೇ



ಗುರಿಯಾಗಿಸಿಕೊಂಡು ಡ್ರಗ್ಸ್ ಪೂರೈಕೆ ಮಾಡುತ್ತಿದ್ದರು ಎಂಬುದು ಪೊಲೀಸ್ ತನಿಖೆಯಿಂದ ತಿಳಿದುಬಂದಿದೆ.

**ಮಧ್ಯ ಪ್ರದೇಶ, ಮಹಾರಾಷ್ಟ್ರದಿಂದ ಮಂಗಳೂರಿಗೆ ಡ್ರಗ್ಸ್:** ಡ್ರಗ್ಸ್ ಜಾಲದ ಬೆನ್ನುಬಿದ್ದ ಮಂಗಳೂರು ಪೊಲೀಸರಿಗೆ ಸ್ಫೋಟಕ ಮಾಹಿತಿ ದೊರೆತಿದೆ. ಮಧ್ಯಪ್ರದೇಶ ಮತ್ತು ಮಹಾರಾಷ್ಟ್ರದಿಂದ ಮಂಗಳೂರಿಗೆ ಡ್ರಗ್ಸ್ ಪೂರೈಕೆಯಾಗುತ್ತಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ. ವಿದ್ಯಾರ್ಥಿಗಳನ್ನೇ ಗುರಿಯಾಗಿಸಿ ಡ್ರಗ್ಸ್ ಪೂರೈಕೆ ಮಾಡುತ್ತಿದ್ದುದು ಕೂಡ ಗೊತ್ತಾಗಿದೆ.

**ವೈದ್ಯನೇ ಡ್ರಗ್ ಪೆಡ್ಲರ್! ಪೊಲೀಸರಿಗೆ ಗೊತ್ತಾಗಿದ್ದೇಗೆ:** ಡ್ರಗ್ಸ್ ಜಾಲದ ಬೆನ್ನುಬಿದ್ದ ಮಂಗಳೂರು ಪೊಲೀಸರು 6 ಆರೋಪಿಗಳನ್ನು ಬಂಧಿಸಿದ್ದರು. ಬಂಧಿತರನ್ನು ತೀವ್ರ ವಿಚಾರಣೆಗೆ ಒಳಪಡಿಸಿದ ವೇಳೆ, ವೈದ್ಯ ಪ್ರಜ್ವಲ್ ಪೀಣ್ಯಾಸ್ ಕಿಂಗ್ ಪಿನ್ ಎಂಬುದು ಗೊತ್ತಾಗಿದೆ.

**ಮಂಗಳೂರಿನಲ್ಲೇ ವೈದ್ಯಕೀಯ ವಿದ್ಯಾರ್ಥಿಯಾಗಿದ್ದ ಡಾಕ್ಟರ್!:** ವೈದ್ಯ ಪ್ರಜ್ವಲ್ ಪೀಣ್ಯಾಸ್ ಈ ಹಿಂದೆ ಮಂಗಳೂರಿನ ಫಾದರ್ ಮುಲ್ಲರ್ಸ್ ಕಾಲೇಜಿನಲ್ಲಿ ವೈದ್ಯಕೀಯ ವಿದ್ಯಾರ್ಥಿಯಾಗಿದ್ದ. ಮಂಗಳೂರು ನಗರದ ವಿವಿಧ ಠಾಣೆಗಳಲ್ಲಿ ಡ್ರಗ್ಸ್ ಪೂರೈಕೆ ಹಿನ್ನಲೆ ದಾಖಲಾಗಿದ್ದ ಮೂರು ಪ್ರಕರಣಗಳ ಜಾಡು ಹಿಡಿದಾಗ ಪ್ರಜ್ವಲ್ ಪೀಣ್ಯಾಸ್ ಕರ್ಮಕಾಂಡ ಬೆಳಕಿಗೆ ಬಂದಿದೆ. ಪ್ರಕರಣ ಸಂಬಂಧ ಈವರೆಗೆ ಒಟ್ಟು 9 ಆರೋಪಿಗಳನ್ನು ಬಂಧಿಸಲಾಗಿದೆ. ಪುಟ 2

### ಮದುವೆಯಾದ 15 ದಿನದಲ್ಲೇ ಪ್ರಿಯತಮನಿಗಾಗಿ
## ಆಂಧ್ರದಿಂದ ಕೊಪ್ಪಳಕ್ಕೆ ಬಂದ ಯುವತಿ!

**ಕೊಪ್ಪಳ:** ಪ್ರೀತಿಸಿದ ಯುವಕನಿಗಾಗಿ ಆಂಧ್ರ ಪ್ರದೇಶದ ಯುವತಿಯೊಬ್ಬಳು ಮದುವೆಯಾದ ಕೇವಲ 15 ದಿನಗಳಲ್ಲಿ ಪತಿಯನ್ನು ಬಿಟ್ಟು ಕೊಪ್ಪಳಕ್ಕೆ ಓಡಿಬಂದ ಸಿನಿಮೀಯ ಘಟನೆ ನಡೆದಿದೆ.

ಸದ್ಯ ಈ ಜೋಡಿಗಾಗಿ ಯುವತಿಯ ಪೋಷಕರು ಆಂಧ್ರದಿಂದ ಕೊಪ್ಪಳಕ್ಕೆ ಬಂದು ಹುಡುಕಾಟ ನಡೆಸುತ್ತಿದ್ದಾರೆ ಎನ್ನಲಾಗಿದ್ದು, ಎಲ್ಲಿಯೇ ಸಿಕ್ಕಿದರೂ ಅಲ್ಲಿಯೇ ಕೊಲೆ ಮಾಡುತ್ತೇವೆ ಎಂದು ಬೆದರಿಕೆ ಹಾಕಿದ್ದಾರೆ ಎನ್ನಲಾಗಿದೆ. ಹೀಗಾಗಿ, ಜೋಡಿ ಸದ್ಯ ಕೊಪ್ಪಳ ಪೊಲೀಸ್ ಠಾಣೆ ಮೆಟ್ಟಿಲೇರಿದೆ. ಕೊಪ್ಪಳ



ಜಿಲ್ಲೆಯ ಕುಷ್ಟಗಿ ತಾಲೂಕಿನ ಪುರಸಂಗನಾಳ ಗ್ರಾಮದ ಯುವಕ ವೆಂಕಟೇಶ ಹಾಗೂ ಆಂಧ್ರಪ್ರದೇಶದ ಪಲ್ನಾಡು ಜಿಲ್ಲೆ ರಂಪಚಾರು ತಾಲೂಕು ಪುಟ 2

### ಬೆಂಗಳೂರಲ್ಲಿ ಕಿಟ್ಟಿ ಪಾರ್ಟಿ ಆಯೋಜಿಸಿ 50 ಕೋಟಿ ವಂಚನೆ ಕೇಸ್
## ಪೊಲೀಸರಿಗೆ ಅವಾಜ್ ಹಾಕಿದ್ದ ಮತ್ತೋರ್ವ ಅರೆಸ್ಟ್

**ಬೆಂಗಳೂರು:** ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಕಿಟ್ಟಿ ಪಾರ್ಟಿ ಆಯೋಜಿಸಿ 50 ಕೋಟಿ ಹಣ ವಂಚನೆ ಪ್ರಕರಣ ಸಂಬಂಧ ಮತ್ತೋರ್ವನನ್ನು ಪೊಲೀಸರು ಬಂಧಿಸಿದ್ದಾರೆ.

ವಂಚಕಿ ಸವಿತಾಳ ಪರ ಲಾಯರ್ ಎಂದು ಎಂಟ್ರಿ ಕೊಟ್ಟು ಎಸಿಪಿ, ಸಬ್ ಇನ್ಸ್‌ಪೆಕ್ಟರ್‌ಗೆ ಅವಾಜ್ ಹಾಕಿ ಕರ್ತವ್ಯಕ್ಕೆ ಅಡ್ಡಿಪಡಿಸಿದ ಆರೋಪದಲ್ಲಿ ನಕಲಿ ವಕೀಲ ಯೋಗಾನಂದನನ್ನು (52) ಬಂಧಿಸಲಾಗಿದೆ. ಈತ ವಂಚಕಿ ಸವಿತಾಳನ್ನು ಹೇಗೆ ಅರೆಸ್ಟ್ ಮಾಡಿದ್ರಿ ಎಂದು ಪೊಲೀಸರಿಗೆ ಅವಾಜ್ ಹಾಕಿದ್ದ. ಅಲ್ಲದೇ ಆರೋಪಿ ಸವಿತಾ ಬಳಿಯಿದ್ದ ಮನೆ ಕೀ ಹೊರಗೆ ತೆಗೆದುಕೊಂಡು ಹೋಗ್ತಿದ್ದ ವೇಳೆ ಆರೋಪಿ ಕೀ ತೆಗೆದುಕೊಂಡು ಹೋಗಲು ಸಾಧ್ಯವಿಲ್ಲ ಎಂದು ಅಡ್ಡ ಹಾಕಿದ್ದ ಪೊಲೀಸರಿಗೆ ಅದ್ಹೇಗೆ ಕೀ ಕಿತ್ತುಕೊಳ್ತೀರೋ ನೋಡ್ತೀನಿ ಎಂದು ನಕಲಿ ವಕೀಲ ಯೋಗಾನಂದ



ಅವಾಜ್ ಹಾಕಿದ್ದ.

ಈತನ ರಂಪಾಟವನ್ನ ಗಮನಿಸಿದ್ದ ಕೆಪಿ ಅಗ್ರಹಾರ ಇನ್ಸ್‌ಪೆಕ್ಟರ್ ಗೋವಿಂದರಾಜ್ ಈತನ ಕೇಸ್ ಹಿಸ್ಟರಿ ತೆಗೆದಾಗ ಹಳೆ ಕೇಸ್‌ನಲ್ಲಿ ಮುದುಕಿಗೆ ಯೋಗಾನಂದ್ ಹೊಡೆದಿದ್ದರ ಮಾಹಿತಿ ಸಿಕ್ಕಿದೆ. ಆಗ ಬಸವೇಶ್ವರ ನಗರ ಎಸ್‌ಐ ಆಗಿದ್ದ ಗೋವಿಂದರಾಜ್ ಈತನನ್ನು ಬಂಧಿಸಿದ್ದರು. ಆಗ ನಾನು ಪ್ರೊಫೆಸರ್ ಎಂದು ಹೇಳಿಕೊಂಡಿದ್ದ ಯೋಗಾನಂದ್‌ನನ್ನು ಈಗ ಮತ್ತೆ ಬಂಧಿಸಿ ಜೈಲಿಗಟ್ಟಿದ್ದಾರೆ.

**ಪ್ರಕರಣ ಏನು?:** 20ಕ್ಕೂ ಹೆಚ್ಚು ಮಹಿಳೆಯರಿಗೆ 50 ಕೋಟಿ ರೂ.ಗಿಂತಲೂ ಹೆಚ್ಚು ವಂಚನೆ ಮಾಡಿದ್ದ ಆರೋಪದಡಿ ಬಸವೇಶ್ವರನಗರ ಪೊಲೀಸರು ಸವಿತಾ ಎಂಬಾಕೆಯನ್ನು ಬಂಧಿಸಿದ್ದಾರೆ.

ಕಿಟ್ಟಿ ಪಾರ್ಟಿ ಹೆಸರಲ್ಲಿ ಶ್ರೀಮಂತ ಮಹಿಳೆಯರನ್ನ ಪರಿಚಯ ಮಾಡಿಕೊಂಡಿದ್ದ ಸವಿತಾ ತನಗೆ ಹಲವು ರಾಜಕಾರಣಿಗಳು ಗೊತ್ತೆಂದು ಹೇಳಿಕೊಳ್ಳುತ್ತಿದ್ದಳು. ಸಿಎಂ, ಡಿಸಿಎಂ, ಎಂಬಿ ಪಾಟೀಲ್ ಹೆಸರೇಳಿ ಗಾಳ ಹಾಕ್ತಿದ್ದ ಸವಿತಾ, ನಿಧಾನವಾಗಿ ಹೂಡಿಕೆ ನೆಪದಲ್ಲಿ ಹಣ ಪಡೆದುಕೊಳ್ತಿದ್ದಳು.

ಅಮೆರಿಕದಿಂದ ಕಮ್ಮಿ ಬೆಲೆಗೆ ಚಿನ್ನ ತರಿಸಿಕೊಡುವುದಾಗಿ ವಂಚನೆ ಮಾಡಿದ್ದಾಳೆ. ಒಬ್ಬರಿಂದ ತಲಾ 50 ಲಕ್ಷದಿಂದ ಪುಟ 2

## ಪ್ರೀತಿಸಿ ಮದುವೆಯಾದ ಜೋಡಿಗೆ ನೇಗಿಲು ಕಟ್ಟಿ ಎತ್ತುಗಳಂತೆ ಉಳುಮೆ ಮಾಡಿಸಿ ಚಿತ್ರಹಿಂಸೆ

**ಭುವನೇಶ್ವರ:** ಪ್ರೀತಿಸಿ ಮದುವೆಯಾದ ಜೋಡಿಗೆ ನೇಗಿಲು ಕಟ್ಟಿ ಎತ್ತುಗಳಂತೆ ಉಳುಮೆ ಮಾಡಿಸಿ ಚಿತ್ರಹಿಂಸೆ ನೀಡಿದ ಘಟನೆ ಒಡಿಶಾದ ರಾಯಗಡ ಜಿಲ್ಲೆಯ ಕಂಜಮಝಿರಾ ಗ್ರಾಮದಲ್ಲಿ ನಡೆದಿದೆ.

ಯುವಕ ಹಾಗೂ ಯುವತಿ ಸ್ಥಳೀಯ ಪದ್ಧತಿಗೆ ವಿರುದ್ಧವಾಗಿ ಮದುವೆಯಾಗಿದ್ದಾರೆ ಎಂದು ಗ್ರಾಮಸ್ಥರು ಅವರ ಮೇಲೆ ಹಲ್ಲೆ ನಡೆಸಿದ್ದಾರೆ. ಅಲ್ಲದೇ ಸಮಾಜದ ಮುಂದೆ ಶಿಕ್ಷಿಸುವ ಉದ್ದೇಶದಿಂದ ನೇಗಿಲು ಕಟ್ಟಿ ಉಳುಮೆ ಮಾಡಿಸಿದ್ದಾರೆ. ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು, ಭಾರೀ ಚರ್ಚೆಗೆ ಕಾರಣವಾಗಿದೆ.

ಯುವಕ ಮತ್ತು ಯುವತಿ ಇತ್ತೀಚೆಗೆ ಪ್ರೀತಿಸಿ ಮದುವೆಯಾಗಿದ್ದರು. ಇದಕ್ಕೆ ಕೆಲವು ಗ್ರಾಮಸ್ಥರು ವಿರೋಧ ವ್ಯಕ್ತಪಡಿಸಿದ್ದರು. ಆ



ಯುವಕ ಮದುವೆಯಾದ ಯುವತಿಯ ತಂದೆಯ ಚಿಕ್ಕಮ್ಮನ ಮಗನಾಗಿದ್ದು, ಸ್ಥಳೀಯ ಪದ್ಧತಿಗಳ ಪ್ರಕಾರ ಇಂತಹ ಮದುವೆ ನಿಷಿದ್ಧವೆಂದು ಪರಿಗಣಿಸಲಾಗುತ್ತದೆ ಎನ್ನಲಾಗಿದೆ. ಇದನ್ನೂ ಮೀರಿಯೂ ಮದುವೆಯಾಗಿದ್ದಕ್ಕೆ ಗ್ರಾಮಸ್ಥರು ಅವರ ಮೇಲೆ ಹಲ್ಲೆ ನಡೆಸಿದ್ದಾರೆ.

ಉಳುಮೆಯ ನಂತರ ಜೋಡಿಯನ್ನು ಗ್ರಾಮದ ದೇವಾಲಯಕ್ಕೆ ಕರೆದೊಯ್ದು, ಅವರ ಪಾಪ ಶುದ್ಧೀಕರಿಸಲು, ಶುದ್ಧೀಕರಣ ವಿಧಿಗಳನ್ನು ಮಾಡಲಾಯಿತು. ಗ್ರಾಮಸ್ಥರ ಈ ನಡೆಗೆ ಸಾಮಾಜಿಕ ಜಾಲತಾಣದಲ್ಲಿ ಭಾರೀ ವಿರೋಧ ವ್ಯಕ್ತವಾಗಿದೆ. ಈ ಸಂಬಂಧ ತನಿಖೆ ನಡೆಸಲು ಪೊಲೀಸರ ತಂಡವೊಂದು ಗ್ರಾಮಕ್ಕೆ ಭೇಟಿ ನೀಡಿದೆ. ಈ ಸಂಬಂಧ ಶೀಘ್ರದಲ್ಲೇ ಪ್ರಕರಣ ದಾಖಲಿಸಲಾಗುವುದು ಎಂದು ಪೊಲೀಸ್ ವರಿಷ್ಠಾಧಿಕಾರಿ ಎಸ್. ಸ್ವಾತಿ ಕುಮಾರ್ ತಿಳಿಸಿದ್ದಾರೆ.

ಜನವರಿಯಲ್ಲಿ ಇದೇ ರೀತಿಯ ಘಟನೆ ನಡೆದಿತ್ತು. ರಾಯಗಡ ಜಿಲ್ಲೆಯ ಒಂದು ಕುಟುಂಬದ ಪುಟ 2

### ಏರ್ ಇಂಡಿಯಾ ವಿಮಾನ ಪತನಕ್ಕೆ ಕೊನೆಗೂ ಕಾರಣ ಪತ್ತೆ
## ವರದಿಯಲ್ಲಿ ಆಘಾತಕಾರಿ ಅಂಶ

**ನವದೆಹಲಿ:** ಅಹಮದಾಬಾದ್‌ನಲ್ಲಿ ಜೂನ್ 12 ರಂದು ಸಂಭವಿಸಿದ್ದ ಏರ್ ಇಂಡಿಯಾ ವಿಮಾನ ಅಪಘಾತದ ಪ್ರಾಥಮಿಕ ತನಿಖಾ ವರದಿ ಸಲ್ಲಿಕೆಯಾಗಿದ್ದು, ಅದರಲ್ಲಿರುವ ಮಾಹಿತಿ ಬಹಿರಂಗವಾಗಿದೆ. ವಿಮಾನ ಅಪಘಾತ ತನಿಖಾ ಬ್ಯೂರೋ ಸಲ್ಲಿಸಿರುವ 15 ಪುಟಗಳ ಪ್ರಾಥಮಿಕ ತನಿಖಾ ವರದಿಯಲ್ಲಿ ಹಲವು ಆಘಾತಕಾರಿ ಮಾಹಿತಿ ಬಹಿರಂಗವಾಗಿದೆ. ವರದಿಯ ಪ್ರಕಾರ, ಟೇಕ್ ಆಫ್ ಆದ ಕೆಲವೇ ಸೆಕೆಂಡುಗಳಲ್ಲಿ ವಿಮಾನದ ಎರಡೂ ಎಂಜಿನ್‌ಗಳು ಸ್ಥಗಿತಗೊಂಡವು. ಆ ನಂತರ ವಿಮಾನ ಪತನವಾಗಿದೆ.

ವಿಮಾನದ ಎಂಜಿನ್‌ಗೆ ಇಂಧನ ಪೂರೈಕೆ ಸ್ಥಗಿತಗೊಂಡಿರುವುದು ಸೇರಿದಂತೆ ಹಲವಾರು ಪ್ರಮುಖ ವಿಷಯಗಳನ್ನು ಎಎಐಬಿ ಗಮನಸೆಳೆದಿದೆ. ಆದಾಗ್ಯೂ,



ತನಿಖಾ ಬ್ಯೂರೋ, ಈ ವರದಿ ಪ್ರಾಥಮಿಕ ಎಂದು ಹೇಳಿದೆ. ಪ್ರಸ್ತುತ, ಅಪಘಾತದ ವಿವರವಾದ ತನಿಖೆ ನಡೆಯುತ್ತಿದೆ.

**ಎಂಜಿನ್‌ಗಳಿಗೆ ಇಂಧನ ಪೂರೈಕೆ ಸ್ಥಗಿತ:** ಎಎಐಬಿ ಪ್ರಾಥಮಿಕ ವರದಿಯ ಪ್ರಕಾರ, ಟೇಕಾಫ್ ನಂತರ ಎಂಜಿನ್‌ಗಳ ಇಂಧನ ಸ್ವಿಚ್‌ಗಳು ಇದ್ದಕ್ಕಿದ್ದಂತೆ ರನ್‌ನಿಂದ ಕಟ್‌ಆಫ್‌ಗೆ ಬದಲಾದವು. ಪುಟ 2

# ಕೇಂದ್ರದಲ್ಲಿ ಅಧಿಕಾರಕ್ಕೆ ಬರ್ತೀವಿ, ಬಿಜೆಪಿ ನಾಯಕರನ್ನು ತಿಹಾರ್ ಜೈಲಿಗೆ ಹಾಕ್ತೀವಿ

**ಬೆಂಗಳೂರು:** 2029ಕ್ಕೆ ಕೇಂದ್ರದಲ್ಲಿ ನಾವು ಅಧಿಕಾರಕ್ಕೆ ಬರುತ್ತೇವೆ. ಆಗ ಬಿಜೆಪಿ ನಾಯಕರನ್ನು ತಿಹಾರ್ ಜೈಲಿಗೆ ತುಂಬೋದು ಖಚಿತ ಎಂದು ಶಾಸಕ ಪ್ರದೀಪ್ ಈಶ್ವರ್ ಹೇಳಿದ್ದಾರೆ.ಶಾಸಕ ಸುಬ್ಬಾರೆಡ್ಡಿ ನಿವಾಸದ ಮೇಲೆ ಇಡಿ ದಾಳಿ ವಿಚಾರವಾಗಿ ಬೆಂಗಳೂರಿನಲ್ಲಿ ಮಾತನಾಡಿದ ಅವರು, ಅಮಿತ್ ಶಾ ಮಗ ಜಯ್ ಶಾ ಅಂತ ಇದ್ದಾರೆ. ಅವರ



ಕಂಪನಿಗಳು ಪಾರದರ್ಶಕವಾಗಿ ಇದ್ಯಾ? ನಿತಿನ್ ಗಡ್ಕರಿ ಅವರದ್ದೂ 16 ಸಕ್ಕರೆ ಕಾರ್ಖಾನೆ ಇದೆ, ಅಲ್ಲಿ ಇ.ಡಿ, ಐಟಿ ಹೋಗಲ್ಲ. ಬರೀ ಕಾಂಗ್ರೆಸ್ ನಾಯಕರನ್ನೇ ಟಾರ್ಗೆಟ್ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಸುಬ್ಬಾರೆಡ್ಡಿಯವರು ತುಂಬಾ ಕಷ್ಟಪಟ್ಟು ಬಡತನದಲ್ಲಿ ಮೇಲೆಬಂದು ಬೆಂಗಳೂರಿನಲ್ಲಿ ತನ್ನದೇ ಆದ ಸಾಮ್ರಾಜ್ಯವನ್ನು ಕಟ್ಟಿಕೊಂಡು ಮೂರು ಬಾರಿ ಶಾಸಕರಾಗಿದ್ದಾರೆ. ಸುಬ್ಬಾರೆಡ್ಡಿ ಅಂದರೆ ಪಕ್ಷನಿಷ್ಠೆ, ಪಕ್ಷನಿಷ್ಠೆ ಅಂದರೆ ಅದು ಸುಬ್ಬಾರೆಡ್ಡಿ. ಅಂತಹ ವ್ಯಕ್ತಿಯ ಮನೆಮೇಲೆ ಇಂದು ಇಡಿ ರೇಡ್ ಮಾಡಿದೆ. ಅದಾನಿ, ಅಂಬಾನಿ ಮೇಲೆ ಇಡಿ ದಾಳಿ ಆಗಲ್ಲ. ಬಿಜೆಪಿ, ವಿಜಯೇಂದ್ರ ಮೇಲೆ ರೇಡ್ ಆಗಲ್ಲ. ಐಟಿ, ಇಡಿಯವರಿಗೆ ಕಾಂಗ್ರೆಸ್‌ನವರ ಮೇಲೆ ಬಹಳ ಪ್ರೀತಿ. ಕೇಂದ್ರ ಮತ್ತು ರಾಜ್ಯ ಬಿಜೆಪಿ ಎಷ್ಟೇ ಟಾರ್ಗೆಟ್ ಮಾಡಿದರೂ ನಾವು ಹೆದರಲ್ಲ ಎಂದರು. 2029ರಲ್ಲಿ ಅಧಿಕಾರಕ್ಕೆ ಬಂದಾಗ ಬಿಜೆಪಿಯವರನ್ನು ಹುಡುಕಿ ಹುಡುಕಿ ತಿಹಾರ್ ಜೈಲನ್ನು ತುಂಬಿಸುತ್ತೇವೆ. ಅವರು ಫ್ಲವರ್ ಹಾಕಿದರೆ ನಾವು ಪಾಟ್ ಸೇರಿಸಿ ಹಾಕುತ್ತೇವೆ. ಕಾಂಗ್ರೆಸ್ ಶಾಸಕರನ್ನು ಪದೇ ಪದೇ ಟಾರ್ಗೆಟ್ ಮಾಡಲಾಗುತ್ತಿದೆ. ಇದು ಬಿಜೆಪಿಯವರಿಗೆ ಒಳ್ಳೆಯದಲ್ಲ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

# ಪ್ರತಿ ತಿಂಗಳು ಹಣ ಕೊಡೋಕೆ ತೊಡಕುಗಳಿವೆ

**ಮೈಸೂರು:** ಪ್ರತಿ ತಿಂಗಳು ಹಣ ಕೊಡೋದಕ್ಕೆ ಕೆಲವು ತೊಡಕುಗಳಿವೆ. ಸದ್ಯ 3 ತಿಂಗಳಿಗೊಮ್ಮೆ ಗೃಹಲಕ್ಷ್ಮಿ ಹಣ ಕೊಡ್ತಿದ್ದೇವೆ ಗ್ಯಾರಂಟಿ ಯೋಜನೆ ಅಧ್ಯಕ್ಷ ಹೆಚ್.ಎಂ ರೇವಣ್ಣ ಹೇಳಿದ್ದಾರೆ.



ಮೈಸೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮೂರು ತಿಂಗಳಿಗೊಮ್ಮೆ ಗೃಹಲಕ್ಷ್ಮಿ ಹಣ ಕೊಡುತ್ತಿದ್ದೇವೆ. ಜಿಎಸ್‌ಟಿ ವಿಚಾರದಲ್ಲಿ 1 ಲಕ್ಷ 20 ಸಾವಿರ ಜನರಿಗೆ ಹಣ ಹೋಗಿರಲಿಲ್ಲ. ಅದರಲ್ಲಿ ಈಗ 58 ಸಾವಿರ ಜನರ ಸಮಸ್ಯೆಯನ್ನ ಬಗೆಹರಿಸಿದ್ದೇವೆ. ಉಳಿದ ಜನರ ಸಮಸ್ಯೆ ಬಗೆಹರಿಸುತ್ತೇವೆ ಎಂದಿದ್ದಾರೆ.

ನಾವು ಅಧಿಕಾರಕ್ಕೆ ಬಂದಾಗಿನಿಂದ ಗೃಹಲಕ್ಷ್ಮಿ ಹಣ ನಿಲ್ಲಿಸಿಲ್ಲ. ಪ್ರತಿ ತಿಂಗಳು ಹಣ ಕೊಡೋದಕ್ಕೆ ಕೆಲವು ತೊಡಕುಗಳಿವೆ. ಹೀಗಾಗಿ ಕೊಡಲು ಆಗುತ್ತಿಲ್ಲ ಎನ್ನುವ ಮೂಲಕ ಪ್ರತಿ ತಿಂಗಳ ಗೃಹಲಕ್ಷ್ಮಿ ಹಣ ಕೊಡಲು ಆಗಲ್ಲ ಎಂದು ಪರೋಕ್ಷವಾಗಿ ಸ್ಪಷ್ಟಪಡಿಸಿದ್ದಾರೆ.

ಸಿಎಂ ಬದಲಾವಣೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಸಿಎಂ ಬದಲಾವಣೆ ವಿಚಾರ ಹೈಕಮಾಂಡ್ ಮಟ್ಟದಲ್ಲಿ ಈ ಚರ್ಚೆ ನಡೆದಿಲ್ಲ, ಕೆಲವೊಂದಿಷ್ಟು ಗೊಂದಲಗಳು ಇತ್ತು. ಗೊಂದಲಗಳನ್ನು ಹೈಕಮಾಂಡ್ ಬಗೆಹರಿಸಿದೆ. ಸಿಎಂ ಕುರ್ಚಿಯ ವಿಚಾರದಲ್ಲಿ ನಾವು ಮಾಧ್ಯಮಗಳ ಮುಂದೆ ಮಾತನಾಡದಂತೆ ಸೂಚನೆ ನೀಡಿರುವುದಾಗಿ ತಿಳಿಸಿದ್ದಾರೆ. ಡಿಕೆಶಿ, ಸಿದ್ದರಾಮಯ್ಯ ಪಕ್ಷದ ಜೋಡೆತ್ತುಗಳು ಸಭೆಗಳಲ್ಲಿ ಒಂದಿಬ್ಬರು ಶಾಸಕರ ಹೇಳಿಕೆಯ ಬಗ್ಗೆ ಚರ್ಚೆಯಾಗಿದೆ. ಯಾವ ಶಾಸಕರ ಬೆಂಬಲ ಯಾರಿಗೆ ಇದೆ ಎಂಬ ಪ್ರಶ್ನೆ ಈಗ ಯಾಕೆ ಬಂತು ಗೊತ್ತಿಲ್ಲ. ಡಿ.ಕೆ. ಶಿವಕುಮಾರ್, ಸಿದ್ದರಾಮಯ್ಯ ಅವರು ಜೋಡೆತ್ತಿನ ರೀತಿ ಪಕ್ಷ ಕಟ್ಟಿ ಪಕ್ಷವನ್ನ ಅಧಿಕಾರಕ್ಕೆ ತಂದಿದ್ದಾರೆ. ರಾಜಕಾರಣದಲ್ಲಿ ಎಲ್ಲರಿಗೂ ಆಸೆ ಇರುತ್ತದೆ. ಅಂತಿಮ ತೀರ್ಮಾನಗಳು ಹೈಕಮಾಂಡ್‌ಗೆ ಬಿಟ್ಟದ್ದು ಎಂದಿದ್ದಾರೆ.

### ಹಾಸನ ಸರಣಿ ಹೃದಯಾಘಾತದ ವರದಿ ಬಹಿರಂಗ

# ಮೃತಪಟ್ಟವರಲ್ಲಿ ಹೆಚ್ಚಿನವರು ಕ್ಯಾಬ್ ಚಾಲಕರು!



**ಬೆಂಗಳೂರು:** ಹಾಸನ ಸರಣಿ ಹೃದಯಾಘಾತ ಮತ್ತು ಹೃದಯ ಸ್ತಂಭನ ತನಿಖಾ ವರದಿ ಬಹಿರಂಗವಾಗಿದೆ. ವಾಯು ಮಾಲಿನ್ಯ ಮತ್ತು ಸದಾ ಕುಳಿತುಕೊಂಡಿರುವುದರಿಂದ ಆಟೋ ಚಾಲಕರು, ಕ್ಯಾಬ್ ಚಾಲಕರಿಗೆ ಹೃದಯಾಘಾತವಾಗುವ ಸಾಧ್ಯತೆ ಹೆಚ್ಚಿದೆ ಎಂದು ಅಧ್ಯಯನ ವರದಿ ಹೇಳಿದೆ.

ಹೃದಯಾಘಾತ ಮತ್ತು ಹೃದಯ ಸ್ತಂಭನಕ್ಕೊಳಗಾಗುತ್ತಿರುವ ಪ್ರಕರಣಗಳ ಹೆಚ್ಚಳಕ್ಕೆ ಸಂಬಂಧಿಸಿ ಅಧ್ಯಯನ ನಡೆಸಿ ನಿಖರ ಕಾರಣ ತಿಳಿಸುವಂತೆ ಆರೋಗ್ಯ ಇಲಾಖೆ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ.ರವೀಂದ್ರ ನಾಥ್ ನೇತೃತ್ವದ ತಜ್ಞರ ಸಮಿತಿಯನ್ನು ರಚಿಸಿತ್ತು.

**ವರದಿಯಲ್ಲಿ ಏನಿದೆ?:** ಮೇ ಮತ್ತು ಜೂನ್ ತಿಂಗಳಿನಲ್ಲಿ 24 ಮಂದಿ ಮೃತಪಟ್ಟಿದ್ದರು. ಈ ಪೈಕಿ 45 ವರ್ಷದ ಕೆಳಗಡೆ 24 ಮಂದಿ ಮೃತಪಟ್ಟರೆ 45 ವರ್ಷ ಮೇಲ್ಪಟ್ಟು 10 ಮಂದಿ ಸಾವನ್ನಪ್ಪಿದ್ದರು. ಮೃತರ ಪೈಕಿ 7 ಮಂದಿ ಬೆಂಗಳೂರಿನಲ್ಲಿ ವಾಸವಾಗಿದ್ದರು.

24 ಮಂದಿಯಲ್ಲಿ ನಾಲ್ಕು ಮಂದಿ ಬೇರೆ ಕಾರಣಕ್ಕೆ ಮೃತಪಟ್ಟಿದ್ದಾರೆ. ದೀರ್ಘಕಾಲದ ಮೂತ್ರಪಿಂಡ ಕಾಯಿಲೆ, ರಸ್ತೆ ಅಪಘಾತ, ಜಠರದ ಸೋಂಕು, ವಿದ್ಯುತ್ ಶಾಕ್‌ನಿಂದ ಸಾವನ್ನಪ್ಪಿದ್ದಾರೆ.

ಉಳಿದ 20 ಮಂದಿಯಲ್ಲಿ 10 ಜನ ಹೃದಯಾಘಾತದಿಂದ ಮೃತಪಟ್ಟಿದ್ದಾರೆ. ಈ ಪೈಕಿ ಮೂವರು ಮೊದಲೇ ಹೃದಯ ಸಂಬಂಧಿ ಸಮಸ್ಯೆಯಿಂದ ಬಳಲುತ್ತಿದ್ದರು. ಉಳಿದ 7 ಮಂದಿಯಲ್ಲಿ ನಾಲ್ಕು ಮಂದಿ ಹೃದಯಾಘಾತದಿಂದ ಮೃತಪಟ್ಟಿರುವುದು ಮರಣೋತ್ತರ ಪರೀಕ್ಷೆಯಲ್ಲಿ ದೃಢಪಟ್ಟಿದೆ. ಎಲೆಕ್ಟ್ರೋಕಾರ್ಡಿಯೋಗ್ರಾಮ್ ದಾಖಲೆಗಳಿಂದ ಮೂವರು ಹೃದಯಾಘಾತಕ್ಕೆ ಮೃತಪಟ್ಟಿರುವುದು ಸಾಬೀತಾಗಿದೆ.

ಮೃತ 24 ಜನರಲ್ಲಿ ಆಟೋ ಮತ್ತು ಕ್ಯಾಬ್ ಚಾಲಕರೇ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. 33% ಚಾಲಕರೇ ಹೃದಯಾಘಾತಕ್ಕೆ ಬಲಿಯಾಗಿದ್ದಾರೆ. ಮದ್ಯಪಾನ, ಧೂಮಪಾನ ಸೇವನೆಯಿಂದ ಸಾವಾಗಿರುವ ಸಾಧ್ಯತೆಯಿದೆ. ವಾಯು ಮಾಲಿನ್ಯದ ಜೊತೆ ಸದಾ ವಾಹನದಲ್ಲಿ ಕುಳಿತಿರುತ್ತಾರೆ. ಹೀಗಾಗಿ ವಾಹನ ಚಾಲಕರು ರಿಸ್ಕ್ ಕೆಟಗೆರಿಯಲ್ಲಿ ಇದ್ದಾರೆ.

ಹೃದಯಾಘಾತ ಮತ್ತು ಸಾವುಗಳ ಸಂಖ್ಯೆಯ ದತ್ತಾಂಶದ ವಿವರವಾದ ವಿಶ್ಲೇಷಣೆ ಮಾಡಿದಾಗ ಜಿಲ್ಲೆಯಲ್ಲಿ ಹಠಾತ್ ಹೃದಯಾಘಾತದ ಸಾವುಗಳಲ್ಲಿ ಯಾವುದೇ ಹೆಚ್ಚಳವನ್ನು ಸೂಚಿಸುವುದಿಲ್ಲ. ಹಾಸನದಲ್ಲಿ ಹಿಂದಿನ ತಿಂಗಳಿನಂತೆಯೇ ಇದೆ.

ಶವಪರೀಕ್ಷೆಯ ದತ್ತಾಂಶ, ಕ್ಲಿನಿಕಲ್ ಡೇಟಾ ಮತ್ತು ಕುಟುಂಬ ಸದಸ್ಯರಿಂದ ಸೀಮಿತ ಮಾಹಿತಿ ಕೊರತೆಯಿಂದಾಗಿ ಪ್ರತಿಯೊಂದು ಪ್ರಕರಣದಲ್ಲೂ ಸಾವಿಗೆ ನಿಖರ ಕಾರಣ ನೀಡಲು ಸಾಧ್ಯವಾಗಿಲ್ಲ.

ಅನೇಕ ಸಂದರ್ಭಗಳಲ್ಲಿ ವ್ಯಕ್ತಿಗಳನ್ನು ಸಾವಿಗೆ ಮೊದಲು ಯಾವುದೇ ಆರೋಗ್ಯ ಕೇಂದ್ರಕ್ಕೆ ಕರೆ ತಂದಿಲ್ಲ. ಆಸ್ಪತ್ರೆಗಳಲ್ಲಿ ಮೃತಪಟ್ಟಿದ್ದಾರೆ ಎಂದು ಘೋಷಿಸಲ್ಪಟ್ಟವರಲ್ಲಿಯೂ ಸಹ ಔಪಚಾರಿಕ ಮರಣೋತ್ತರ ಪರೀಕ್ಷೆಗಳನ್ನು ಹೆಚ್ಚಾಗಿ ನಡೆಸಲಾಗಿಲ್ಲ. ಶವಪರೀಕ್ಷೆಯ ದತ್ತಾಂಶದ ಕೊರತೆಯಿಂದಾಗಿ ಇವರು ನಿಜವಾಗಿಯೂ ಹೃದಯ ಸಂಬಂಧಿತ ಸಾವುಗಳೇ ಅಥವಾ ಬೇರೆ ಕಾರಣಗಳಿಂದಾಗಿಯೇ ಎಂಬುದನ್ನು ದೃಢೀಕರಿಸಲು ಸಾಧ್ಯವಿಲ್ಲ.

ಕಳೆದ ವರ್ಷಕ್ಕೆ ಹೋಲಿಸಿದರೆ ಹೆಚ್ಚಿನ ಹೃದಯಾಘಾತವಾಗಿಲ್ಲ. ಕಳೆದ ವರ್ಷ ಇಷ್ಟೇ ಪ್ರಕರಣಗಳು ದಾಖಲಾಗಿದ್ದವು. ಮೈಸೂರು ಜಯದೇವ, ಬೆಂಗಳೂರು ಜಯದೇವ ಕಳೆದ ಆರು ತಿಂಗಳಲ್ಲಿ ಯಾವುದೇ ವ್ಯತ್ಯಾಸ ಆಗಿಲ್ಲ.

**ಹೃದಯಾಘಾತಕ್ಕೆ ಕಾರಣ ಏನು?:** ಮೊದಲೇ ಹೃದಯ ಸಂಬಂಧಿ ಕಾಯಿಲೆ, ಧೂಮಪಾನ, ಮದ್ಯಪಾನ, ಡಯಾಬಿಟಿಸ್, ಸ್ಥೂಲಕಾಯ, ಬಿಪಿ, ಅನುವಂಶೀಯ ಕಾಯಿಲೆಯಿಂದ ಮೃತಪಟ್ಟಿರುವ ಸಾಧ್ಯತೆಯಿದೆ.

**ಸಲಹೆ ಏನು?:** ಹೃದಯಾಘಾತ ನಿಯಂತ್ರಣಕ್ಕೆ ಹಾಸನ ತನಿಖಾ ವರದಿ ಆಧರಿಸಿ ಸರ್ಕಾರಕ್ಕೆ ತಾಂತ್ರಿಕ ಸಲಹಾ ಸಮಿತಿ ಕೆಲವೊಂದು ಸಲಹೆ ಕೊಟ್ಟಿದೆ. ಆಟೋ ಮತ್ತು ಕ್ಯಾಬ್ ಚಾಲಕರಿಗೆ ಹೃದಯ ತಪಾಸಣೆ ಆಯೋಜನೆ ಮಾಡಬೇಕು. 15 ವರ್ಷ ಮಕ್ಕಳಿಗೆ ಹೃದಯರಕ್ತನಾಳದ ತಪಾಸಣೆ ಮಾಡಬೇಕು. ಪ್ರಾಥಮಿಕ ಚಿಕಿತ್ಸಾ ಕೇಂದ್ರಗಳಲ್ಲಿ ಇಸಿಜಿ ಅಳವಡಿಸಬೇಕು. ಮರಣೋತ್ತರ ಪರೀಕ್ಷೆಯನ್ನು ಕಡ್ಡಾಯಗೊಳಿಸಬೇಕು.



ಬಿಳ್ಕೊಡಿಗೆ ಸಮಾರಂಭ

**ಇಂದು ಚಿಕ್ಕಬಳ್ಳಾಪುರದ ನಾಲ್ಕನೇ ಜಿಲ್ಲಾ ನ್ಯಾಯಾಲಯದ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀಮತಿ ಅನಿತಾ ರವರು ಕರ್ನಾಟಕ ರಾಜ್ಯ ಹೈಕೋರ್ಟ್ ಆದೇಶದ ಮೇರೆಗೆ ವರ್ಗಾವಣೆಗೊಂಡಿದ್ದು ಅವರಿಗೆ ಚಿಕ್ಕಬಳ್ಳಾಪುರ ವಕೀಲರ ಸಂಘದ ವತಿಯಿಂದ ಬಿಳ್ಕೊಡುಗೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಇಂದು ಸಂಘದ ವತಿಯಿಂದ ಗೌರವ ಸೂಚಿಸಲಾಯಿತು. ಸಂಘ ಹಾಗೂ ಚಿಕ್ಕಬಳ್ಳಾಪುರ ಬಗ್ಗೆ ಅವರ ಅಭಿಪ್ರಾಯ ವಿಸ್ಮಿತಗೊಳಿಸಿತು ಭಗವಂತನ ಕೃಪೆ ಸದಾ ಅವರ ಮೇಲೆ ಹಾಗೂ ಕುಟುಂಬದ ಮೇಲೆ ಇರಲಿ ಎಂದು ವಕೀಲರ ಸಂಘದ ವತಿಯಿಂದ ಆಶಿಸುತ್ತೇವೆ.ಹಾಗೂ ಸಂಘದ ಎಲ್ಲಾ ಸದಸ್ಯರ ಪರವಾಗಿ ಧನ್ಯವಾದಗಳು ತಿಳಿಸಲಾಯಿತು.**

# ವಿಕೇಂದ್ರೀಕೃತ ಗೊಬ್ಬರದ ಮೂಲಕ ನೆಲದ ಆರೋಗ್ಯ ಹೆಚ್ಚುತ್ತಿದೆ

**ಚಿಕ್ಕಬಳ್ಳಾಪುರ:** ಲ್ಮಿತ್ರಾ ಪಟೇಲ್, ಖ್ಯಾತ ಪರಿಸರವಾದಿ ಮತ್ತು ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದ ಸುಪ್ರೀಂ ಕೋರ್ಟ್ ಸಮಿತಿಯ ಸದಸ್ಯೆ ಅವರು ಚಿಕ್ಕಬಳ್ಳಾಪುರಕ್ಕೆ ಭೇಟಿ ನೀಡಿ, ನಗರ–ಕೃಷಿಕರ ಜೊತೆಯ ಘನತ್ಯಾಜ್ಯ ನಿರ್ವಹಣಾ ಯೋಜನೆಯ ಪ್ರಗತಿಯನ್ನು ಪರಿಶೀಲಿಸಿದರು. ಇದು ನಗರ ಸ್ಥಳೀಯ ಸಂಸ್ಥೆಗಳನ್ನು ಹಾಗೂ ಕೃಷಿಕರನ್ನು ಸಂಪರ್ಕಿಸುವ ನವೀನ ಮಾದರಿ, ಇದರಿಂದ ಪ್ರತ್ಯೇಕಗೊಂಡ ತೇವಯುಕ್ತ ತ್ಯಾಜ್ಯವನ್ನು ಮೂಲದಲ್ಲೇ ಸಸ್ಯಜನ್ಯ ಗೊಬ್ಬರವಾಗಿ ಪರಿವರ್ತಿಸಲಾಗುತ್ತಿದೆ.



ತಮಗೆ ನೀಡಿದ ಭೇಟಿಯ ವೇಳೆ, ಪಟೇಲ್ ಅವರು ಮಹಾನಗರ ಪಾಲಿಕೆ ಅಧಿಕಾರಿಗಳು, ರೈತರು ಹಾಗೂ ಯೋಜನಾ ತಂಡದ ಸದಸ್ಯರೊಂದಿಗೆ ಸಂವಹನ ನಡೆಸಿ, ಈ ಯೋಜನೆ ಸ್ಥಳೀಯ ತ್ಯಾಜ್ಯ ನಿರ್ವಹಣೆಯನ್ನು ಹೇಗೆ ಬದಲಾಯಿಸುತ್ತಿದೆ, ಹಾಸುಹೊರೆಯ ಅವಲಂಬನೆ ಕಡಿಮೆಯಾಗುತ್ತಿದೆ ಮತ್ತು ವಿಕೇಂದ್ರೀಕೃತ ಗೊಬ್ಬರದ ಮೂಲಕ ನೆಲದ ಆರೋಗ್ಯ ಹೆಚ್ಚುತ್ತಿದೆ ಎಂಬುದರ ಕುರಿತು ಚರ್ಚಿಸಿದರು.

ಪಟೇಲ್ ಅವರ ಅಮೂಲ್ಯ ಮಾಹಿತಿ, ಪ್ರೇರಣಾದಾಯಕ ಮಾತುಗಳು ಮತ್ತು ಆಳವಾದ ನಿರ್ವಹಣೆಯು ಸಮುದಾಯ ಆಧಾರಿತ, ವಿಕೇಂದ್ರೀಕೃತ ತ್ಯಾಜ್ಯ ನಿರ್ವಹಣೆಯ ಶಕ್ತಿಯನ್ನು ಮತ್ತೊಮ್ಮೆ ಖಚಿತಪಡಿಸಿವೆ.

ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷರಾದ ಎ. ಗಜೇಂದ್ರ, ಆಯುಕ್ತರಾದ ಮನ್ಸೂರ್ ಆಲಿ, ಪರಿಸರ ಅಭಿಯಂತರರು ಉಮಾ ಶಂಕರ್, ಆರೋಗ್ಯ ಶಾಖೆ ಸಿಬ್ಬಂದಿ ವರ್ಗದವರು, Indian Institute for Human Settlements(IIHS )ಸಂಸ್ಥೆಯ ಸದಸ್ಯರುಗಳಾದ ಪುಷ್ಕರ ಎಸ್.ವಿ., ಕಿರಣ್ ಡಿ.ಎ.,ಪೂಜಾ ಸಾಗರ್,ವಿರಭದ್ರಪ್ಪ,ರಣಪ್ರತಾಪ್ ಮತ್ತು ಅಂಬರೀಷ್ ಹಾಜರಿದ್ದರು.

# ಸರ್ಕಾರಿ ಪದವಿ ಕಾಲೇಜುಗಳಲ್ಲಿ 35 ವರ್ಷದ ಬಳಿಕ ವಿದ್ಯಾರ್ಥಿ ಚುನಾವಣೆಗೆ ಅನುಮತಿ?



**ಬೆಂಗಳೂರು:** ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ 35 ವರ್ಷದ ಬಳಿಕ ವಿದ್ಯಾರ್ಥಿ ಚುನಾವಣೆ ನಡೆಯುವ ಸಾಧ್ಯತೆಯಿದೆ.

ರಾಹುಲ್ ಗಾಂಧಿ ಅವರು ಸಿಎಂ ಸಿದ್ದರಾಮಯ್ಯಗೆ ವಿದ್ಯಾರ್ಥಿ ಚುನಾವಣೆಗೆ ಅನುಮತಿ ನೀಡುವಂತೆ ಪತ್ರ ಬರೆದಿದ್ದಾರೆ. ರಾಹುಲ್ ಗಾಂಧಿ ಸೂಚನೆ ಮೇರೆಗೆ ಡಿಗ್ರಿ ಕಾಲೇಜುಗಳಲ್ಲಿ ಮತ್ತೆ ಎಲೆಕ್ಷನ್‌ಗೆ ಅನುಮತಿ ನೀಡುವ ಬಗ್ಗೆ ಉನ್ನತ ಶಿಕ್ಷಣ ಇಲಾಖೆ ಗಂಭೀರ ಚಿಂತನೆ ನಡೆಸಿದೆ ಎನ್ನಲಾಗುತ್ತಿದೆ.

ಒಂದು ವೇಳೆ ಸರ್ಕಾರ ಏನಾದರೂ ಚುನಾವಣೆಗೆ ಅವಕಾಶ ನೀಡಿದರೆ ಮುಂದಿನ ವರ್ಷಗಳಿಂದಲೇ ಡಿಗ್ರಿ ಕಾಲೇಜಿನಲ್ಲಿ ಎಲೆಕ್ಷನ್ ಪಾಲಿಟಿಕ್ಸ್ ಎಂಟ್ರಿ ಆಗಲಿದೆ.

ಕಾಲೇಜುಗಳಲ್ಲಿ ಎಲೆಕ್ಷನ್ ಗೆ ಅನುಮತಿ ನೀಡುವ ಚರ್ಚೆ ಮಧ್ಯೆಯ ಸಿಎಂ ಸಿದ್ದರಾಮಯ್ಯನವರು ದೆಹಲಿಯಲ್ಲಿ ಪ್ರತಿಕ್ರಿಯಿಸಿ, ಕಾಲೇಜುಗಳಲ್ಲಿ ಚುನಾವಣೆ ನಡೆಸುವ ಬಗ್ಗೆ ಚಿಂತನೆ ಇದೆ. ರಾಹುಲ್ ಗಾಂಧಿ ಅವರಿಗೂ ಈ ಆಸಕ್ತಿ ಇದೆ ಎನ್ನುವ ಮೂಲಕ ಅನುಮತಿ ನೀಡುವ ಬಗ್ಗೆ ಸುಳಿವು ಕೊಟ್ಟಿದ್ದಾರೆ. ಮುಂದಿನ ಕ್ಯಾಬಿನೆಟ್‌ನಲ್ಲಿ ಈ ಬಗ್ಗೆ ನಿರ್ಧಾರ ಆಗುವ ಸಾಧ್ಯತೆ ಇದೆ.

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಮತ್ತು ಎಡಪಂಥೀಯ ವಿದ್ಯಾರ್ಥಿ ಸಂಘಟನೆಗಳು ಕರ್ನಾಟಕದಲ್ಲಿ ಈಗ ಬಲಶಾಲಿಯಾಗುತ್ತಿದೆ. ಕಾಂಗ್ರೆಸ್‌ನ ವಿದ್ಯಾರ್ಥಿ ವಿಭಾಗವಾದ ಭಾರತೀಯ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟಕ್ಕೆ ಪ್ರೋತ್ಸಾಹ ನೀಡಿ ಯುವ ನಾಯಕರನ್ನು ಬೆಳೆಸಿದಾಗ ಮಾತ್ರ ಭವಿಷ್ಯದಲ್ಲಿ ಕಾಂಗ್ರೆಸ್ ರಾಜ್ಯದಲ್ಲಿ ಗಟ್ಟಿಯಾಗುತ್ತದೆ. ಈ ಕಾರಣಕ್ಕೆ ಮತ್ತೆ ಪದವಿ ಕಾಲೇಜಿನಲ್ಲಿ ಚುನಾವಣೆ ಅನುಮತಿ ನೀಡಲು ಕಾಂಗ್ರೆಸ್ ಚಿಂತನೆ ನಡೆಸಿದೆ ಎಂಬ ವಿಶ್ಲೇಷಣೆ ಕೇಳಿ ಬಂದಿದೆ.

ವಿದ್ಯಾರ್ಥಿ ಚುನಾವಣೆಗಳಲ್ಲಿ ಹಿಂಸಾಚಾರ, ಜಾತಿ ಆಧಾರಿತ ರಾಜಕೀಯ, ರೌಡಿ ಅಂಶಗಳು ಮತ್ತು ರಾಜಕಾರಣಿಗಳ ಹಸ್ತಕ್ಷೇಪದಿಂದ ಪ್ರಾಬಲ್ಯದಿಂದಾಗಿ ಎನ್‌ಎಸ್‌ಯುಐ ಪ್ರಭಾವ ಕರ್ನಾಟಕದಲ್ಲಿ ಕಡಿಮೆಯಾಗಿದೆ.

**ಚುನಾವಣೆ ನಿಷೇಧಿಸಿದ್ದು ಯಾಕೆ?:** 1989 ರಲ್ಲಿ ನಡೆದ ಚುನಾವಣೆಯಲ್ಲಿ ರಾಜಕಾರಣಿಗಳ ಹಸ್ತಕ್ಷೇಪದಿಂದ ಭಾರೀ ಅಹಿತಕರ ಘಟನೆಗಳು ನಡೆದಿದ್ದವು. ಚುನಾವಣೆ ಸಮಯದಲ್ಲಿ ವಿದ್ಯಾರ್ಥಿಗಳ ಮಧ್ಯೆಯೇ ಗಲಾಟೆ ಹೆಚ್ಚಾಗುತ್ತದೆ ಎಂಬ ಕಾರಣಕ್ಕೆ ವಿದ್ಯಾರ್ಥಿ ಚುನಾವಣೆಯನ್ನು ರದ್ದು ಮಾಡಲಾಗಿತ್ತು.



**ಇಂದು ಮೈಸೂರಿನ ಗೌರ್ಮೆಂಟ್ ಗೆಸ್ಟ್ ಹೌಸ್ ನಲ್ಲಿ ರಾಯಚೂರು ಲೋಕಸಭಾ ಕ್ಷೇತ್ರದ ಸಂಸದರಾದ ಹಾಗೂ ಹಿಂದೆ ಮೈಸೂರು ಜಿಲ್ಲಾಧಿಕಾರಿಗಳಾಗಿ ಸೇವೆ ಸಲ್ಲಿಸಿದ ಕುಮಾರ್ ನಾಯಕ ಅವರನ್ನು ಅಭಿನಂದಿಸಿದರು. ಈ ಸಂದರ್ಭದಲ್ಲಿ. ಕುಮಾರ್ ನಾಯಕ್ ಅಭಿಮಾನಿ.ಬಳಗದ ಅಧ್ಯಕ್ಷರಾದ.ಹರೀಶ್ ಹಳೇಬೀಡು. ಗೋಪಾಲ್ ರಮ್ಮನಹಳ್ಳಿ ಮಂಜು ನಾಯಕ್ .ಸಿದ್ದರಾಜು. ರವಿ. ಇನ್ನೂ ಮುಂತಾದವರು ಭಾಗವಹಿಸಿದ್ದರು..**

# ಶಂಕರಮಠದಲ್ಲಿ ಪೌರಕಾರ್ಮಿಕರಿಂದ ಸಾಮೂಹಿಕ ಲಲಿತ ಸಹಸ್ರನಾಮ ಪಾರಾಯಣ



**ಮೈಸೂರು:** ನಗರರದ ಅಗ್ರಹಾರದಲ್ಲಿರುವ ಶೃಂಗೇರಿ ಶಂಕರಮಠದಲ್ಲಿ ಆಷಾಢಮಾಸದ ಪ್ರಯುಕ್ತ 150ಕ್ಕೂ ಹೆಚ್ಚು ಪೌರಕಾರ್ಮಿಕರಿಂದ ಲಲಿತ ಸಹಸ್ರನಾಮ ಪಾರಾಯಣ ಮಾಡಲಾಯಿತು,

ಮಾಜಿ ನಗರಪಾಲಿಕೆ ಸದಸ್ಯೆ ಸೌಭಾಗ್ಯಮೂರ್ತಿ ಮತ್ತು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಜಿಲ್ಲಾ ಪ್ರತಿನಿಧಿ ಡಾ. ಲಕ್ಷ್ಮಿದೇವಿ ನೇತೃತ್ವದಲ್ಲಿ ಆಯೋಜಿಸಿದ್ದ ಪೌರಕಾರ್ಮಿಕರಿಂದ ಲಲಿತ ಸಹಸ್ರನಾಮ ಪಾರಾಯಣದಲ್ಲಿ ಬನ್ನಾರಿಯಮ್ಮ ತಂಡ ಚಾಮುಂಡಿಪುರಂ ಬಡಾವಣೆ, ದೇವಸೇನಾ ತಂಡ ವಿಶ್ವೇಶ್ವರನಗರ, ದುರ್ಗಾದೇವಿ ತಂಡ ಸಿಲ್ಕ್ ಫ್ಯಾಕ್ಟರಿ ವೃತ್ತ, ರೇಣುಕಾದೇವಿ ತಂಡ ಅಕ್ಕನಬಳಗ, ಕಾಮಾಕ್ಷಿ ದೇವಿ ತಂಡ ವಸ್ತುಪ್ರದರ್ಶನ ಆವರಣ, ಶಾರದಾದೇವಿ ತಂಡ ಶಂಕರಮಠ, ಕರುಮಾರಿಯಮ್ಮ ತಂಡ ಕನಕಗಿರಿ, ಮೀನಾಕ್ಷಿದೇವಿ ತಂಡ ಗಾಡಿ ಚೌಕ ಸೇರಿದಂತೆ ತಂಡಗಳನ್ನ ರಚಿಸಿ ಕಳೆದ 20ದಿನಗಳಿಂದ ಮೈಸೂರಿನ ವಿವಿಧ ಬಡಾವಣೆಗಳಲ್ಲಿ ಲಲಿತಸಹಸ್ರನಾಮ ಹೇಳಿಕೊಟ್ಟು ಅಭ್ಯಾಸ ಮಾಡಿಸಿ ಶಂಕರಮಠದಲ್ಲಿ ಸಾಮೂಹಿಕವಾಗಿ ಲಲತ ಸಹಸ್ರನಾಮ ಕುಂಕುಮಾರ್ಚನೆ ಮಾಡಿದರು

ಶಾಸಕರಾದ ಟಿ ಎಸ್ ಶ್ರೀವತ್ಸ, ಮೂಡ ಮಾಜಿ ಅಧ್ಯಕ್ಷರಾದ ಎಚ್ ವಿ ರಾಜೀವ್, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ರಾಜ್ಯ ಸಂಘಟನಾ ಕಾರ್ಯದರ್ಶಿ ಡಾ. ಲಕ್ಷ್ಮಿ ದೇವಿ , ಮಾಜಿನಗರ ಪಾಲಿಕಾ ಸದಸ್ಯರಾದ ಸೌಭಾಗ್ಯ ಮೂರ್ತಿ, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷರಾದ ಡಿ ಟಿ ಪ್ರಕಾಶ್, ಕಲ್ಪನಾ ರಾಮಚಂದ್ರ, ಮಠದ ವ್ಯವಸ್ಥಾಪಕರಾದ ಶೇಷಾದ್ರಿ, ಹರೀಶ್, ಎಂ ಆರ್ ಬಾಲಕೃಷ್ಣ, ಅಜಯ್ ಶಾಸ್ತ್ರಿ, ರಂಗನಾಥ್ ಹಾಗೂ ಇನ್ನಿತರರು ಭಾಗವಹಿಸಿದರು.

## ಮೊದಲನೇ ಪುಟದಿಂದ...

### ಜೈಶ್ ದಾಳಿ ಸಾಧ್ಯತೆ

ಬೆದರಿಕೆಗೆ ನಿರ್ಣಾಯಕ ಮತ್ತು ಪರಿಣಾಮಕಾರಿ ಪ್ರತಿಕ್ರಿಯೆ ಎಂದು ಉಲ್ಲೇಖಿಸಲಾಗಿದೆ. ಮೇ 7ರಂದು ಪಾಕಿಸ್ತಾನ ಮತ್ತು ಪಿಒಕೆಯಲ್ಲಿ ಆಪರೇಷನ್ ಸಿಂಧೂರ್ ಅಡಿಯಲ್ಲಿ ಭಾರತ ನಡೆಸಿದ ನಿಖರ ದಾಳಿಯ ಸಮಯದಲ್ಲಿ ಎಲ್‌ಇಟಿ ಮತ್ತು ಜೆಇಎಂನ ಪ್ರಧಾನ ಕಚೇರಿ ಮತ್ತು ತರಬೇತಿ ಸೌಲಭ್ಯಗಳನ್ನು ಗುರಿಯಾಗಿಸಲಾಗಿತ್ತು. ಈ ಎರಡು ಭಯೋತ್ಪಾದಕ ಗುಂಪುಗಳು 2001ರಲ್ಲಿ ಸಂಸತ್ತಿನ ಮೇಲೆ ದಾಳಿ, 26/11 ಮುಂಬೈ ದಾಳಿ, 2016 ರ ಪಠಾಣ್‌ಕೋಟ್ ವಾಯುನೆಲೆಯ ದಾಳಿ ಮತ್ತು 2019ರ ಪುಲ್ವಾಮಾ ಭಯೋತ್ಪಾದಕ ದಾಳಿ ಸೇರಿದಂತೆ ಭಾರತದಲ್ಲಿ ಹಲವಾರು ದಾಳಿಗಳನ್ನು ನಡೆಸಿವೆ.

ಜಮ್ಮು ಮತ್ತು ಕಾಶ್ಮೀರದ ಸುಂದರವಾದ ರೆಸಾರ್ಟ್ ಪಟ್ಟಣದಲ್ಲಿ 26 ಪ್ರವಾಸಿಗರನ್ನು ಭಯೋತ್ಪಾದಕರು ಗುಂಡಿಕ್ಕಿ ಕೊಂದ ಪಹಲ್ಗಾಮ್ ದಾಳಿಯ ಹೊಣೆಯನ್ನು ಎಲ್‌ಇಟಿಯ ಒಂದು ಭಾಗವಾದ ರೆಸಿಸ್ಟೆನ್ಸ್ ಫ್ರಂಟ್ (ಟಿಆರ್‌ಎಫ್) ಹೊತ್ತುಕೊಂಡಿತ್ತು.

### ಡಾಕ್ಟರೇ ಡ್ರಗ್ ಪೆಡ್ಲರ್!

ಮಂಗಳೂರಿನಲ್ಲಿ ಡ್ರಗ್ಸ್ ಪೂರೈಕೆ ಮಾಡುತ್ತಿದ್ದ ಆರು ಜನರ ಬಂಧನವಾಗಿತ್ತು. ಹೊರ ರಾಜ್ಯ ಹಾಗೂ ಹೊರ ಜಿಲ್ಲೆಗಳಿಂದ ಮಂಗಳೂರಿಗೆ ಈ ಜಾಲ ಡ್ರಗ್ಸ್ ಪೂರೈಕೆ ಮಾಡುತ್ತಿತ್ತು. ಮಹಾರಾಷ್ಟ್ರಕ್ಕೆ ಸೇರಿದ ಇಬ್ಬರು ಮಧ್ಯಪ್ರದೇಶಕ್ಕೆ ಸೇರಿದ ಒಬ್ಬರನ್ನ ದಸ್ತಗಿರಿ ಮಾಡಿ ನ್ಯಾಯಾಂಗ ಬಂಧನಕ್ಕೆ ನೀಡಲಾಗಿತ್ತು.ಬೀದರ್ ಮೂಲದ ವೈದ್ಯನನ್ನು ದಸ್ತಗಿರಿ ಮಾಡಿ ನ್ಯಾಯಾಂಗ ಬಂಧನಕ್ಕೆ ನೀಡಲಾಗಿದೆ ಎಂದು ಮಂಗಳೂರು ಪೊಲೀಸ್ ಕಮಿಷನರ್ ಸುಧೀರ್ ಕುಮಾರ್ ರೆಡ್ಡಿ ಮಾಹಿತಿ ನೀಡಿದ್ದಾರೆ.

ಕೆಲವು ದಿನಗಳ ಹಿಂದಷ್ಟೇ ಮಕ್ಕಳು ಡ್ರಗ್ಸ್ ಅಡಿಕ್ಷನ್ ಗೆ ಒಳಗಾಗಿದ್ದಾರೆ ಎಂದು ಪೋಷಕರೇ ಪೊಲೀಸರಿಗೆ ದೂರು ನೀಡಿದ ಅಚ್ಚರಿಯ ವಿದ್ಯಮಾನ ಮಂಗಳೂರಿನಲ್ಲಿ ನಡೆದಿತ್ತು. ನಂತರ ಕಾರ್ಯಾಚರಣೆ ನಡೆಸಿದ್ದ ಪೊಲೀಸರು ನೂರಾರು ವಿದ್ಯಾರ್ಥಿಗಳಿಗೆ, ಮಕ್ಕಳಿಗೆ ಡ್ರಗ್ಸ್ ಪೂರೈಕೆ ಮಾಡುತ್ತಿದ್ದ ಜಾಲವನ್ನು ಹಿಡಿಯುವಲ್ಲಿ ಯಶಸ್ವಿಯಾಗಿದ್ದರು.

### ಶಾಸಕ ಸುಬ್ಬಾರೆಡ್ಡಿ ಸವಾಲ್

ಸೈಬರ್ ಠಾಣೆಯಲ್ಲಿ ದೂರು ಸಹ ನೀಡಲು ಮುಂದಾಗಿದ್ದೆ ಆದ್ರೆ ದೂರು ಪಡೆದಿರಲಿಲ್ಲ. ಈಗ ನಾನು ಮತ್ತೆ ಈ ಬಗ್ಗೆ ದೂರು ನೀಡಲಿದ್ದೇನೆ ನ್ಯಾಯಾಲಯದಲ್ಲೂ ಸಹ ದಾವೆ ಹೂಡಲಿದ್ದೇನೆ ಎಂದು ತಿಳಿಸಿದ್ರು.

ಇನ್ನೂ ಇಡಿಯವರು ಸಂಪೂರ್ಣ ವಿಚಾರಣೆ ನಂತರ ಸೋಮವಾರ ಜುಲೈ 14ರಂದು ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡಿದ್ದು ನಾನು ವಿಚಾರಣೆಗೆ ಹಾಜರಾಗುವೆ. ಆದ್ರೆ ರಾಜಕೀಯ ವಿರೋಧಿಗಳು ನನ್ನ ಮೇಲೆ ನಡೆಸಿದ ಷಡ್ಯಂತ್ರದಿಂದ ನಾನು ಹೆದರಲ್ಲ. ಇಡಿಯವರು ಏನ್ ಬೇಕಾದರೂ ತನಿಖೆ ಮಾಡಲಿ ನಾನು ಸಹಕಾರ ನೀಡುವೆ ಅಂತಲೂ ಹೇಳಿದ್ದಾರೆ.

### ವಿಕೃತ ಕಾಮಿ ಬಂಧನ

ಈ ವೇಳೆ ಮಗಳು ವಿಡಿಯೋ ಮಾಡೋದನ್ನ ಗಮನಿಸಿದ್ದಾಳೆ. ಬಳಿಕ ಹೊರಗೆ ಬಂದು ತಂದೆಗೆ ಹೇಳಿದ್ದಾಳೆ.

ಬಾಲಕಿ ತಂದೆ ಹೋಗಿ ನೋಡುವಷ್ಟರಲ್ಲಿ ಕಾಮುಕ ಅಲ್ಲಿಂದ ಎಸ್ಕೇಪ್ ಆಗಿದ್ದ. ಇದರಿಂದ ಆತಂಕಗೊಂಡ ಕುಟುಂಬಸ್ಥರು ಕಾಡುಗೋಡಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು.

ದೂರಿನ ಆಧಾರದ ಮೇಲೆ ಪ್ರಕರಣ ದಾಖಲಿಸಿಕೊಂಡ ಪೊಲೀಸರು ಕಾಮುಕನನ್ನ ಬಂಧಿಸಿ ಜೈಲಿಗಟ್ಟಿದ್ದಾರೆ. ಮೊಬೈಲ್ ನಲ್ಲಿ ಸೆರೆ ಹಿಡಿದಿದ್ದ ವಿಡಿಯೋವನ್ನೂ ಡಿಲೀಟ್ ಮಾಡಿದ್ದಾರೆ.

### ಕೊಪ್ಪಳಕ್ಕೆ ಬಂದ ಯುವತಿ!

ಕರ್ಲಕುಂಟ ಗ್ರಾಮದ ತಿರುಪತೆಮ್ಮ ಲವ್ ಕಹಾನಿ ಈಗ ಪೊಲೀಸ್ ಠಾಣೆ ಮೆಟ್ಟಿಲೇರಿದೆ.

ಯುವತಿಯ ಪೋಷಕರ ಕಡೆಯವರು 4 ಕಾರುಗಳಲ್ಲಿ ಆಂಧ್ರ ಪ್ರದೇಶದಿಂದ ಬಂದು ಹುಡುಕಾಟ ನಡೆಸುತ್ತಿದ್ದು, ಎಲ್ಲಿಯೇ ಸಿಕ್ಕಿದರೂ ಯುವಕ ಹಾಗೂ ಯುವತಿಯನ್ನು ಕೊಲೆ ಮಾಡುವುದಾಗಿ ಬೆದರಿಕೆ ಹಾಕಿದ್ದಾರೆ ಎನ್ನಲಾಗಿದೆ. ಹೀಗಾಗಿ ಕೊಪ್ಪಳ ಎಸ್‌ಪಿ ಕಚೇರಿಗೆ ಬಂದಿರುವ ಜೋಡಿ, ನಾವು ಬದುಕಬೇಕು, ನಮಗೆ ರಕ್ಷಣೆ ಕೊಡಿ ಎಂದು ಅಂಗಲಾಚಿದೆ.

**ಬೆಂಗಳೂರಿನಲ್ಲಿ ಅರಳಿದ ಪ್ರೀತಿ–ಪ್ರೇಮ:** ಬೆಂಗಳೂರಿನಲ್ಲಿ ವೆಂಕಟೇಶ ಗಾರೆ ಕೆಲಸ ಮಾಡುತ್ತಿದ್ದ ವೇಳೆ ವೆಂಕಟೇಶ ಹಾಗೂ ಈ ಯುವತಿಯ ನಡುವೆ ಪ್ರೀತಿ ಮೂಡಿದೆ. ಈ ಯುವತಿಯ ತಂದೆ ಆಂಧ್ರ ಪ್ರದೇಶ ಮೂಲದ ಲೇಬರ್ ಕಾಂಟ್ರ್ಯಾಕ್ಟರ್. ಯುವತಿಯ ತಂದೆಯ ಬಳಿ ವೆಂಕಟೇಶ ಕೆಲಸ ಮಾಡುತ್ತಿದ್ದ. ಕಳೆದ ಮೂರು ವರ್ಷಗಳಿಂದ ಇಬ್ಬರು ಪರಸ್ಪರ ಪ್ರೀತಿ ಮಾಡುತ್ತಿದ್ದರು. ಆದರೆ, ಇಬ್ಬರ ಪ್ರೀತಿ ವಿಷಯ ತಿಳಿದ ಯುವತಿಯ ಪೋಷಕರು ಯುವತಿಯನ್ನು ಊರಿಗೆ ಕರೆದೊಯ್ದು ಬಲವಂತವಾಗಿ ಬೇರೆ ಮದುವೆ ಮಾಡಿಸಿದ್ದಾರೆ. ಆದರೆ, ಬೇರೆ ಮದುವೆಯಾಗಿ ಗಂಡನ ಮನೆಗೆ ಹೋದ ಯುವತಿ, ಅಲ್ಲಿಂದಲೇ ಯುವಕನಿಗೆ ಕರೆ ಮಾಡಿ ಆತನೊಂದಿಗೆ ಬರುವುದಾಗಿ ತಿಳಿಸಿದ್ದಾಳೆ. ಇಲ್ಲವಾದರೆ ಆತ್ಮಹತ್ಯೆ ಮಾಡಿಕೊಂಡು ಸಾಯುವುದಾಗಿ ಹೇಳಿ, ಮದುವೆಯಾಗಿ 15 ದಿನದಲ್ಲೇ ಗಂಡನ ಮನೆ ಬಿಟ್ಟು ಪ್ರಿತಿಸಿದ ಯುವಕನ ಜೊತೆ ಮನೆ ಬಿಟ್ಟು ಬಂದಿದ್ದಾಳೆ.

ಸದ್ಯ ವೆಂಕಟೇಶ ಜೊತೆ ಬಂದ ಬಳಿಕ ಯುವತಿಯ ಪೋಷಕರು ಆಂಧ್ರದಿಂದ ಕೊಪ್ಪಳಕ್ಕೆ ಬಂದು ಈ ಜೋಡಿಯ ಹುಡುಕಾಟ ನಡೆಸಿದ್ದಾರೆ.

ಸದ್ಯ ಈ ಜೋಡಿ ಕೊಪ್ಪಳ ಎಸ್ಪಿ ಕಚೇರಿಯಲ್ಲೆ ಮೊಕ್ಕಾಂ ಹೂಡಿದೆ. ನಮಗೆ ರಕ್ಷಣೆ ಸಿಗುವ ವರೆಗೂ ಎಲ್ಲೂ ಹೋಗುವುದಿಲ್ಲ ಎಂದು ಪಟ್ಟು ಹಿಡಿದಿದೆ. ಕೊಪ್ಪಳ ಪೊಲೀಸರು ಈ ಜೋಡಿಗೆ ಒಂದಾಗಿ ಬಾಳಲು ಅವಕಾಶ ಕೊಡಿಸುತ್ತಾರೆಯೇ, ಯಾವ ರೀತಿ ರಕ್ಷಣೆ ನೀಡುತ್ತಾರೆ ಎಂಬುದನ್ನು ಕಾದು ನೋಡಬೇಕಿದೆ.

### ಮತ್ತೋರ್ವ ಅರೆಸ್ಟ್

ಎರಡೂವರೆ ಕೋಟಿ ಹಣ ಪಡೆದು ವಾಪಸ್ ಹಣ ನೀಡದೇ ನೆಪ ಹೇಳಿ ತಪ್ಪಿಸಿಕೊಳ್ತಿದ್ದಳು. ಈ ಹಿಂದೆ ಗೋವಿಂದರಾಜನಗರ ಠಾಣೆಯಲ್ಲಿ ಕೇಸ್ ದಾಖಲಾಗಿ ಬಂಧನವಾಗಿ ಬೇಲ್ ಮೇಲೆ ಹೊರಗಿದ್ದ ಸವಿತಾ ಮತ್ತದೇ ಚಾಳಿ ಮುಂದುವರೆಸಿ ಈಗ ಬಸವೇಶ್ವರ ನಗರ ಪೊಲೀಸರ ಅತಿಥಿ ಆಗಿದ್ದಾಳೆ.

### ಉಳುಮೆ ಮಾಡಿಸಿ ಚಿತ್ರಹಿಂಸೆ

ಸದಸ್ಯರು ಬೇರೆ ಜಾತಿಯ ವ್ಯಕ್ತಿಯನ್ನು ಮದುವೆಯಾಗಿದ್ದಕ್ಕೆ 'ಶುದ್ಧೀಕರಣ' ಎಂದು ತಲೆ ಬೋಳಿಸಲಾಗಿತ್ತು.

### ವರದಿಯಲ್ಲಿ ಆಘಾತಕಾರಿ ಅಂಶ

ಈ ಘಟನೆ ಕೇವಲ 1 ಸೆಕೆಂಡ್ ಅಂತರದಲ್ಲಿ ಸಂಭವಿಸಿದೆ. ಈ ಸಮಯದಲ್ಲಿ, ಎಂಜಿನ್‌ಗಳಿಗೆ ಇಂಧನ ಬರುವುದನ್ನು ನಿಂತುಹೋಗಿದೆ.

**ಪೈಲಟ್‌ಗಳ ನಡುವೆ ಆತಂಕದ ಸಂಭಾಷಣೆ:** ಕಾಕ್‌ಪಿಟ್‌ನಲ್ಲಿ ಪೈಲಟ್‌ಗಳ ನಡುವೆ ನಡೆದ ಸಂಭಾಷಣೆಯ ಬಗ್ಗೆಯೂ ವರದಿಯಲ್ಲಿ ಉಲ್ಲೇಖಿಸಲಾಗಿದೆ. ಕಾಕ್‌ಪಿಟ್ ವಾಯ್ಸ್ ರೆಕಾರ್ಡರ್ ಪ್ರಕಾರ, ಒಬ್ಬ ಪೈಲಟ್ ಮತ್ತೊಬ್ಬ ಪೈಲಟ್ ಬಳಿ, ''ನೀವು ಎಂಜಿನ್ ಅನ್ನು ಏಕೆ ಆಫ್ ಮಾಡಿದ್ದೀರಿ'' ಎಂದು ಕೇಳಿದ್ದಾರೆ. ಆಗ ಮತ್ತೊಬ್ಬ ಪೈಟಲ್, ''ನಾನು ಏನನ್ನೂ ಮಾಡಲಿಲ್ಲ'' ಎಂದು ಹೇಳಿದ್ದಾರೆ. ಇಬ್ಬರು ಪೈಲಟ್‌ಗಳ ನಡುವಿನ ಈ ಸಂಭಾಷಣೆ ಗಮನಿಸಿದರೆ, ಯಾರೂ ಉದ್ದೇಶಪೂರ್ವಕವಾಗಿ ಇಂಧನ ಸ್ವಿಚ್ ಕಡಿತಗೊಳಿಸಿಲ್ಲ ಎಂಬುದು ಸ್ಪಷ್ಟವಾಗುತ್ತದೆ.

ತುರ್ತು ಪರಿಸ್ಥಿತಿ ಅರಿವಿಗೆ ಬರುತ್ತಿದ್ದಂತೆಯೇ ವಿಮಾನದ ಸ್ವಯಂಚಾಲಿತ ವ್ಯವಸ್ಥೆಯನ್ನು ಸಕ್ರಿಯಗೊಳಿಸಲು ಪ್ರಯತ್ನಿಸಲಾಯಿತು. ಆದಾಗ್ಯೂ, ರಾಮ್ ಏರ್ ಟರ್ಬೈನ್ ಅಂದರೆ, ತುರ್ತು ಫ್ಯಾನ್ ಮತ್ತು ಎಪಿಯುನಂತಹ ವ್ಯವಸ್ಥೆಗಳನ್ನು ಸಕ್ರಿಯಗೊಳಿಸಿದ ನಂತರವೂ, ವಿಮಾನವನ್ನು ಅಪಘಾತದಿಂದ ರಕ್ಷಿಸಲು ಪೈಟಲ್‌ಗಳಿಗೆ ಸಾಧ್ಯವಾಗಲಿಲ್ಲ. ವಿಮಾನದಲ್ಲಿ ವಿದ್ಯುತ್ ಸರಬರಾಜಿನಲ್ಲಿ ಸಮಸ್ಯೆ ಇದ್ದಾಗ ಮಾತ್ರ ರಾಮ್ ಏರ್ ಟರ್ಬೈನ್ ಸಕ್ರಿಯವಾಗುತ್ತದೆ. ಇದರರ್ಥ, ಎಂಜಿನ್ ಸ್ಥಗಿತಗೊಂಡಿದ್ದು ವಿಮಾನದ ವಿದ್ಯುತ್ ಪೂರೈಕೆ ಮೇಲೂ ಪರಿಣಾಮ ಬೀರಿತ್ತು.

ಏನಿದು ರಾಮ್ ಏರ್ ಟರ್ಬೈನ್?

ಎರಡೂ ಎಂಜಿನ್‌ಗಳು ಅಥವಾ ವಿದ್ಯುತ್ ಸರಬರಾಜು ನಿಂತಾಗ ಅಥವಾ ಹೈಡ್ರಾಲಿಕ್ ವೈಫಲ್ಯ ಉಂಟಾದಾಗ ರಾಮ್ ಏರ್ ಟರ್ಬೈನ್ ಸ್ವಯಂಚಾಲಿತವಾಗಿ ಸಕ್ರಿಯಗೊಳ್ಳುತ್ತದೆ. ಇದು ವಿಮಾನವು ಎತ್ತರವನ್ನು ಕಾಯ್ದುಕೊಳ್ಳಲು ಸಹಾಯ ಮಾಡುತ್ತದೆ. ಇದು ವಿದ್ಯುತ್ ಉತ್ಪಾದಿಸಲು ಗಾಳಿಯ ವೇಗವನ್ನು ಬಳಸುತ್ತದೆ.

ಏರ್ ಇಂಡಿಯಾ ಬೋಯಿಂಗ್ 787–8 ವಿಮಾನ ಜೂನ್ 12 ರಂದು ಅಹಮದಾಬಾದ್‌ನಿಂದ ಲಂಡನ್ ಗ್ಯಾಟ್ವಿಕ್‌ಗೆ ಹೊರಟ ಸ್ವಲ್ಪ ಸಮಯದ ನಂತರ ವೈದ್ಯಕೀಯ ಕಾಲೇಜಿನ ಹಾಸ್ಟೆಲ್ ಆವರಣಕ್ಕೆ ಅಪ್ಪಳಿಸಿತ್ತು. ವಿಮಾನದಲ್ಲಿದ್ದ 241 ಪ್ರಯಾಣಿಕರು ಸೇರಿದಂತೆ 275 ಜನರು ಸಾವನ್ನಪ್ಪಿದ್ದರು.

### ಎಸ್ಕೇಪ್

ಆದ್ರೆ ಕಾರು ಚಾಲಕ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ರಸ್ತೆಗೆ ಅಡ್ಡಲಾಗಿ ಬಿದ್ದಿರುವ ಮರವನ್ನ ಈವರೆಗೂ ಬಿಬಿಎಂಪಿ, ಬೆಸ್ಕಾಂ ಅಧಿಕಾರಿಗಳು ತೆರವು ಮಾಡಿಲ್ಲ ಎಂದು ಜನ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅಲ್ಲದೇ ಎಂಜಿ ರೋಡ್ ಬಳಿಯ ಶಾಂತಲಾ ರಸ್ತೆಯಲ್ಲಿ ಮುಖ್ಯರಸ್ತೆಯಲ್ಲೂ ಬೃಹತ್ ಗಾತ್ರದ ಮರ ಬಿದ್ದು ವಾಹನ ಸವಾರರು ಪರದಾಡುವಂತಾಗಿತ್ತು.

**ಮುಂದಿನ 4 ದಿನ ಭಾರೀ ಮಳೆ ಎಚ್ಚರಿಕೆ:** ಇನ್ನೂ ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ ಮುಂದಿನ ನಾಲ್ಕು ದಿನಗಳ ಕಾಲ ಅಂದ್ರೆ ಜುಲೈ 15ರ ವರೆಗೆ ಭಾರೀ ಮಳೆಯಾಗಲಿದೆ ಎಂದು ರಾಜ್ಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ನೈಋತ್ಯ ಮುಂಗಾರು ತೀವ್ರತೆ ಹೆಚ್ಚಾಗಿದ್ದು, ಕರಾವಳಿ ಜಿಲ್ಲೆಗಳಲ್ಲಿ ಹೆಚ್ಚಿನ ಮಳೆಯಾಗುವ ಸಾಧ್ಯತೆಗಳಿವೆ. ಈಗಾಗಲೇ ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಇನ್ನುಳಿದ ಎಲ್ಲಾ ಜಿಲ್ಲೆಗಳಲ್ಲಿ ಸಾಧರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

### ಬಲಿ

ಗ್ರಾಮಸ್ಥರಲ್ಲಿ ಅಚ್ಚರಿ ಮೂಡಿಸಿದೆ.

ರಾಯಚೂರು ಜಿಲ್ಲೆಯಲ್ಲಿ ಇತ್ತೀಚಿಗೆ ಹೃದಯಾಘಾತದಿಂದ ಸಾವನ್ನಪ್ಪಿದ ಎರಡನೇ ಪ್ರಕರಣ ಇದಾಗಿದೆ. ಜುಲೈ 6 ರಂದು ಮಸ್ಕಿಯಲ್ಲಿ ಯುವಕ ಶರಣಬಸವ (32) ಸರಿಯಾದ ಸಮಯಕ್ಕೆ ಚಿಕಿತ್ಸೆ ಸಿಗದೆ ಹೃದಯಾಘಾತದಿಂದ ಸಾವನ್ನಪ್ಪಿದ್ದ.

# ಗ್ಯಾರಂಟಿ ಯೋಜನೆ: ಜಿಲ್ಲೆಯಲ್ಲಿ ಪರಿಣಾಮಕಾರಿ ಅನುಷ್ಠಾನ




**ರಾಮನಗರ:** ರಾಜ್ಯ ಸರ್ಕಾರದಿಂದ ನೀಡಲಾಗಿದ್ದ ಭರವಸೆಯಂತೆ ಎಲ್ಲಾ ಜಾತಿಯ ಹಾಗೂ ಎಲ್ಲಾ ವರ್ಗದ ಜನರಿಗೆ ಆರ್ಥಿಕವಾಗಿ ಅನುಕೂಲ ಮಾಡಿಕೊಡಲು ಪಂಚ ಗ್ಯಾರಂಟಿ ಯೋಜನೆಯನ್ನು ಜಾರಿಗೆ ತರಲಾಗಿದೆ ಹಾಗೂ ಆ ಯೋಜನೆಗಳು ಪರಿಣಾಮಕಾರಿಯಾಗಿ ಅನುಷ್ಠಾನಗೊಂಡಿವೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಕೆ. ರಾಜು ಅವರು ತಿಳಿಸಿದರು.

ಅವರು ಜು. 10ರಂದು ರಾಮನಗರ ಬಸ್ ನಿಲ್ದಾಣದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಆಯೋಜಿಸಲಾಗಿರುವ ಸರ್ಕಾರದ ಎರಡು ವರ್ಷಗಳ ಸಾಧನೆ, ಅಭಿವೃದ್ಧಿ ಕಾರ್ಯಕ್ರಮಗಳು ಮತ್ತು ಗ್ಯಾರಂಟಿ ಯೋಜನೆಗಳನ್ನು ಬಿಂಬಿಸುವ ವಸ್ತು ಪ್ರದರ್ಶನಕ್ಕೆ ಚಾಲನೆ ನೀಡಿ ಮಾತನಾಡಿದರು.

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಬಡ ಹಾಗೂ ಮಧ್ಯಮ ವರ್ಗದ ಜನರಿಗೆ ಹಲವು ರೀತಿಯಲ್ಲಿ ನೆರವಾಗಿವೆ. ರೈತರು, ವಿದ್ಯಾರ್ಥಿಗಳು, ಹಿರಿಯ ನಾಗರೀಕರು, ಮಹಿಳೆಯರು ಸೇರಿದಂತೆ ಎಲ್ಲಾ ವರ್ಗದ ಜನರು ಲಾಭ ಪಡೆಯುತ್ತಿದ್ದಾರೆ, ಅದರೊಂದಿಗೆ ಸರ್ಕಾರ ಅಭಿವೃದ್ದಿಗೂ ಒತ್ತು ನೀಡುತ್ತಿದೆ, ಮಹಿಳೆಯರ ಉಚಿತ ಪ್ರಯಾಣದ ಶಕ್ತಿ ಯೋಜನೆಯಲ್ಲಿ ಇದುವರೆಗೆ ಸುಮಾರು 500 ಕೋಟಿ ಮಹಿಳೆಯರು ಪ್ರಯಾಣಿಸಿದ್ದಾರೆ. ಆದ್ದರಿಂದ ಜು. 14 ರಂದು ಈ ಕುರಿತು ರಾಮನಗರದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ಖಾಸಗಿ ಹಾಗೂ ದಿನಗೂಲಿ ಕೆಲಸ ಮಾಡುವ ಮಹಿಳೆಯರಿಗೆ ಈ ಯೋಜನೆ ಉಪಯುಕ್ತವಾಗಿ ಇದರಿಂದ ಮಹಿಳೆಯರಿಗೆ 1,500 ರಿಂದ 3,000 ರೂ.ಗಳ ವರೆಗೆ ಹಣ ಉಳಿತಾಯವಾಗುತ್ತಿದೆ ಎಂದರು.

ಗೃಹಲಕ್ಷ್ಮೀ ಯೋಜನೆಯಿಂದ ಮನೆ ಒಡತಿಗೆ ಪ್ರತೀ ತಿಂಗಳು ಅವರ ಖಾತೆಗೆ 2,000 ರೂ.ಗಳು ಅವರ ಖಾತೆಗೆ ಬರುತ್ತಿದೆ. ಆರ್ಥಿಕವಾಗಿ, ಸಾಮಾಜಿಕವಾಗಿ ಈ ಯೋಜನೆಯಿಂದ ಮಹಿಳೆಯರಿಗೆ ಅನುಕೂಲವಾಗುತ್ತಿದೆ ಎಂದು ಹೇಳಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ರವಿರಾಜ್ ಎಚ್.ಜಿ. ಅವರು ಮಾತನಾಡಿ ವಸ್ತು ಪ್ರದರ್ಶನ ಆಕರ್ಷಣೀಯ ಹಾಗೂ ಮಾಹಿತಿಯುಕ್ತವಾಗಿದೆ, ರಾಜ್ಯ ಸರ್ಕಾರ ನಾಗರೀಕರಿಗೆ ನೀಡಿರುವ ಸವಲತ್ತುಗಳನ್ನು ಇಲ್ಲಿ ನೋಡಬಹುದಾಗಿದ್ದು, ಸಾರ್ವಜನಿಕರಿಗೆ ಉಚಿತ ಪ್ರವೇಶವಿದ್ದು, ಜಿಲ್ಲೆಯ ನಾಗರೀಕರು ಜು. 12ರ ವರೆಗೆ ನಗರದ ಬಸ್ ನಿಲ್ದಾಣದಲ್ಲಿ ಆಯೋಜಿಸಿರುವ ಈ ವಸ್ತು ಪ್ರದಶನವನ್ನು ವೀಕ್ಷಿಸಿ, ಸರ್ಕಾರದ ಗ್ಯಾರಂಟಿ ಯೋಜನೆಗಳ ಕುರಿತು ಮಾಹಿತಿ ಪಡೆದುಕೊಳ್ಳುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಚೇತನ್ ಕುಮಾರ್, ಜಿಲ್ಲಾ ಕೆ.ಎಸ್.ಆರ್.ಟಿ.ಯ ವಿಭಾಗೀಯ ನಿಯಂತ್ರಕರಾದ ಶ್ರೀಹರಿಬಾಬು, ಲೆಕ್ಕಾಧಿಕಾರಿ ಶಿವಾಜಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ರಮೇಶ್ ಬಾಬು, ಕೆ.ಎಸ್.ಆರ್.ಟಿ.ಸಿ ಸಿಬ್ಬಂದಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ರಾಜ್ಯದಲ್ಲಿದ್ದಾರೆ 1ಕೋಟಿ 60 ಲಕ್ಷ ಅಸಂಘಟಿತ ಕಾರ್ಮಿಕರು

## ಕಾರ್ಮಿಕರ ಸಾಮಾಜಿಕ ಭದ್ರತೆಗೆ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ ಜಾರಿ:ಸಚಿವ ಸಂತೋಷ್ ಲಾಡ್

**ಬೆಂಗಳೂರು ಗ್ರಾಮಾಂತರ:** ರಾಜ್ಯ ಸರ್ಕಾರವು ಅಸಂಘಟಿತ ವಲಯಗಳಲ್ಲಿ ದುಡಿಯುತ್ತಿರುವ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ ಅನುಷ್ಠಾನ ಗೊಳಿಸಲಾಗಿದ್ದು ಈ ಯೋಜನೆಯಿಂದ 23 ಅಸಂಘಟಿತ ವರ್ಗದ ಕಾರ್ಮಿಕರಿಗೆ ಅನುಕೂಲವಾಗಲಿದೆ ಎಂದು ಕಾರ್ಮಿಕ ಸಚಿವರಾದ ಸಂತೋಷ್ ಲಾಡ್ ಅವರು ಹೇಳಿದರು.

ಕಾರ್ಮಿಕ ಇಲಾಖೆಯ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಸಾರಿಗೆ ಇಲಾಖೆ, ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತಿ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವುಗಳ ಸಂಯುಕ್ತಾಶ್ರಯದಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕಿನ ಓಬದೇನಹಳ್ಳಿಯಲ್ಲಿ ನಿರ್ಮಿಸಿರುವ ಶ್ರಮಿಕ ತಾತ್ಕಾಲಿಕ ವಸತಿ ಸಮುಚ್ಚಯ ಗಳ ಉದ್ಘಾಟನೆ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅಸಂಘಟಿತ ವರ್ಗಗಳ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಮತ್ತು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ 91 ಅಸಂಘಟಿತ ವಲಯಗಳನ್ನು ಗುರ್ತಿಸಲಾಗಿದ್ದು ಕಾರ್ಮಿಕ ಇಲಾಖೆಯ ಮಂಡಳಿಗಳ ಮೂಲಕ ಹಲವು ಸೌಲಭ್ಯ ಒದಗಿಸುತ್ತಿದ್ದೇವೆ. ಕಾರ್ಮಿಕರಿಗೆ ಪಿಂಚಣಿ ಸೌಲಭ್ಯ, ಹೆರಿಗೆ ಸೌಲಭ್ಯ, ಅಂತ್ಯಕ್ರಿಯೆ ವೆಚ್ಚ, ಶೈಕ್ಷಣಿಕ ಸಹಾಯಧನ, ವೈದ್ಯಕೀಯ, ಅಪಘಾತ ಮದುವೆ ಸಹಾಯಧನ, ತಾಯಿ ಮಗು ಸಹಾಯ ಹಸ್ತ ಮುಂತಾದ ಸೌಲಭ್ಯಗಳು ನೀಡಲಾಗುತ್ತಿದೆ. ರಾಜ್ಯ ಅಸಂಘಟಿತ ಸಾಮಾಜಿಕ ಭದ್ರತಾ ಮಂಡಳಿಯಡಿ 23 ಅಸಂಘಟಿತ ಕಾರ್ಮಿಕ ವರ್ಗಗಳ ಕಾರ್ಮಿಕರಿಗೆ ಉಚಿತವಾಗಿ ನೋಂದಾಯಿಸಿ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದೆ. ಅಸಂಘಟಿತ ವಲಯದ ಗಿಗ್ ಕಾರ್ಮಿಕರು, ಸಿನಿಮಾ ಮತ್ತು ಸಾಂಸ್ಕೃತಿಕ ಕಾರ್ಯಕರ್ತರು, ಪತ್ರಿಕಾ ವಿತರಕ ಕಾರ್ಮಿಕರು ಹಾಗೂ ಖಾಸಗಿ ವಾಣಿಜ್ಯ ಸಾರಿಗೆ ವಲಯದ ಕಾರ್ಮಿಕರ ಕಲ್ಯಾಣಕ್ಕಾಗಿ ಪ್ರತ್ಯೇಕ ಯೋಜನೆ ರೂಪಿಸಲಾಗಿದೆ ಎಂದರು.



### ಗಿಗ್ ಕಾರ್ಮಿಕರಿಗೆ ವಿಮಾ ಯೋಜನೆ

**ಕರ್ನಾಟಕ ಸರ್ಕಾರವು ರಾಜ್ಯದ ಗಿಗ್ ಕಾರ್ಮಿಕರಿಗಾಗಿ (ಸ್ವತಂತ್ರ ಉದ್ಯೋಗಿ) ವಿಶೇಷ ವಿಮಾ ಯೋಜನೆಯನ್ನು ಜಾರಿಗೊಳಿಸಿದೆ. ಆನ್ಲೈನ್ ಮೂಲಕ ಸರಕು ಸೇವೆ ಒದಗಿಸುವ ಸ್ವಿಗ್ಗಿ, ಜೊಮಾಟೋ, ಅಮೆಜಾನ್, ಫ್ಲಿಪ್ಕಾರ್ಟ್, ಬಿಗ್ಬಾಸ್ಕೆಟ್ ಮುಂತಾದ ಇ-ಕಾಮರ್ಸ್ ಸಂಸ್ಥೆಗಳಲ್ಲಿ ಡೆಲಿವರಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಹಲವು ಪ್ರಯೋಜನಗಳನ್ನು ನೀಡುತ್ತಿದೆ. ಅಪಘಾತಾದಲ್ಲಿ ಆಕಸ್ಮಿಕವಾಗಿ ಸತ್ತಿರುವವರಿಗೆ ಮೊದಲು ಅವರಿಗೆ 2ಲಕ್ಷ ನೀಡಲಾಗಿತ್ತಿತ್ತು, ಈಗ 5 ಲಕ್ಷ ಕೊಡುತ್ತಿದ್ದೇವೆ. ಇದರ ಉದ್ದೇಶ ಅವರ ಕುಟುಂಬಕ್ಕೆ ಆರ್ಥಿಕವಾಗಿ ಅವರ ಜೀವನ ನಡೆಸಲು ಆಸರೆಯಾಗಬೇಕು ಎನ್ನುವುದು ನಮ್ಮ ಆಶಯ, ಆದ್ದರಿಂದ ನಾವು ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ ಎಂದು ಸಚಿವರು ಹೇಳಿದರು.**

### ಆಶಾದೀಪ ಯೋಜನೆ

**ರಾಜ್ಯ ಸರ್ಕಾರವು, ಖಾಸಗಿ ವಲಯದ ಕೈಗಾರಿಕೆ, ಕಾರ್ಖಾನೆಗಳಲ್ಲಿ ಉದ್ಯೋಗಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ಹೆಚ್ಚು ಹೆಚ್ಚು ನೇಮಕಾತಿ ಮಾಡಿಕೊಳ್ಳಲು ಮಾಲೀಕರನ್ನು/ ಉದ್ಯೋಗದಾತರನ್ನು ಉತ್ತೇಜಿಸುವ ದೃಷ್ಟಿಯಿಂದ ಹಾಗೂ ಈ ಮೂಲಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಖಾಸಗಿ ವಲಯದಲ್ಲಿ ಉದ್ಯೋಗಾವಕಾಶ ಪಡೆಯಲು ಅನುಕೂಲವಾಗುವಂತೆ ''ಆಶಾದೀಪ ಯೋಜನೆ ಜಾರಿಗೊಳಿಸಲಾಗಿದೆ. ಈ ಯೋಜನೆಯಡಿ ಮಾಲೀಕರು ಪಾವತಿಸುವ ಇ.ಎಸ್.ಐ. ಮತ್ತು ಇ.ಪಿ.ಎಫ್. ವಂತಿಕೆ ಮರುಪಾವತಿ ಮಾಡಲಾಗುವುದು. ಅಪ್ರೆಂಟಿಸ್ ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳ ಶಿಷ್ಯವೇತನ ಮರುಪಾವತಿ ಮಾಡಲಾಗುವುದು. ಕೌಶಲ್ಯಾಭಿವೃದ್ಧಿ ಇಲಾಖೆಯ ಮುಖಾಂತರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಕೌಶಲ್ಯ ತರಬೇತಿಗಳನ್ನು ಏರ್ಪಡಿಸಿ, ಸ್ವಾವಲಂಭಿಗಳಾಗಲು ಉತ್ತೇಜನ ನೀಡಲಾಗುತ್ತದೆ ಎಂದರು.ೊಡ್ಡಬಳ್ಳಾಪುರದಲ್ಲಿ ಇಎಸ್ಐ ಆಸ್ಪತ್ರೆ ಕಟ್ಟಡ ನಿರ್ಮಾಣಗೊಂಡಿದ್ದು ಅದಕ್ಕೆ ಬೇಕಾದ ಸೌಲಭ್ಯಗಳು ಮತ್ತು ಉಪಕರಣಗಳು ಸರಬರಾಜು ಮಾಡಬೇಕಿದೆ. ಹಾಗಾಗಿ ನಾವು ಕೇಂದ್ರ ಸರ್ಕಾರದ ಸಚಿವರೊಂದಿಗೆ ಇದರ ಬಗ್ಗೆ ಚರ್ಚಿಸಿ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು ಎಂದರು. ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್ ಮುನಿಯಪ್ಪ ಅವರು ವಸತಿ ಸಮುಚ್ಚಯಗಳನ್ನು ಉದ್ಘಾಟಿಸಿ ಮಾತನಾಡಿ ಅಸಂಘಟಿತ ಕಾರ್ಮಿಕರಿಗೆ ವಿಶೇಷ ಸೌಲಭ್ಯಗಳನ್ನು ನಮ್ಮ ಸರ್ಕಾರ ನೀಡುತ್ತಿದ್ದ ಕಾರ್ಮಿಕರ ಸಚಿವರು ಒಳ್ಳೆಯ ಕೆಲಸ ಮಾಡುತ್ತಿದ್ದಾರೆ. ಜಿಲ್ಲೆಯಾದ್ಯಂತ ಕೈಗಾರಿಕೆಗಳು ಬೃಹದಾಕಾರವಾಗಿ ಬೆಳೆಯುತ್ತಿವೆ. ಹಲವಾರು ಕುಟುಂಬಗಳು ತಮ್ಮ ಜಮೀನು ಕಳೆದುಕೊಂಡಿದ್ದಾರೆ. ಸ್ಥಳೀಯರಿಗೆ ಹೆಚ್ಚಿನ ಉದ್ಯೋಗಾವಕಾಶ ಸಿಗಬೇಕು. ಈ ನಿಟ್ಟಿನಲ್ಲಿ ಈ ಭಾಗದಲ್ಲಿ ಒಂದು ತರಬೇತಿ ಕೇಂದ್ರ ಸ್ಥಾಪಿಸಿದರೆ ಉತ್ತಮ. ಇದರಿಂದ ಹಲವು ಅಭ್ಯರ್ಥಿಗಳು ಕೌಶಲ್ಯಾಭಿವೃದ್ಧಿ ತರಬೇತಿ ಪಡೆದು ಉದ್ಯೋಗ ಪಡೆಯುವಂತಾಗುತ್ತದೆ. ಇದರ ಬಗ್ಗೆ ಸರ್ಕಾರದ ಹಂತದಲ್ಲಿ ತೀರ್ಮಾನ ಕೈಗೊಳ್ಳಬೇಕು ಎಂದರು. ದೊಡ್ಡಬಳ್ಳಾಪುರ ಶಾಸಕರಾದ ಧೀರಜ್ ಮುನಿರಾಜು ಅವರು ಮಾತನಾಡಿ ದೊಡ್ಡಬಳ್ಳಾಪುರದಲ್ಲಿ ನೇಕಾರರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದಾರೆ, 25 ಸಾವಿರಕ್ಕೂ ಹೆಚ್ಚಿನ ಮಗ್ಗಗಳು ಇವೆ. 3 ಲಕ್ಷಕ್ಕು ಅಧಿಕ ಕಾರ್ಮಿಕರು ವಲಸೆ ಬಂದು ದೊಡ್ಡಬಳ್ಳಾಪುರದಲ್ಲಿ ಕೆಲಸ ಮಾಡುತ್ತಿದ್ದಾರೆ. ಹಾಗಾಗಿ ಕಾರ್ಮಿಕರಿಗೆ ಭದ್ರತೆ ಸಿಗುವಂತೆ ಮಾಡಬೇಕು ಜೊತೆಗೆ ಸರ್ಕಾರ ನಿಗದಿ ಮಾಡಿರುವ ಸ್ಥಳೀಯ ಮಟ್ಟದ ಕಾರ್ಮಿಕರಿಗೆ ಉದ್ಯೋಗದಲ್ಲಿ 70% ಅವಕಾಶ ಕಲ್ಪಿಸಿರುವುದು ನಿರುದ್ಯೋಗ ನಿವಾರಣೆಗೆ ಹೆಚ್ಚು ಅನುಕೂಲವಾಗಿದೆ. ಅತೀ ಶೀಘ್ರವಾಗಿ ಇ.ಎಸ್.ಐ ಆಸ್ಪತ್ರೆ ಉದ್ಘಾಟನೆಯಾಗಬೇಕು ಜೊತೆಗೆ ಕಾರ್ಮಿಕ ಮಕ್ಕಳಿಗೆ ವಸತಿ ಶಾಲೆಯನ್ನು ನೀಡುವಂತೆ ಸಚಿವರಲ್ಲಿ ಮನವಿ ಮಾಡಿದರು.**

**ಕಾರ್ಯಕ್ರಮದಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಕಾರ್ಯದರ್ಶಿ ಭಾರತಿ, ಸದಸ್ಯರಾದ ರಮೇಶ್, ಜಾನಿ, ಬಸಪ್ಪ, ಶ್ರೀಯಾನ್ಸ್, ವಿಜಯಕುಮಾರ್, ಕಾರ್ಮಿಕರ ಇಲಾಖೆ ಆಯುಕ್ತರಾದ ಗೋಪಾಲಕೃಷ್ಣ, ಜಿಲ್ಲಾಧಿಕಾರಿ ಎ.ಬಿ ಬಸವರಾಜು, ಉಪವಿಭಾಗಾಧಿಕಾರಿ ದುರ್ಗ ಶ್ರೀ, ಜಿಲ್ಲಾ ಕಾರ್ಮಿಕ ಅಧಿಕಾರಿ ಹರ್ಷವರ್ಧನ್, ಮಾಜಿ ಶಾಸಕರಾದ ವೆಂಕಟರಮಣಯ್ಯ, ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಚುಂಚೇಗೌಡ, ತಾಲ್ಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷ ವಿಶ್ವನಾಥ ಸೇರಿದಂತೆ ಅಧಿಕಾರಿಗಳು, ಕಾರ್ಮಿಕರು, ಸಾರ್ವಜನಿಕರು ಉಪಸ್ಥಿತರಿದ್ದರು.**



**ಮಿಸ್ ಯೂನಿವರ್ಸ್ ಕರ್ನಾಟಕ ಸ್ಪರ್ಧೆಯಲ್ಲಿ ವಿಜೇತರಾಗಿರುವ ಚಿಕ್ಕಮಗಳೂರಿನ ವಂಶಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ನವದೆಹಲಿಯ ಕರ್ನಾಟಕ ಭವನದಲ್ಲಿ ಭೇಟಿಯಾದರು. ಆಗಸ್ಟ್ 17ರಂದು ಜೈಪುರದಲ್ಲಿ ನಡೆಯಲಿರುವ ಮಿಸ್ ಯೂನಿವರ್ಸ್ ಇಂಡಿಯಾ ಸ್ಪರ್ಧೆಯಲ್ಲಿ ಭಾಗವಹಿಸಲಿರುವ ವಂಶಿ ಅವರಿಗೆ ಮುಖ್ಯಮಂತ್ರಿಗಳು ಶುಭ ಕೋರಿದರು. ಈ ಸಮಯದಲ್ಲಿ ಸಚಿವರಾದ ಬಿ.ಎಸ್. ಸುರೇಶ್ (ಬೈರತಿ) ಅವರು ಉಪಸ್ಥಿತರಿದ್ದರು.**

# ಮಹಿಳೆಯರಿಗೆ ಸರ್ಕಾರ ಪ್ರೋತ್ಸಾಹ ನೀಡಲಿ

**ಚಿತ್ರದುರ್ಗ:** ಮಹಿಳೆಯರು ಮನೆಯಿಂದಲೇ ದುಡಿಮೆಯೇ ದಾರಿಯನ್ನು ಕಂಡುಕೊಂಡು, ಸ್ವಉದ್ಯೋಗಗಳನ್ನ ಮಾಡಿಕೊಂಡು, ಸ್ವಾವಲಂಬಿ ಜೀವನ ಮಾಡುವಂತಹ ಹೆಣ್ಣು ಮಕ್ಕಳಿಗೆ, ಸರ್ಕಾರ, ಸಾರ್ವಜನಿಕರು ಮತ್ತು ಸಮಾಜ ಪ್ರೋತ್ಸಾಹಿಸಿದರೆ ಮಾತ್ರ ನಿರುದ್ಯೋಗ ಸಮಸ್ಯೆಯನ್ನು ನಿವಾರಿಸಲು ಸಾಧ್ಯ. ಮನೆಯ ಒಳಗಡೆ ಉದ್ಯೋಗ ಸ್ಥಾಪಿಸಿಕೊಂಡು, ಜೀವನ ನಿರ್ವಹಿಸುವ ನಿಟ್ಟಿನಲ್ಲಿ ಬಹಳಷ್ಟು ಮಹಿಳೆಯರು ಪ್ರಯತ್ನಿಸುತ್ತಿದ್ದು ಅಂತವರಿಗೆ ಸರ್ಕಾರ, ಸಂಘ-ಸಂಸ್ಥೆಗಳು, ಸಾರ್ವಜನಿಕರು ಹೆಚ್ಚಿನ ಪ್ರೋತ್ಸಾಹ ನೀಡಿ, ಆ ಮಹಿಳೆಯರಿಗೆ ಹೆಚ್ಚಿನ ಆದ್ಯತೆ ನೀಡಿದರೆ, ಸಣ್ಣ ಸಣ್ಣ ಗೃಹ ಉದ್ಯೋಗಗಳು ಸೃಷ್ಟಿಯಾಗುತ್ತದೆ ಮತ್ತು ಲಕ್ಷಾಂತರ ಮಹಿಳೆಯರು ಮನೆಯಿಂದಲೇ ದುಡಿಮೆಯ ದಾರಿಯನ್ನು ಕಂಡುಕೊಳ್ಳುತ್ತಾರೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಸ್ವಾಮಿ ಅವರು ಕರೆ ನೀಡಿದ್ದಾರೆ.

ಸಿ.ಕೆ.ಪುರದ ಕೆಳಗೋಟೆಯಲ್ಲಿ ಶ್ರೀಮತಿ ಅಮುದ ಎಂಬ ಮಹಿಳೆ ಸ್ಥಾಪಿಸಿದ್ದ ಎ.ವಿ.ಎಸ್ ಗಾರ್ಮೆಂಟ್ಸ್ ಮತ್ತು ಅಡುಗೆ ಮತ್ತು ಆಹಾರ ಸೇವೆ, ಬ್ಯಾಂಕ್ ಉದ್ಯೋಗಗಳಿಗೆ ಡಬ್ಬಿ ಊಟ ವಿತರಣೆ, ಮನೆಯಲ್ಲೇ ಟೈಲರಿಂಗ್ ಮಾಡಿ, ಜೀವನ ನಿರ್ವಹಿಸುತ್ತಿರುವ ಇವರ ಸಂಸ್ಥೆಗೆ ಭೇಟಿ ನೀಡಿದಾಗ ಉತ್ತರಿಸುತ್ತಿದ್ದರು.

ಸಣ್ಣ ಸಣ್ಣ ಸಂಸ್ಥೆಗಳನ್ನ ಬೆಳೆಸಿಕೊಂಡು, ಅದರ ಮೂಲಕ ಇನ್ನೊಂದಿಷ್ಟು ಜನರಿಗೆ ಉದ್ಯೋಗಗಳನ್ನು ನೀಡಿ, ಮಹಿಳೆಯರು ಸ್ವತಹ ದುಡಿಮೆಯನ್ನು ಮಾಡಿಕೊಂಡು, ಜೀವನವನ್ನು ನಿರ್ವಹಿಸಿ, ಮಕ್ಕಳನ್ನ ಓದಿಸಿ, ಸಂಸಾರವನ್ನು ನಿಭಾಯಿಸುವುದು ಜಾಣತನದ ಕೆಲಸವಾಗಿದೆ, ಆ ನಿಟ್ಟಿನಲ್ಲಿ ಮಹಿಳೆಯರಿಗೆ ಹೆಚ್ಚಿನ ಪ್ರೋತ್ಸಾಹ ಅಗತ್ಯವಾಗಿದೆ. ಸರ್ಕಾರ ಇಂತಹ ಮಹಿಳೆಯರಿಗೆ ಹೆಚ್ಚಿನ ಪ್ರೋತ್ಸಾಹವನ್ನು ನೀಡಿ, ಅನುದಾನವನ್ನು ನೀಡಿ, ಅವರಿಗೆ ಬೇಕಾದಂತ ಉಪಕರಣಗಳನ್ನು, ತರಬೇತಿಯನ್ನು, ಮಾರುಕಟ್ಟೆಯನ್ನು ಸೃಷ್ಟಿಸಿ, ಸಾಲ ಸೌಲಭ್ಯಗಳನ್ನು ನೀಡಿ, ಬಡ್ಡಿ ರಹಿತವಾಗಿ ಒಂದಿಷ್ಟು ಪ್ರೋತ್ಸಾಹ ನೀಡಿದಾಗ, ಇಂತಹ ಮಹಿಳೆಯರು ಛಲದಿಂದ ಮುನ್ನುಗ್ಗಿ, ಸಮಾಜವನ್ನು ಪರಿವರ್ತಿಸಿ, ಇನ್ನೊಂದಿಷ್ಟು ಜನರಿಗೆ ಮಾದರಿಯಾಗುತ್ತಾರೆ ಎಂದರು.

ಮಹಿಳೆಯರು ಮನೆಯಲ್ಲೇ ಅಡುಗೆ ಮಾಡಿ, ಅವುಗಳನ್ನು ಬ್ಯಾಂಕ್ ಉದ್ಯೋಗಿಗಳಿಗೆ, ಕಾಲೇಜಿನಲ್ಲಿ ಕೆಲಸ ಮಾಡುವ ಸಿಬ್ಬಂದಿಗಳಿಗೆ, ಕಾರ್ಯಕ್ರಮಗಳಿಗೆ, ಆಹಾರ ಪದಾರ್ಥಗಳನ್ನ, ಸ್ವಚ್ಛವಾದ, ಆರೋಗ್ಯಪೂರ್ಣವಾದಂತ ಆಹಾರ ಪದಾರ್ಥವನ್ನು ಒದಗಿಸುವುದು, ಸಮಯಕ್ಕೆ ಸರಿಯಾಗಿ ಒದಗಿಸುವುದು, ಜಾಣತನದ ಕೆಲಸವಾಗಿದೆ. ಅಂತಹ ಮಹಿಳೆಯರಿಗೆ ಹೆಚ್ಚಿನ ಪ್ರೋತ್ಸಾಹ ನೀಡಿದರೆ, ಇನ್ನೊಂದಿಷ್ಟು ಗ್ರಾಮೀಣ ಉದ್ಯೋಗಗಳು, ಗೃಹ ಉದ್ಯೋಗಗಳು ಹೆಚ್ಚಾಗಿ, ಭಾರತದಲ್ಲಿರುವ ಬಡತನ, ಶೋಷಣೆ, ಅಸಮಾನತೆಯನ್ನು ನಿವಾರಣೆ ಮಾಡಲು ಅನುಕೂಲಕರವಾಗುತ್ತದೆ ಎಂದರು.

ಬಹಳಷ್ಟು ಮಹಿಳೆಯರು ಹೊಸಲು ದಾಟದಲೇ ಮನೆಯಿಂದಲೇ ದುಡಿಮೆ ಮಾಡುವಂತಹ ವ್ಯವಸ್ತೆ ಇದ್ದಂತಹ ಭಾರತ ದೇಶದಲ್ಲಿ, ಎಲ್ಲಾ ಕೈಗಾರಿಕೋದ್ಯಮಗಳು ಬಂದಾಗ, ಮನೆಯಲ್ಲಿದ್ದ ಉದ್ಯೋಗಗಳೆಲ್ಲ ನಾಶವಾಗಿ, ಮಹಿಳೆಯರು ಹೊರಗೆ ಬಂದು ದುಡಿಯುವಂಥ ಪರಿಸ್ಥಿತಿ ನಿರ್ಮಾಣವಾಯಿತು. ಆಗ ಮನೆಯಲ್ಲಿ ಮಕ್ಕಳು, ಅತ್ತೆ ಮಾವ, ವಯಸ್ಸಾದಂತವರನ್ನ, ವೃದ್ಧರನ್ನ, ರೋಗಿಗಳನ್ನ ನೋಡಿಕೊಳ್ಳಲು ಯಾರು ಇಲ್ಲದೆ ಮನೆಗಳು ಅನಾಥಾಶ್ರಮಗಳಾದ ರೀತಿಯಲ್ಲಿ ಆಗಿ, ಎಲ್ಲರನ್ನೂ ಸಹ ವೃದ್ದಾಶ್ರಮಕ್ಕೆ ಸೇರಿಸುವ ವ್ಯವಸ್ಥೆ ನಿರ್ಮಾಣವಾಯಿತು. ಹಾಗಾಗಿ ಮನೆಯಲ್ಲಿ ಶಾಂತಿ, ನೆಮ್ಮದಿ, ನೆಲೆಸಬೇಕೆಂದರೆ ಮಹಿಳೆಯರು ಮನೆಯಿಂದಲೇ ದುಡಿಮೆ ಮಾಡಿ, ಆರ್ಥಿಕವಾಗಿ ಸಮೃದ್ಧಿ ಹೊಂದಬೇಕು ಎಂದು ಗಾಂಧೀಜಿಯವರು ಅಂದೇ ಕರೆ ನೀಡಿದ್ದರು. ಅದಕ್ಕಾಗಿ ಗಾಂಧೀಜಿಯವರು ಮನೆ ಮನೆಯಲ್ಲೂ ಚರಕ, ಖಾದಿ, ಕೈಯಲ್ಲಿ ನೂಲುವುದು, ಬಟ್ಟೆ ಮಾಡುವುದು, ವಿತರಣೆ ಮಾಡುವುದರ ಬಗ್ಗೆ ಆಂದೋಲನ ರೂಪಿಸಿದ್ದರು. ಈಗ ನಾವು ಅವುಗಳನ್ನೆಲ್ಲ ಮರೆತು, ಮಹಿಳೆಯರಿಗೆ ನಿರುದ್ಯೋಗ ಸಮಸ್ಯೆಯನ್ನು ಸೃಷ್ಟಿ ಮಾಡಿ, ಅವರಿಗೆ ತಿಂಗಳಿಗೆ ಇಷ್ಟು ಹಣ ಎಂದು, ಗೃಹಲಕ್ಷ್ಮಿ ಯೋಜನೆಯಲ್ಲಿ ಹಣ ನೀಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಅದಕ್ಕಿಂತ ಮಿಗಿಲಾಗಿ ಮಹಿಳೆಯರಿಗೆ ಟೈಲರಿಂಗ್, ಆಹಾರ ಸಾಮಗ್ರಿಗಳನ್ನು ಉತ್ಪಾದನೆ ಮಾಡುವುದು, ಬಟ್ಟೆ ತಯಾರಿಕೆ ಮಾಡುವುದು, ಬಟ್ಟೆ ಹೊಲಿಗೆ ಮಾಡುವುದು, ಫ್ಯಾಶನ್ ಡಿಸೈನಿಂಗ್ ಮತ್ತು ಆರೋಗ್ಯಕ್ಕೆ ಬೇಕಾದಂತ ಸಾಮಗ್ರಿಗಳನ್ನು ತಯಾರು ಮಾಡುವುದು, ಪಾರಂಪರಿಕ ವೈದ್ಯಕೀಯ ವೃತ್ತಿಗಳಲ್ಲಿ ಅಳವಡಿಸಿಕೊಂಡು ಔಷಧಿಗಳನ್ನು ತಯಾರು ಮಾಡಿಕೊಳ್ಳುವುದನ್ನು ಕಲಿಸಿಕೊಟ್ಟರೆ, ಖಂಡಿತ ಮಹಿಳೆರು ಸ್ವಂತ ಕಾಲ ಮೇಲೆ ನಿಂತು, ಸರ್ಕಾರಕ್ಕೆ ಬೀಳುವ ಒಂದಿಷ್ಟು ಒತ್ತಡವನ್ನ ಕಡಿಮೆಗೊಳಿಸುತ್ತಾರೆ ಎಂದರು. ಚಿತ್ರದುರ್ಗದ ಮಹಿಳಾ ಉದ್ಯೋಗಿಗಳಿಗೆ ಬ್ಯಾಂಕ್ ನಲ್ಲಿ ಕೆಲಸ ಮಾಡುವ ಉದ್ಯೋಗಗಳಿಗೆ, ಮನೆ ಊಟವನ್ನು ಸಮಯಕ್ಕೆ ಸರಿಯಾಗಿ ತಲುಪಿಸುವಂತಹ ವ್ಯವಸ್ಥೆ ಕಲ್ಪಿಸುತ್ತಿರುವ ಶ್ರೀಮತಿ ಅಮುದರವರು, ಹೆಚ್ಚಿನ ಮಟ್ಟದಲ್ಲಿ ಯಶಸ್ಸನ್ನ ಗಳಿಸಲಿ ಎಂದು ಹಾರೈಸಿದರು.

## ಮನೆ ಪೂರ್ಣಗೊಳಿಸಲು ಸೂಚನೆ

**ರಾಮನಗರ:** ಕನಕಪುರ ನಗರಸಭೆ ವ್ಯಾಪ್ತಿಯಲ್ಲಿ 2010-11ನೇ ಸಾಲಿನಿಂದ 2015-16 ನೇ ಸಾಲಿನವರೆಗೆ ಡಾ. ಬಿ.ಆರ್ ಅಂಬೇಡ್ಕರ್ ನಿವಾಸ್ ಯೋಜನೆ ಹಾಗೂ ವಾಜಪೇಯಿ ನಗರ ವಸತಿ ಯೋಜನೆಗಳಲ್ಲಿ ಫಲಾನುಭವಿಯಾಗಿ ಆಯ್ಕೆಯಾಗಿ ಇದುವರೆಗೂ ಮನೆಯನ್ನು ನಿರ್ಮಿಸದೆ ಹಾಗೂ ವಿವಿಧ ಹಂತಗಳಲ್ಲಿ ಮನೆ ನಿರ್ಮಿಸಿ ಪೂರ್ಣಗೊಳಿಸದೇ ಇರುವ ಫಲಾನುಭವಿಗಳು ಮನೆ ನಿರ್ಮಾಣ ಪೂರ್ಣಗೊಳಿಸಿ ಜಿ.ಪಿ.ಎಸ್ ಗೆ ಒಳಪಡಿಸಬೇಕು.

ರಾಜೀವ್ ಗಾಂಧಿ ವಸತಿ ನಿಗಮದ ವ್ಯವಸ್ಥಾಪಕ ನಿರ್ದೇಶಕರ ಸೂಚನೆ ಮೇರೆಗೆ ಫಲಾನುಭವಿಗಳಿಗೆ ಜು. 30 ರೊಳಗೆ ಮನೆ ನಿರ್ಮಾಣ ಪೂರ್ಣಗೊಳಿಸಿ ಜಿ.ಪಿ.ಎಸ್ ಗೆ ಒಳಪಡಿಸಬೇಕು. ತಪ್ಪಿದ್ದಲ್ಲಿ ಫಲಾನುಭವಿಗೆ ಆಯ್ಕೆಯನ್ನು ರದ್ದುಗೊಳಿಸಿ ಸರ್ಕಾರದಿಂದ ಫಲಾನುಭವಿಗೆ ಬಿಡುಗಡೆಯಾದ ಸಹಾಯಧನವನ್ನು ಭೂ ಕಂದಾಯ ಬಾಕಿ ವಸೂಲಿ ಮಾಡಿ ಸರ್ಕಾರಕ್ಕೆ ಜಮೆ ಮಾಡಲಾಗುವುದು.

ಹೆಚ್ಚಿನ ಮಾಹಿತಿಗೆ ಕನಕಪುರ ನಗರಸಭೆಯನ್ನು ಸಂಪರ್ಕಿಸುವಂತೆ ಕನಕಪುರ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿಯಮಿತವಾಗಿ ಸಭೆ ನಡೆಸಲು ಡಿಸಿ ಸೂಚನೆ



**ರಾಮನಗರ:** ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ಸಂಬಂಧಿಸಿದ ಪ್ರಾಯೋಜಕತ್ವ ಕಾರ್ಯಕ್ರಮದ ಪ್ರಗತಿ ಸಭೆಯನ್ನು ನಿಯಮಿತವಾಗಿ ಹಮ್ಮಿಕೊಳ್ಳುವಂತೆ ಜಿಲ್ಲಾಧಿಕಾರಿ ಯಶವಂತ್. ವಿ. ಗುರುಕರ್ ಅವರು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ರಜನಿ. ಆರ್. ಅವರಿಗೆ ಸಲಹೆ ನೀಡಿದರು.

ಅವರು ಜು.10ರ ಗುರುವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಪ್ರಗತಿ ಪರಿಶೀಲನ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಾಯೋಜಕತ್ವ ಕಾರ್ಯಕ್ರಮವು ಮಕ್ಕಳನ್ನು ಸಂಸ್ಥೆಯ ವಾತಾವರಣದಿಂದ ಬೇರ್ಪಡಿಸಿ ಕುಟುಂಬದ ವಾತಾವರಣದಲ್ಲಿ ಬೆಳೆಸುವ ಉದ್ದೇಶದಿಂದ ಹಾಗೂ ವಿವಿಧ ಕಾರಣಗಳಿಂದ ಪೋಷಕರಿಂದ ಬೇರ್ಪಟ್ಟು ಶೋಷಣೆಗೆ ಒಳಗಾಗುವುದನ್ನು ತಪ್ಪಿಸಿ ಮಕ್ಕಳು ಕೌಟುಂಬಿಕ ವ್ಯವಸ್ಥೆಯಲ್ಲಿಯೇ ಬೆಳೆಯಲು ನೆರವಾಗುವಂತೆ ಆರ್ಥಿಕ ಸಹಾಯ ಕಲ್ಪಿಸುವ ಮಹತ್ವದ ಯೋಜನೆಯಾಗಿದೆ ಆದ ಕಾರಣ ಸಭೆಯನ್ನು ನಿಗದಿತ ಅವಧಿಯೊಳಗೆ ಹಮ್ಮಿಕೊಳ್ಳುವಂತೆ ಅವರು ಸೂಚಿಸಿದರು. ಬಾಲ್ಯ ವಿವಾಹದ ದುಷ್ಪರಿಣಾಮ ಕುರಿತು ವಿಡಿಯೋ ತುಣುಕುಗಳನ್ನು ಪ್ರಸಾರ ಮಾಡುವ ಮೂಲಕ ಸಮುದಾಯದಲ್ಲಿ ಜಾಗೃತಿ ಮೂಡಿಸಬೇಕು, ಬಾಲ್ಯ ವಿವಾಹ ಜರುಗಿದರೆ ಎದುರಾಗುವ ಕಾನೂನಿನ ಕ್ರಮಗಳ ಬಗ್ಗೆ ಮಾಹಿತಿ ನೀಡಬೇಕು, ಜಿಲ್ಲೆಯಲ್ಲಿ ಬಾಲ್ಯವಿವಾಹ ಜರುಗದಂತೆ ಎಚ್ಚರವಹಿಸಬೇಕು ಅದರಂತೆ ಶಾಲೆ ಬಿಟ್ಟ ಮಕ್ಕಳನ್ನು ಗುರುತಿಸಿ ಅವರನ್ನು ಮರಳಿ ಶಾಲೆಗೆ ಸೇರ್ಪಡಿಸುವ ಬಗ್ಗೆ ಪರಿಣಾಮಕಾರಿ ಕ್ರಮವಹಿಸಬೇಕು ಎಂದು ಹೇಳಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅನ್ಮೋಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಶ್ರೀನಿವಾಸ್ ಗೌಡ, ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಜನಿ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## 15 ರಂದು ನಬಾರ್ಡ್‌ನ 44 ನೇ ಸಂಸ್ಥಾಪನಾ ದಿನಾಚರಣೆ

**ಬೆಂಗಳೂರು:** ನಬಾರ್ಡ್‌ನ 44 ನೇ ಸಂಸ್ಥಾಪನಾ ದಿನಾಚರಣೆಯನ್ನು ಜುಲೈ 15 ರಂದು ಅಪರಾಹ್ನ 12:00 ಗಂಟೆಗೆ ಬೆಂಗಳೂರಿನ ಕೆ.ಜಿ. ರಸ್ತೆಯಲ್ಲಿರುವ ನಬಾರ್ಡ್‌ನ ಪ್ರಾದೇಶಿಕ ಕಚೇರಿಯ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ. ಶಾಲಿನಿ ರಜನೀಶ್ ಅವರು ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದು, ಕಾರ್ಯಕ್ರಮದಲ್ಲಿ ಹಿರಿಯ ಬ್ಯಾಂಕಿಂಗ್ ವಲಯದ ಅಧಿಕಾರಿಗಳು, ಕರ್ನಾಟಕ ಸರ್ಕಾರದ ವಿವಿಧ ಇಲಾಖೆಗಳ ಮುಖ್ಯಸ್ಥರು ಮತ್ತು ಸಹಕಾರಿ ಮತ್ತು ಬ್ಯಾಂಕಿಂಗ್ ವಲಯದ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ, ಕರ್ನಾಟಕ ಗ್ರಾಮೀಣ ಬ್ಯಾಂಕಿನ ಅಧ್ಯಕ್ಷ ಶ್ರೀಕಾಂತ್ ಎಂ. ಭಂಡಿವಾಡ್, ಎಸ್‌ಎಲ್‌ಬಿಸಿಯ ಸಂಚಾಲಕ ಮತ್ತು ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕಿನ ಸಿಇಒ ಎಂ. ಭಾಸ್ಕರ ಚಕ್ರವರ್ತಿ ಪಾಲ್ಗೊಳ್ಳಲಿದ್ದಾರೆ. ನಬಾರ್ಡ್‌ನ 40 ವರ್ಷಗಳಿಗೂ ಹೆಚ್ಚಿನ ಇತಿಹಾಸದಲ್ಲಿ ವಿವಿಧ ಉಪಕ್ರಮಗಳ ಮೂಲಕ ಭಾರತದ ಕೃಷಿ ಮತ್ತು ಗ್ರಾಮೀಣ ಪ್ರದೇಶದ ಸ್ವರೂಪವನ್ನು ಬದಲಾಯಿಸಿದೆ. ಸಾಲದ ಹರಿವು, ಗ್ರಾಮೀಣ ಮೂಲಸೌಕರ್ಯ ಮತ್ತು ಸ್ವಸಹಾಯ ಗುಂಪುಗಳು, ಜೆಎಲ್‌ಜಿಎಸ್, ಎಫ್‌ಪಿಒಎಸ್ ಮತ್ತು ಬುಡಕಟ್ಟು ಸಮುದಾಯಗಳ ಬೆಳವಣಿಗೆಯನ್ನು ಉತ್ತೇಜಿಸುವ ಮೂಲಕ, ನಬಾರ್ಡ್ ಗ್ರಾಮೀಣ ಬದಲಾವಣೆಯಲ್ಲಿ ಪ್ರಮುಖ ಪಾತ್ರ ವಹಿಸಿದೆ. ಹೆಚ್ಚುವರಿಯಾಗಿ, ಇದು ಡಿಜಿಟಲ್ ಬ್ಯಾಂಕಿಂಗ್, ತಂತ್ರಜ್ಞಾನ ವರ್ಗಾವಣೆ, ಪ್ರದೇಶಗಳು ಮತ್ತು ಸಾಂಸ್ಥಿಕ ಬಲವರ್ಧನೆಯನ್ನು ಸಕ್ರಿಯಗೊಳಿಸಿದೆ. ಅಲ್ಲದೇ ಗ್ರಾಮೀಣ ಪ್ರದೇಶಗಳಲ್ಲಿ ಲಕ್ಷಾಂತರ ಜನರ ಜೀವನವನ್ನು ಸುಧಾರಿಸಿದೆ ಎಂದು ಪ್ರಕಟಣೆ ತಿಳಿಸಿದೆ.

## ಪತ್ರಕರ್ತರಿಗೆ ಕನ್ನಡ ಸಾಹಿತ್ಯದಲ್ಲಿ ಅಧ್ಯಯನ ಶಿಬಿರ

**ಬೆಂಗಳೂರು:** ಕರ್ನಾಟಕ ಸಾಹಿತ್ಯ ಅಕಾಡೆಮಿಯು ಪತ್ರಕರ್ತರಿಗೆ ''ಕನ್ನಡ ಸಾಹಿತ್ಯ'' ಎಂಬ ಹೆಸರಿನಲ್ಲಿ 3 ದಿನಗಳ ಅಧ್ಯಯನ ಶಿಬಿರವನ್ನು ಆಗಸ್ಟ್ 3ನೇ ವಾರ ಅಥವಾ ಕೊನೆಯ ವಾರದಲ್ಲಿ ನಡೆಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯಿರುವ 20 ರಿಂದ 40 ವರ್ಷ ವಯಸ್ಸುಳ್ಳ ಈಗಾಗಲೇ ಪತ್ರಿಕೆಯಲ್ಲಿ ಕೆಲಸ ಮಾಡುತ್ತಿರುವವರು, ಪತ್ರಿಕೋದ್ಯಮ ಪದವಿ ಪಡೆದವರು ಹಾಗೂ ಆಸಕ್ತಿಯುಳ್ಳವರು ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು 2025 ರ ಜುಲೈ 25 ಕೊನೆಯ ದಿನಾಂಕವಾಗಿದ್ದು, ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ಜಾಲತಾಣ ಮೂಲಕ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಕರಿಯಪ್ಪ .ಎನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹುದ್ದೆಗಳ ಭರ್ತಿಗೆ ಆಯ್ಕೆಪಟ್ಟಿ ಪ್ರಕಟ

**ಬೆಂಗಳೂರು:** ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಲ್ಲಿ ಖಾಲಿಯಿರುವ 50 ಸಹಾಯಕ ಅಭಿಯಂತರರು ಹಾಗೂ 14 ಪ್ರಥಮ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳ ನೇರ ನೇಮಕಾತಿ ಸಂಬಂಧಿಸಿದಂತೆ ಅಂತಿಮ ಆಯ್ಕೆಪಟ್ಟಿಗಳನ್ನು ಮಂಡಳಿಯ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಅಪ್‌ಲೋಡ್ ಮಾಡಲಾಗಿದೆ ಎಂದು ಬೆಂಗಳೂರು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಲ್ಟಿ ಟಾಸ್ಕಿಂಗ್ ಸ್ಟಾಫ್ ಹಾಗೂ ಹವಾಲ್ದಾರ್ ಹುದ್ದೆಗಳಿಗೆ ಅರ್ಜಿ

**ಬೆಂಗಳೂರು:** ಸಿಬ್ಬಂದಿ ಮತ್ತು ನೇಮಕಾತಿ ಆಯೋಗವು ಕೇರಳ-ಕರ್ನಾಟಕ ಪ್ರದೇಶ, ಕೋರಮಂಗಲ, ಬೆಂಗಳೂರು ವತಿಯಿಂದ ಕೇಂದ್ರ ಸರ್ಕಾರದ ವಿವಿಧ ಮಂತ್ರಾಲಯ, ಇಲಾಖೆಗಳಲ್ಲಿ ಕೆಲಸ ನಿರ್ವಹಿಸಲು ಮಲ್ಟಿ ಟಾಸ್ಕಿಂಗ್ ಸ್ಟಾಫ್ (ತಾಂತ್ರಿಕೇತರ) ಹಾಗೂ ಹವಾಲ್ದಾರ್ (ಗ್ರೂಪ್ ಸಿ) ಸುಮಾರು 1075 ಹುದ್ದೆಗಳ ಆಯ್ಕೆಗಾಗಿ ನೇರ ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ಭರ್ತಿ ಮಾಡಲು ಎಸ್.ಎಸ್.ಎಲ್.ಸಿ. ಪಾಸಾದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆನ್‌ಲೈನ್ ಅರ್ಜಿಗಳನ್ನು ಸ್ವೀಕರಿಸಲು 2025ರ ಜುಲೈ 27 ಕೊನೆಯ ದಿನಾಂಕವಾಗಿದೆ. ಈ ಸಂಬಂಧ ಕಂಪ್ಯೂಟರ್ ಆಧಾರಿತ ಪರೀಕ್ಷೆಗಳನ್ನು ಸೆಪ್ಟೆಂಬರ್ 20 ರಿಂದ ಅಕ್ಟೋಬರ್ 24 ರವರೆಗೆ ನಡೆಸಲಾಗುವುದು. ಅರ್ಜಿ ಸಲ್ಲಿಸಲು ವಯೋಮಿತಿ, ಪರೀಕ್ಷೆಯ ಸ್ವರೂಪ, ಪಠ್ಯಕ್ರಮ, ವಿದ್ಯಾರ್ಹತೆ ಹಾಗೂ ಇನ್ನಿತರ ವಿಷಯಗಳನ್ನು ವೆಬ್‌ಸೈಟ್ https://ssc.gov.in ಹಾಗೂ ಕರ್ನಾಟಕ, ಕೇರಳ, ಲಕ್ಷದ್ವೀಪ ವೆಬ್‌ಸೈಟ್ www.ssckkr.kar.nic.in ಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ. ಕೇಂದ್ರ ಸರ್ಕಾರದ ನಿಯಮಗಳನ್ವಯ ಮೀಸಲಾತಿ ಹಾಗೂ ವಯೋಮಿತಿ ಸಡಿಲಿಕೆಯನ್ನು ಪಾಲಿಸಲಾಗುವುದು. ಹೆಚ್ಚಿನ ವಿವರಗಳಿಗೆ ಸಹಾಯವಾಣಿ ಸಂಖ್ಯೆ 080-25502520 ಗೆ ಸೋಮವಾರದಿಂದ ಶುಕ್ರವಾರದವರೆಗೆ ಬೆಳಿಗ್ಗ 10.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಸಂಪರ್ಕಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಉಚಿತ ತರಬೇತಿಗೆ ಅರ್ಜಿ ಆಹ್ವಾನ

**ರಾಮನಗರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಗೃಹೋಪಯೋಗಿ ವಿದ್ಯುತ್ ಉಪಕರಣಗಳ ರಿಪೇರಿ ಮತ್ತು ಸೇವೆ ಕುರಿತ 30 ದಿನಗಳ ಉಚಿತ ತರಬೇತಿಯನ್ನು ಜು. 28 ರಿಂದ ಹಮ್ಮಿಕೊಳ್ಳಲಾಗಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕರು ಅರ್ಜಿಯನ್ನು ಸಲ್ಲಿಸಬಹುದಾಗಿದೆ. ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿಯ ಅವಧಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗೆ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9481506564, 9380162042, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ತಿಳಿಸಿದ್ದಾರೆ.

**ಪುರಸಭೆ ಕಾರ್ಯಾಲಯ, ಚಂದಾಪುರ**
ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ- 560081
Email: itstaff_ulb_chandapura@yahoo.com Phone No: 080-27832411

ಚಂ.ಪು/ಟೆ.ಪ್ರ/ಸಿ.ಆರ್/05/2025-26 ದಿನಾಂಕ: 09.07.2025

**ಟೆಂಡರ್ ಪ್ರಕಟಣೆ (ಕೆಪಿಪಿಪಿ ಪೋರ್ಟಲ್ ಮುಖಾಂತರ)**

ಮುಖ್ಯಾಧಿಕಾರಿ, ಪುರಸಭೆ, ಚಂದಾಪುರರವರಿಂದ ಕರ್ನಾಟಕ ಪಾರದರ್ಶಕತೆ ಅಧಿನಿಯಮ 1999 & 2000 ರ ಪ್ರಕಾರ 2025-26 ಪುರಸಭಾ ನಿಧಿಯಡಿ ಈ ಕೆಳಕಂಡ ವಿವರಗಳಂತೆ ಟೆಂಡರ್ ಕರೆಯಲಾಗಿರುತ್ತದೆ. ತಾಂತ್ರಿಕವಾಗಿ ಅರ್ಹತೆ ಹೊಂದಿರುವ ಇಚ್ಛೆಯುಳ್ಳ ಗುತ್ತಿಗೆದಾರರು/ಸರಬರಾಜುದಾರರು ಕೆಪಿಪಿಪಿ ಪೋರ್ಟಲ್‌ನ ಮುಖಾಂತರ ಟೆಂಡರ್‌ನಲ್ಲಿ ಭಾಗವಹಿಸಬಹುದು. ಹೆಚ್ಚಿನ ವಿವರಗಳನ್ನು ಪುರಸಭಾ ಕಛೇರಿಯಿಂದ ಮತ್ತು ಕಛೇರಿ ವೆಬ್‌ಸೈಟ್ http://www.chandapuratown.mrc.gov.in/ ನಲ್ಲಿ ಪಡೆಯಬಹುದಾಗಿರುತ್ತದೆ.

| ಕ್ರ.ಸಂ | ವಿವರ | ಟೆಂಡರಿಗಿಟ್ಟ ಮೊತ್ತ (ರೂ.ಗಳಲ್ಲಿ) |
|---|---|---|
| 1 | DMA/2025-26/BD/WORK_INDNT38395/CALL-22 | Rs. 12.00 Lakhs |

**ಟೆಂಡರ್ ಷೆಡ್ಯೂಲ್ ದಿನಾಂಕಗಳು ಈ ಕೆಳಕಂಡಂತಿವೆ.**

1. ಕೆಪಿಪಿಪಿ ಪೋರ್ಟಲ್‌ನಲ್ಲಿ ಟೆಂಡರ್ ಸಲ್ಲಿಸುವ ಕೊನೆಯ **ದಿನಾಂಕ: 24.07.2025ರ 16:30 ಘಂಟೆವರೆಗೆ.**
2. ಕೆಪಿಪಿಪಿ ಪೋರ್ಟಲ್‌ನಲ್ಲಿ ಬಿಡ್ ತೆರೆಯುವ **ದಿನಾಂಕ: 28.07.2025ರ 16:30 ಘಂಟೆಗೆ.**

ಸಹಿ/- ಅಧ್ಯಕ್ಷರು, ಪುರಸಭೆ, ಚಂದಾಪುರ
ಸಹಿ/- ಉಪಾಧ್ಯಕ್ಷರು, ಪುರಸಭೆ, ಚಂದಾಪುರ
ಸಹಿ/- ಮುಖ್ಯಾಧಿಕಾರಿಗಳು, ಪುರಸಭೆ, ಚಂದಾಪುರ

ವಾಸಾಸಂಇ/ವಾ.ಪ್ರ/1767/ಎಸ್‌ಎಸ್‌ಸಿ/2025-26

ಸಂಜೆ ಮುಗಿಲು
ಶನಿವಾರ
12.7.2025



# ಕರಿಕಲ್ಲು ಕ್ವಾರಿಯಲ್ಲಿ ಚಿರತೆಯ ಶವ ಪತ್ತೆ : ವಿಷಪ್ರಾಶನ ಶಂಕೆ

**ಚಾಮರಾಜನಗರ:** ಜಿಲ್ಲೆಯ ಹನೂರು ತಾಲ್ಲೂಕಿನ ಮಲೆಮಹದೇಶ್ವರ ವನ್ಯಜೀವಿ ಧಾಮದ ಮೀಣ್ಯಂ ಅರಣ್ಯ ಪ್ರದೇಶದಲ್ಲಿ ವಿಷಪ್ರಾಶನದಿಂದ 5 ಹುಲಿಗಳು ಮೃತಪಟ್ಟ ಘಟನೆ ಮಾಸುವ ಮುನ್ನವೇ ಚಾಮರಾಜನಗರ ತಾಲೂಕಿನ ಕೊತ್ತಲವಾಡಿಯ ಕರಿಕಲ್ಲು ಕ್ವಾರಿಯೊಂದರ ಬಳಿ ಚಿರತೆಯೊಂದು ಅನುಮಾ ನಾಸ್ಪದವಾಗಿ ಮೃತಪಟ್ಟಿದ್ದು ವಿಷಪ್ರಾಶನ ಶಂಕೆ ವ್ಯಕ್ತವಾಗಿದೆ.

ಚಾಮರಾಜನಗರ ತಾಲ್ಲೂಕಿನ ಕೊತ್ತಲವಾಡಿ ಬಳಿಯ ಕರಿಕಲ್ಲು ಕ್ವಾರಿ ಸಮೀಪದ ಕಲ್ಲಿನ ಮೇಲೆ 5–6 ವರ್ಷ ವಯಸ್ಸಿನ ಗಂಡು ಚಿರತೆಯ ಕಳೇಬರ ಪತ್ತೆಯಾಗಿದ್ದು ಎರಡು ಮೂರು ದಿನಗಳ ಹಿಂದೆ ಮೃತಪಟ್ಟಿದೆ ಎಂದು ಹೇಳಲಾಗುತ್ತಿದೆ.

ಚಿರತೆಕಳೇಬರಪತ್ತೆಯಾಗಿರುವಸಮೀಪದಲ್ಲಿಯೇಕರು ಹಾಗೂ ನಾಯಿಯ ಕಳೇಬರ ಕೂಡ ಪತ್ತೆಯಾಗಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ಚಿರತೆಯ ಕಳೇಬರವನ್ನು ನೋಡಿದ ಸ್ಥಳೀಯರು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದು ಸ್ಥಳಕ್ಕೆ ಆಗಮಿಸಿದ ಅರಣ್ಯ ಇಲಾಖೆಯ ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆ.

ಬಂಡೀಪುರದ ಶ್ವಾನದಳದಿಂದ ತಪಾಸಣೆ ನಡೆಸಲಾಯಿತು. ಪಶು ವೈದ್ಯರಾದ ಡಾ.ವಾಸಿಂ, ಡಾ.ಮೂರ್ತಿ ಅವರಿಂದ ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ಚಿರತೆಯ ಕಳೇಬರವನ್ನು ಸುಡಲಾಯಿತು. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಅರಣ್ಯ ಇಲಾಖೆಯ ಅಧಿಕಾರಿಗಳು ತನಿಖೆ ಕೈಗೊಂಡಿದ್ದಾರೆ.

ಕಳೆದ 2023ರ ಡಿಸೆಂಬರ್‌ನಲ್ಲಿ ಚಾಮರಾಜನಗರ ತಾಲ್ಲೂಕಿನ ಕೊತ್ತಲವಾಡಿ ಬಳಿಯ ಕರಿಕಲ್ಲು ಕ್ವಾರಿ ಸಮೀಪ 2 ಹುಲಿಗಳು ಮೃತಪಟ್ಟು ಹಲವು ದಿನಗಳ ನಂತರ ಹುಲಿಗಳ ಕಳೇಬರ ಕೊಳೆತ ಸ್ಥಿತಿಯಲ್ಲಿ ಪತ್ತೆಯಾಗಿತ್ತು. ಆದರೆ, ಈ ಹುಲಿಗಳು ಯಾವ ಕಾರಣಕ್ಕೆ ಮೃತಪಟ್ಟವು ಎಂಬುದು ನಿಗೂಢವಾಗಿಯೇ ಉಳಿಯಿತು. ಇದೀಗ ಕೊತ್ತಲವಾಡಿಯ ಕರಿಕಲ್ಲು ಕ್ವಾರಿಯ ಬಳಿಯೇ ಚಿರತೆ ಮೃತಪಟ್ಟಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ.

### ಸಿಸಿಎಫ್, ಡಿಸಿಎಫ್ ಭೇಟಿ

**ಚಿರತೆ ಕಳೇಬರ ಪತ್ತೆಯಾಗಿರುವ ಸ್ಥಳಕ್ಕೆ ಸಿಸಿಎಫ್ ಹೀರಾಲಾಲ್, ಬಿಆರ್‌ಟಿ ಹುಲಿ ಯೋಜನೆ ನಿರ್ದೇಶಕ ಶ್ರೀಪತಿ, ಎಸಿಎಫ್ ಮಂಜುನಾಥ್, ಪ್ರಾದೇಶಿಕ ಅರಣ್ಯ ವಲಯದ ಆರ್ ಎಫ್‌ಒ ಸಂದೀಪ್, ಡಿಆರ್ ಎಫ್‌ಒ ಅಮರನಾಥ್, ಸುರೇಶ್ ಸೇರಿದಂತೆ ಇತರೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದರು.**



# ನೊಂದ ಮನಗಳಿಗೆ ಸ್ಪಂದಿಸಿ ಆತ್ಮತೃಪ್ತಿ ಪಡೆಯುವುದೇ ಚಿರ ನಿರಂತರ

**ನಾಗಮಂಗಲ:** ಸಮಾಜದ ನೊಂದ ಜೀವದ ಮನಗಳಿಗೆ ಮನ ಸಂತೋಷ ತೃಪ್ತಿ ಗಾಗಿ ಸ್ಪಂದಿಸಿ ಸಮಾಜದ ಭಾರ ಕಳೆದುಕೊಳ್ಳುವ ಮುಖಾಂತರ ತೃಪ್ತಿ ಪಡೆಯುವುದೇ ಚಿರ ನಿರಂತರ ವೆಂದು ಆದಿಚುಂಚನಗಿರಿ ವಿಶ್ವವಿದ್ಯಾನಿಲಯದ ಉಪಕುಲಪತಿಗಳಾದ ಡಾ. ಹೆಚ್ ಎಸ್ ಶ್ರೀಧರ್ ಅವರು ಮಾತನಾಡಿದರು.

ಅವರು ನಾಗಮಂಗಲ ತಾಲುಕು ಬಿಜಿ ನಗರದ ಆದಿಚುಂಚನಗಿರಿ ಆಸ್ಪತ್ರೆ ಮತ್ತು ಕರ್ನಾಟಕ ಮಾರವಾಡಿ ಯೂಥ್ ಫೆಡರೇಷನ್ ಸಹ ಯೋಗ ದಲ್ಲಿ ಪರಮಪೂಜ್ಯ ಶ್ರೀ ನಿರ್ಮಲಾನಂದ ನಾಥ ಮಹಾಸ್ವಾಮೀಜಿಯವರ ಜನ್ಮದಿನದ ಅಂಗವಾಗಿ ಕೃತಕ ಕೈ ಮತ್ತು ಕಾಲು ಜೋಡಣಾ ಶಿಬಿರ ಉದ್ಘಾಟನೆ ಮಾಡುತ್ತಾ ಮಾತನಾಡಿದರು. ಸಮಾಜದಲ್ಲಿ ನಾವು ಬದುಕಿನ ಕಾಲಮಾನದಲ್ಲಿ ಸಮಾಜಕ್ಕೆ ಕೈಲಾದ ಸೇವೆ ಮಾಡುವ ಮುಖಾಂತರ ಮನ ತೃಪ್ತಿಯ ಕೆಲಸ ಮಾಡಿ ಸಿಗುವ ಸಂತೃಪ್ತಿ ಸಮಾಜಮುಖಿಯ ಅಗಾಧ ಕೆಲಸವಾಗಬೇಕೆಂದು ತಿಳಿಸಿದರು.

ಸಮಾಜದ ಕಟ್ಟಕಡೆಯ ನೊಂದ ಜೀವಿಗಳ ಮನಕೆ ಸ್ಪಂದಿಸಿ ಚಿರಂಜೀವಿ ಯಂತೆ ತನ್ನೊಂದಿಗೆ ಬದುಕುತ್ತಿರುವ ಸಮಾಜಕ್ಕೆ ಆಸರೆಯ ಕಿರಣವಾದಾಗ ಮಾತ್ರ ನಿತ್ಯ ನಿರಂತರ ಕುಸುಮವಾಗಲು ಸಾಧ್ಯ ಎಂದು ತಿಳಿಸಿದರು.

ಕುಟುಂಬದ ಕಣ್ಣಾಗಿ ಬದುಕಿನ ಆಧಾರ ಸ್ಥಂಬ ಮನೆ ಒಡೆಯರಿಗೆ ಅಂಗಾಂಗ ಕಳೆದು ಹೋದವರ ಬದುಕಿನ ಆತ್ಮಸ್ಥೈರ್ಯಕ್ಕೆ ಶ್ರೀಗಳ ದೂರದೃಷ್ಟಿಯ ಚಿಂತನ ಶಕ್ತಿಯಿಂದ ಅವರುಗಳ ಆ ದಿರ್ಘಕ ಬೆಳವಣಿಗೆಗೆ ಇಂತಹ ಶಿಬಿರಗಳು ಅನುಕೂಲವೆಂದು ಆದಿಚುಂಚನಗಿರಿ ವಿಶ್ವವಿದ್ಯಾನಿಲಯದ ರಿಜಿಸ್ಟರ್ ಸಿ ಕೆ ಸುಬ್ಬುರಾಯ್ ತಿಳಿಸಿದರು.

ಶಿಬಿರದ ಮೊದಲನೇ ದಿನದಲ್ಲಿ 300ಕ್ಕೂ ಹೆಚ್ಚು ಫಲಾನುಭವಿಗಳು ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡಿದ್ದರು. ಇದೇ ತಿಂಗಳು 10 ರಿಂದ ಆರಂಭಗೊಂಡಿರುವ ಶಿಬಿರ 21ರ ವರೆಗೆ ಆಯೋಜನೆ ಮಾಡಲಾಗಿದೆ. ಕಾರ್ಯಕ್ರಮದ ಸಮಾರಂಭದಲ್ಲಿ ಆಸ್ಪತ್ರೆಯ ಮುಖ್ಯಸ್ಥರಾದ ಡಾ. ಕೆ.ಎಂ ಶಿವಕುಮಾರ್. ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ. ಎಂ.ಜೆ.ಶಿವರಾಂ. ಉಪವೈದ್ಯ. ಅದಿಕ್ಷಕರಾದ ಡಾ. ರವಿ ಕೆ.ಎಸ್.ಆದಿಚುಂಚನಗಿರಿ ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿಗಳಾದ ಉಮೇಶ್.ಆಸ್ಪತ್ರೆ ಸಾರ್ವಜನಿಕ ಸಂಪರ್ಕ ಅಧಿಕಾರಿಗಳಾದ ಧರ್ಮೇಂದ್ರ. ಆಡಳಿತ ಅಧಿಕಾರಿಗಳಾದ ಮಜ್ರೇಶ್ ಶೆಟ್ಟಿ.ಹಾಗೂ ಫಲಾನುಭವಿಗಳು ಗಣ್ಯರು ಉಪಸ್ಥಿತರಿದ್ದರು



## ಹಡಪದ ಅಪ್ಪಣ್ಣ ಜಯಂತಿ ಆಚರಣೆ : ಗುರುಪೂರ್ಣಿಮೆಯಲ್ಲಿ ಅನ್ನದಾಸೋಹ

# ಅನುಭವಮಂಟಪ ರಾಜಕಾರಣಿಗಳಿಗೆ ಮಾದರಿ

**ಮಂಡ್ಯ :** ಸಮಾನತೆಯ ಸಮಾಜವನ್ನು ನಿರ್ಮಾಣಮಾಡಲು ಅನುಭವಮಂಟಪ ಸ್ಥಾಪಿಸಿ ಭದ್ರ ಬುನಾದಿ ಹಾಕಿದ ವಿಶ್ವಗುರು ಬಸವಣ್ಣನವರ ಆದರ್ಶಗಳು ಇಂದಿನ ರಾಜಕಾರಣಿಗಳಿಗೆ ಮಾದರಿಯಾಗಬೇಕಿದೆ ಎಂದು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ವೇದಿಕೆ ಅಧ್ಯಕ್ಷ ಎಲ್.ಸಂದೇಶ್ ಹೇಳಿದರು.

ನಗರದ ಸ್ವರ್ಣಸಂದ್ರ, ಬಡಾವಣೆಯ ಪರಮಪೂಜ್ಯ ಡಾ.ಶ್ರೀ ಶಿವಕುಮಾರಮಹಾಸ್ವಾಮೀಜಿ ಉದ್ಯಾನವನದಲ್ಲಿ ಕಾಯಕಯೋಗಿ ಫೌಂಡೇಶನ್, ಸಿದ್ದಗಂಗಾಶ್ರೀ ಸೇವಾ ಸಮಿತಿ ಗುರುಪೂರ್ಣಿಮೆಯ ಅಂಗವಾಗಿ ಆಯೋಜಿಸಿದ್ದ 'ದಾಸೋಹ ಹುಣ್ಣಿಮೆ' ಹಾಗೂ ಮಹಾಶಿವಶರಣ ಹಡಪದ ಅಪ್ಪಣ್ಣ ಜಯಂತಿಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಧಾರ್ಮಿಕ, ಸಾಮಾಜಿಕ, ಆರ್ಥಿಕ ಕ್ಷೇತ್ರಗಳಲ್ಲಿ ಕೆಳವರ್ಗದ ಜನತೆಯನ್ನು ಮೇಲೆತ್ತುವ ಸಲುವಾಗಿ ಬಸವಣ್ಣನವರು ಮಾಡಿದ ಕ್ರಾಂತಿ ನಮ್ಮನ್ನಾಳುವ ಆಡಳಿತವರ್ಗದವರಿಗೆ ಆದರ್ಶವಾಗಬೇಕಿದೆ. ಅನುಭವಮಂಟಪದಲ್ಲಿ ಪ್ರಧಾನಕಾರ್ಯದರ್ಶಿಯಾಗಿದ್ದ ಹಡಪದ ಅಪ್ಪಣ್ಣನವರು ಶರಣರ ಸಂಕಲ್ಪವನ್ನು ಅನುಷ್ಠಾನಗೊಳಿಸುವಲ್ಲಿ ಮಹತ್ತರ ಪಾತ್ರ ವಹಿಸಿದ ಶಿವಶರಣ ಎಂದು ಬಣ್ಣಿಸಿದರು.

ಶರಣರು, ಸೂಫಿಗಳು, ಸಂತರು ಸಮಾಜದಲ್ಲಿನ ಅಸಮಾನತೆಯನ್ನು ಹೋಗಲಾಡಿಸಲು ಮಾಡಿದ ಮಹಾನ್ ಕ್ರಾಂತಿ ಇಂದಿನ ಯುವಜನತೆಗೆ ಆದರ್ಶಪ್ರಾಯವಾಗಬೇಕಿದೆ. ಈ ನಿಟ್ಟಿನಲ್ಲಿ ಕಾಯಕಯೋಗಿ ಫೌಂಡೇಶನ್ ಪ್ರತಿ ತಿಂಗಳ ಹುಣ್ಣಿಮೆಯಂದು ಅನ್ನದಾಸೋಹದಂತಹ ಶ್ರೇಷ್ಠ ಕಾಯಕ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಕಾಯಕಯೋಗಿ ಫೌಂಡೇಶನ್ ಅಧ್ಯಕ್ಷ ಎಂ.ಶಿವಕುಮಾರ್ ಮಾತನಾಡಿ, ಹಡಪದವರು ಎದುರು ಬಂದರೆ ಅಪಶಕುನ ಎಂದು ಭಾವಿಸುತ್ತಿದ್ದ ಸಂದರ್ಭದಲ್ಲಿ, ಅಣ್ಣ ಬಸವಣ್ಣನವರು ಹಡಪದ ಅಪ್ಪಣ್ಣನವರನ್ನು ತಮ್ಮ ಪ್ರಧಾನ ಕಾರ್ಯದರ್ಶಿಯನ್ನಾಗಿ ನೇಮಿಸಿಕೊಂಡರು. ಮಾತ್ರವಲ್ಲದೆ, ತಮ್ಮ ಎಲ್ಲ ಕಾರ್ಯಗಳನ್ನು ಅವರ ಮೂಲಕವೇ ಮಾಡಿಸುತ್ತಿದ್ದರು. ಇದು ಬಸವಣ್ಣನವರ ವಿಶಾಲ ಮನಸ್ಸಿಗೆ ಸಾಕ್ಷಿಯಾಗಿದೆ ಎಂದರು.

'ಸರ್ವೇಜನ ಸುಖಿನೋ ಭವಂತು' ಎಂಬ ತತ್ವವಿದ್ದ ಕಾಲದಲ್ಲಿ, 'ಸಕಲ ಜೀವಾತ್ಮರಿಗೆ ಲೇಸನ್ನು ಬಯಸಿದ' ತತ್ವವು 12ನೇ ಶತಮಾನದ ಬಸವಣ್ಣನವರ ನೇತೃತ್ವದಲ್ಲಿ ನಡೆದ ಶರಣರ ಚಳುವಳಿಯ ಕಾಲ ಅಪರೂಪದ ಕಾಲವಾಗಿತ್ತು. ಒಬ್ಬರನ್ನೊಬ್ಬರು ಮುಟ್ಟಿದರೆ ಮಹಾಪಾಪವೆಂದು ಭಾವಿಸಲಾಗಿದ್ದ ಆ ಕಾಲಘಟ್ಟದಲ್ಲಿ, ಕೆಳವರ್ಗದ ಜನರನ್ನು ಒಪ್ಪಿ ಅಪ್ಪಿಕೊಂಡ ಮಹಾಪುರುಷ ಬಸವಣ್ಣನವರು. ಅವರ ಹಾದಿಯಲ್ಲಿ ಸಾಗಿ ಬಂದ ಕಾಯಕಯೋಗಿ ಸಿದ್ದಗಂಗೆಯ ಶ್ರೀ ಶಿವಕುಮಾರಮಹಾಸ್ವಾಮೀಜಿಯವರ 'ತ್ರಿವಿಧ ದಾಸೋಹ' ಕನ್ನಡನಾಡಿನಲ್ಲಿ ಮನೆಮಾತಾಗಿದೆ ಎಂದರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಲಿಂಗಾಯತ ಮಹಾಸಭಾ ಅಧ್ಯಕ್ಷ ಎಂ.ಎಸ್.ಮಂಜುನಾಥ್ ಬೆಟ್ಟಹಳ್ಳಿ, ತನ್ನ ತಾನರಿಯದೆ, ತನ್ನ ತಾನೋಡದೆ, ತನ್ನ ತಾನುಡಿಯದೆ, ಅನ್ಯರ ಸುದ್ದಿಯ ನುಡಿದಾಡುವ ಕುನ್ನಿಗಳಿಗೆ ಗುರುವಿಲ್ಲ, ಲಿಂಗವಿಲ್ಲ, ಜಂಗಮವಿಲ್ಲ, ಪಾದೋದಕವಿಲ್ಲ, ಪ್ರಸಾದವಿಲ್ಲ. ಅವನು ಸರ್ವಾಪರಾಧಿ, ಅವನ ಮುಖವ ನೋಡಲಾಗದು ಬಸವಪ್ರಿಯ ಕೂಡಲಚೆನ್ನಬಸವಣ್ಣ ಎನ್ನುವ ಹಡಪದ ಅಪ್ಪಣ್ಣನವರ ವಚನ ಶರಣರ ಮೌಲ್ಯವನ್ನು ತೋರಿಸುತ್ತದೆ ಎಂದರು.

ಹಡಪದ ಅಪ್ಪಣ್ಣನವರ ಜಯಂತಿ ಅಂಗವಾಗಿ ಉದ್ಯಾನವನದಲ್ಲಿ ಮದ್ದೂರು ತಾಲ್ಲೂಕು ಶರಣರ ಸಂಘಟನಾ ವೇದಿಕೆ ಅಧ್ಯಕ್ಷ ಎಸ್.ಎನ್.ಗಂಗಾಧರ್, ಕುಂಬಾರರ ಜಾಗೃತಿ ವೇದಿಕೆ ಅಧ್ಯಕ್ಷ ಎಂ.ಕೃಷ್ಣ, ಅನನ್ಯ ಟ್ರಸ್ಟ್ ಅಧ್ಯಕ್ಷ ಬಿ.ಎಸ್. ಅನುಪಮಾ, ಬಸರಾಳು ಬಸವರಾಜ್ ಸಸಿನೆಟ್ಟು ನೀರೆರೆದರು.

ಸಿದ್ದಗಂಗಾಶ್ರೀ ಸೇವಾ ಸಮಿತಿ ಅಧ್ಯಕ್ಷ ಎಂ.ಆರ್. ಮಂಜುನಾಥ್, ಸವಿತಾ ಸಮಾಜದ ಜಿಲ್ಲಾಧ್ಯಕ್ಷ ಕೆಂಪರಾಜು, ಬಿಜೆಪಿ ಮುಖಂಡ ಜಿ.ಮಹಾಂತಪ್ಪ, ಯೋಗಶಿಕ್ಷಕ ಶಿವರುದ್ರಸ್ವಾಮಿ, ವೀರಶೈವ ಹಾಸ್ಟೆಲ್ ಟ್ರಸ್ಟಿ ಡಾ.ಮಲ್ಲಿಕಾರ್ಜುನಯ್ಯ, ಆಟೋಚಾಲಕರ ಸಂಘದ ರಾಜು, ದೀಪು ಸಿಂಗ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.




**ಮಂಡ್ಯ ನಗರದ ಸ್ವರ್ಣಸಂದ್ರ ಬಡಾವಣೆಯ ಪರಮಪೂಜ್ಯ ಡಾ.ಶ್ರೀ ಶಿವಕುಮಾರಮಹಾಸ್ವಾಮೀಜಿ ಉದ್ಯಾನವನದಲ್ಲಿ ಕಾಯಕಯೋಗಿ ಫೌಂಡೇಶನ್ ಗುರುಪೂರ್ಣಿಮೆಯ ಅಂಗವಾಗಿ ಆಯೋಜಿಸಿದ್ದ 'ದಾಸೋಹ ಹುಣ್ಣಿಮೆ' ಹಾಗೂ ಮಹಾಶಿವಶರಣ ಹಡಪದ ಅಪ್ಪಣ್ಣ ಜಯಂತಿಯಲ್ಲಿ ಗಣ್ಯರು ಪಾಲ್ಗೊಂಡು ಪೂಜೆ ಸಲ್ಲಿಸಿ ದಾಸೋಹಕ್ಕೆ ಚಾಲನೆ ನೀಡಿದರು. ಫೌಂಡೇಶನ್ ಅಧ್ಯಕ್ಷ ಎಂ.ಶಿವಕುಮಾರ್, ಎಲ್.ಸಂದೇಶ್, ಮಹೇಶ್ಚಂದ್ರ, ಎಂ.ಎಸ್.ಮಂಜುನಾಥ್, ಜಿ.ಮಹಾಂತಪ್ಪ, ಶಿವರುದ್ರಸ್ವಾಮಿ, ಎಸ್.ಎನ್.ಗಂಗಾಧರ್ ಮತ್ತಿತರರಿದ್ದರು.**

# ಲಿವರ್ ಹಾಗೂ ಜೀರ್ಣಾಂಗ ಸಮಸ್ಯೆಗಳಿಗೆ ಚಿಕಿತ್ಸೆ

**ತುಮಕೂರು:** ನಗರದ ಬಿ.ಹೆಚ್.ರಸ್ತೆಯ ಶ್ರೀಸಿದ್ದಗಂಗಾ ಆಸ್ಪತ್ರೆಯ ಮತ್ತು ಬೆಂಗಳೂರಿನ ಎಂ.ಎಸ್.ರಾಮಯ್ಯ ಮೆಮೋರಿಯಲ್ ಆಸ್ಪತ್ರೆಯ ಇವರುಗಳ ಸಂಯುಕ್ತಾಶ್ರಯದಲ್ಲಿ ಜುಲೈ 12 ರಂದು (ಇಂದು) ಶನಿವಾರ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಎಂ.ಎಸ್.ರಾಮಯ್ಯ ಆಸ್ಪತ್ರೆಯ ಲಿವರ್ ಮತ್ತು ಗ್ಯಾಸ್ಟ್ರೋ ವೈದ್ಯರಾದ ಡಾ.ಜಗದೀಶ್ ಕೃಷ್ಣಮೂರ್ತಿರವರು ಲಭ್ಯವಿರುತ್ತಾರೆ. ಬೆಂಗಳೂರಿನ ಹೆಸರಾಂತ ಎಂ.ಎಸ್.ರಾಮಯ್ಯ ಲಿವರ್ ಮತ್ತು ಗ್ಯಾಸ್ಟ್ರೋ ಕ್ಲಿನಿಕ್ ಈಗ ನಮ್ಮ ತುಮಕೂರಿನ ಶ್ರೀಸಿದ್ದಗಂಗಾ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯಲ್ಲಿ ಲಿವರ್ ಹಾಗೂ ಜೀರ್ಣಾಂಗ ಸಮಸ್ಯೆಗಳಿಂದ ಬಳಲುತ್ತಿರುವವರಿಗೆ ಪ್ರತಿ 2ನೇ ಮತ್ತು 4ನೇ ಶನಿವಾರ ತಜ್ಞರ ನಿಖರ ಚಿಕಿತ್ಸೆ ಲಭ್ಯವಿರುತ್ತಾರೆ. ಲಿವರ್ ಸಮಸ್ಯೆಗಳಾದ ಜಾಂಡಿಸ್ (ಕಾಮಾಲೆ), ಹೆಪಟೈಟಿಸ್, ಲಿವರ್ ಫೈಬ್ರೋಸಿಸ್, ಲಿವರ್ ಕ್ಯಾನ್ಸರ್, ತೀವ್ರ ಲಿವರ್ ವೈಫಲ್ಯ, ಮದ್ಯಪಾನದಿಂದ ಉಂಟಾಗುವ ಲಿವರ್ ರೋಗ, ಆಟೋಇಮ್ಯೂನ್ ಲಿವರ್ ರೋಗ, ರಕ್ತ ಉಗುಳಿಕೆ, ಅಸ್ಸೈಟಿಸ್ (ಉದರದಲ್ಲಿ ದ್ರವ ಸಂಗ್ರಹ), ಪೋರ್ಟಲ್ ಹೈಪರ್‌ಟೆನ್ಷನ್, ವಿಲ್ಸನ್ಸ್ ರೋಗ, ಬಿಲಿಯರಿ ಅಟ್ರೇಷಿಯಾ, ಪ್ಯಾಂಕ್ರಿಯಾಸ್, ಪಿತ್ತನಾಳ ಹಾಗೂ ಗ್ಯಾಸ್ಟ್ರಿಕ್ ಕ್ಯಾನ್ಸರ್, ಗಾಲ್ ಬ್ಲಾಡರ್ ಮತ್ತು ಕೋಲನ್ ಕ್ಯಾನ್ಸರ್, ಅಂತಿಮ ಹಂತದ ಲಿವರ್ ಸಮಸ್ಯೆಗೆ ಚಿಕಿತ್ಸೆಯನ್ನು ನೀಡಲಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಹಾಗೂ ನೋಂದಾಣಿಗಾಗಿ ಟಿ.ಎಸ್.ರಾಜೇಶ್ 6364344024 ರವರನ್ನು ಸಂಪರ್ಕಿಸಲು ಕೋರಲಾಗಿದೆ.




**ಮೈಸೂರು ನಗರದ ಬೋಗಾದಿ ಮುಖ್ಯ ರಸ್ತೆಯಲ್ಲಿರುವ ಗಂಗೋತ್ರಿ ಪಬ್ಲಿಕ್ ಶಾಲೆಯಲ್ಲಿ ಗುರುಪೂರ್ಣಿಮೆಯನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮಕ್ಕೆ ಆಚಾರ್ಯತ್ರಯರಲ್ಲಿ ಒಬ್ಬರಾದ ಶಂಕರಾಚಾರ್ಯರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವುದರ ಮೂಲಕ ಚಾಲನೆ ನೀಡಲಾಯಿತು. ನಂತರ ಶಾಲಾ ಆಡಳಿತಾಧಿಕಾರಿ ಶ್ರೀಮತಿ ಕಾಂತಿ ನಾಯಕ್ ಅವರು ವಿದ್ಯಾರ್ಥಿಗಳಿಗೆ ಗುರುವಿನ ಮೌಲ್ಯದ ಬಗ್ಗೆ ತಿಳಿಸಿ, 'ತಾಯಿ ಜೀವ ನೀಡಿದರೆ ಶಿಕ್ಷಕರು ಜೀವನವನ್ನೇ ಧಾರೆ ಎರೆಯುತ್ತಾರೆ' ಎಂದು ಕಿವಿಮಾತು ಹೇಳುವುದರ ಮೂಲಕ ಗುರುವಿನ ಮಹತ್ವವನ್ನು ಅರ್ಥೈಸಿದರು. ವೇದಿಕೆ ಕಾರ್ಯಕ್ರಮದ ನಂತರ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಗುರುಗಳಿಗೆ ವಂದಿಸಿ, ಸಾಮೂಹಿಕ ನೃತ್ಯ ಪ್ರದರ್ಶಿಸಿದರು. ಈ ಸಂದರ್ಭದಲ್ಲಿ ಶಾಲಾ ಮುಖ್ಯೋಪಾಧ್ಯಾಯ ಮೊಹಮ್ಮದ್ ಫಾರೂಕ್, ಶಿಕ್ಷಕ ಹಾಗೂ ವಿದ್ಯಾರ್ಥಿ ವೃಂದದವರು ಉಪಸ್ಥಿತರಿದ್ದರು.**

## ಸ್ವರಾಲಯ ಸಾಂಸ್ಕೃತಿಕ ವೈಭವ

**ಮೈಸೂರು:** ನಗರದ ರಾಮಕೃಷ್ಣನಗರದಲ್ಲಿರುವ ಸ್ವರಾಲಯ ಸಂಗೀತ ಸಂಸ್ಥೆ ಬೆಂಗಳೂರಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದೊಂದಿಗೆ ಜು.13ರಂದು ಭಾನುವಾರ ಸಂಜೆ 4 ಗಂಟೆಗೆ ಜೆಎಲ್‌ಬಿ ರಸ್ತೆಯಲ್ಲಿರುವ ನಾದಬ್ರಹ್ಮ ಸಂಗೀತ ಸಭಾ ಸಭಾಂಗಣದಲ್ಲಿ ಸ್ವರಾಲಯ ಸಾಂಸ್ಕೃತಿಕ ವೈಭವ 2025 ಇದರ ಮುಂದುವರೆದ ಭಾಗವನ್ನು ಆಯೋಜಿಸಲಾಗಿದೆ. ಸಂಗೀತ ಶಿಕ್ಷಕಿ ಶ್ರೀಮತಿ ವಿದುಷಿ ಹೆಚ್.ವಿ.ವಾಸವಾಂಬ ಇವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮುಖ್ಯ ಅತಿಥಿಯಾಗಿ ಕಲಾವಿದೆ ವಿದುಷಿ ಸುಕನ್ಯಾ ಆಗಮಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ವಸಂತಮಹಲ್‌ನ ಉಪನ್ಯಾಸಕಿ ಹಾಗೂ ಗಾಯಕಿ ಕೆ.ಸವಿತಾ ಹಾಗೂ ಅಮೆರಿಕಾದಲ್ಲಿ ವಾಸವಾಗಿರುವ ಕಲಾಪೋಷಕರು ಡಾ.ಸ್ವರ್ಣಂಭ ಲೋಕೇಶ್ ಇವರುಗಳು ಆಗಮಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸ್ವರಾಲಯ ಸಂಸ್ಥಾಪಕ ಅಧ್ಯಕ್ಷೆ ಶ್ರೀಮತಿ ವಿದುಷಿ ಸುಮ ಹರಿನಾಥ್ ವಹಿಸಲಿದ್ದಾರೆ. ಕಾರ್ಯಕ್ರಮಕ್ಕೆ ಉಚಿತ ಪ್ರವೇಶವಿದ್ದು, ಸಂಗೀತಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸ್ವರಾಲಯ ಕಾರ್ಯದರ್ಶಿ ಹೆಚ್.ಎಸ್.ಶ್ರೀಕಾಂತಾಮಣಿ ತಿಳಿಸಿದ್ದಾರೆ.

## ಪ್ರೋತ್ಸಾಹಧನಕ್ಕಾಗಿ ಅರ್ಜಿ

**ಕೋಲಾರ:** ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಲಿಗೆ ವಂತಿಕೆ ಪಾವತಿಸುವ ಸಂಘಟಿತ ಕಾರ್ಮಿಕರ ಮಕ್ಕಳಿಂದ (ಪ್ರೌಢ ಶಾಲೆಯಿಂದ ಸ್ನಾತಕೋತ್ತರ ಪದವಿಯವರೆಗೆ ಹಾಗೂ ವೈದ್ಯಕೀಯ/ ಇಂಜಿಯರಿಂಗ್‌ನಲ್ಲಿ ವ್ಯಾಸಂಗ ಮಾಡುತ್ತಿರುವವರಿಗೆ) 2025–26ನೇ ಸಾಲಿಗೆ ಶೈಕ್ಷಣಿಕ ಪ್ರೋತ್ಸಾಹಧನ ಸಹಾಯಕ್ಕೆ ಆನ್ ಲೈನ್ ಮುಖಾಂತರ ಅರ್ಜಿಯನ್ನು ಆಹ್ವಾನಿಸಲಾಗಿದೆ. ಕಾರ್ಮಿಕನ ಮಾಸಿಕ ವೇತನ ರೂ.35,000/– ಗಿಂತ ಮೀರಿರಬಾರದು. (ಒಂದು ಕುಟುಂಬದಲ್ಲಿ ಇಬ್ಬರು ವಿದ್ಯಾರ್ಥಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು) ಶೈಕ್ಷಣಿಕ ಪ್ರೋತ್ಸಾಹಧನ ಸಹಾಯ ಬಯಸುವ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ ವೆಬ್‌ಸೈಟ್ www.klwbapps.karnakata.gov.inನಲ್ಲಿ ಅರ್ಜಿ ಡಿಸೆಂಬರ್ 12, 2025ರ ವರೆಗೆ ಸಲ್ಲಿಸಬಹುದಾಗಿರುತ್ತದೆ. (ಅರ್ಜಿ ಸಲ್ಲಿಸಲು ವಿದ್ಯಾರ್ಥಿಯು ಹಿಂದಿನ ವರ್ಷದಲ್ಲಿ ಸಾಮಾನ್ಯ ವರ್ಗ ಶೇ. 50. ಪ.ಜಾ/ಪ.ಪಂ 45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು) ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ, ಕಾರ್ಮಿಕ ಕಲ್ಯಾಣ ಭವನ, ನಂ 48, 1ನೇ 2ನೇ ಮಹಡಿ, ಮತ್ತಿಕೆರೆ ಮುಖ್ಯರಸ್ತೆ, ಯಶವಂತಪುರ, ಬೆಂಗಳೂರು–560022. ಇಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ: 080–23475188, 8277291175, 8277120505, 9141585402, 9141602562 ಯನ್ನು ಸಂಪರ್ಕಿಸಬಹು.

## ವಿದ್ಯುತ್ ವ್ಯತ್ಯಯ

**ಕೋಲಾರ:** 220ಕೆವಿ ವಿದ್ಯುತ್ ಸ್ವೀಕರಣಾ ಕೇಂದ್ರ, ಕೋಲಾರದಿಂದ ಹೊರ ಹೋಗುವ ಎಫ್–1, ಎಫ್–10, ಎಫ್–13, ಎಫ್–7, ಎಫ್–20 ಮತ್ತು ಎಫ್–3 ಮಾರ್ಗದ ಯು.ಜಿ ಕೇಬಲ್, ಸ್ಪನ್ ಪೋಲ್ ಅಳವಡಿಸುವ ಕಾಮಗಾರಿಯು ಪ್ರಗತಿಯಲಿದ್ದು, ಈ ಕಾಮಗಾರಿ ಮಾಡುವ ಸಂದರ್ಭದಲ್ಲಿ ಎಫ್–1, ಎಫ್–10, ಎಫ್–13, ಎಫ್–7, ಎಫ್–20 ಮತ್ತು ಎಫ್–3 ಫೀಡರ್‌ನ ಮಾರ್ಗಗಳಿಂದ ವಿದ್ಯುತ್ ಸರಬರಾಜಾಗುವ ಕೋಲಾರ ನಗರ, ಎಸ್.ಎಸ್.ನಗರ, ರೆಹಮತ್ ನಗರ, ಮಿಲ್ಲತ್ ನಗರ, ಮೆಹಬೂಬ್ ನಗರ, ನೂರ್‌ನಗರ, ವಿನಾಯಕ ನಗರ, ಆಜಾದ್ ನಗರ, ಸಿ.ಬಿ.ಪುರ ರಸ್ತೆ, ಬಿಡಿ ಕಾಲೋನಿ, ಆರ್.ಜಿ ಬಡಾವಣೆ, ಶಾಹಿನ್ ಶಾ ನಗರ, ಖಾದ್ರಿಪುರ, ಕೇಶವ ನಗರ, ವಿಭೂತಿಪುರ, ಅಂತರಗಂಗೆ ರಸ್ತೆ, ಕೀಲುಕೋಟೆ, ಕುವೆಂಪು ನಗರ, ಕೆ.ಜಿ.ಮೊಹಲ್ಲಾ, ಸ್ಟೇಡಿಯಂ ಸುತ್ತಮುತ್ತಾ, ಕ್ಲಾಕ್ ಟವರ್, ಫೂಲ್ ಷಾ ಮೊಹಲ್ಲಾ, ಕಠಾರಿಪಾಳ್ಯ, ಎಂ.ಜಿ.ರೋಡ್, ಹೊಸ ಬಡಾವಣೆ, ಹಳೆ ಬಡಾವಣೆ, ದೊಡ್ಡಪೇಟೆ, ಬ್ರಾಹ್ಮಣರ ಬೀದಿ, ಎಂ.ಬಿ.ರಸ್ತೆ, ಹೊಸ ಬಸ್‌ಸ್ಟ್ಯಾಂಡ್, ಕಾರಂಜಿ ಕಟ್ಟೆ, ಮುನೇಶ್ವರ ನಗರ, ಬೋವಿ ಕಾಲೋನಿ, 220 ಸ್ಟೇಷನ್ ಸುತ್ತಮುತ್ತ ಮಡೇರಹಳ್ಳಿ, ಬೆತ್ತನಿ, ಆಟೋನಗರ, ಎ.ಪಿ.ಎಂ.ಸಿ ಯಾರ್ಡ್, ಅಮ್ಮೇರಹಳ್ಳಿ ಮತ್ತು ಸುತ್ತಮುತ್ತಲ ಪ್ರದೇಶಗಳ ಗ್ರಾಹಕರಿಗೆ ಜುಲೈ 12 ರಂದು ಬೆಳಿಗ್ಗೆ 10.00 ಸಂಜೆ 4.00ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

## ಯುವನಿಧಿ ವಿಶೇಷ ನೋಂದಣಿ

**ಕೋಲಾರ:** ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆಯು ಕಳೆದ ಎರಡು ವರ್ಷಗಳಿಂದ ಜಾರಿಯಲ್ಲಿದ್ದು, ಮುಂದುವರೆದಂತೆ 2024–25ನೇ ಸಾಲಿನಲ್ಲಿ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡಿ 2025ರಲ್ಲಿ ತೇರ್ಗಡೆಯಾಗುವ ಪದವಿ/ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ಅಭ್ಯರ್ಥಿಗಳನ್ನು ಯುವನಿಧಿ ಯೋಜನೆ ಅಡಿ ನೋಂದಾಯಿಸಿಕೊಳ್ಳಬಹುದು. ಕಳೆದ ಎರಡು ಶೈಕ್ಷಣಿಕ ಸಾಲಿನಲ್ಲಿ ಪದವಿ/ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ತೇರ್ಗಡೆಯಾಗಿರುವ ಹಾಗೂ ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಯುವನಿಧಿ ಯೋಜನೆಯ ವ್ಯಾಪ್ತಿಗೆ ತರಲು ಜುಲೈ 14 ರಿಂದ ಆಗಸ್ಟ್ 07, 2025ರ ವರೆಗೆ ವಿಶೇಷ ನೋಂದಣಿ ಅಭಿಯಾನವನ್ನು ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಕೋಲಾರದಲ್ಲಿ ಆಯೋಜಿಸಲು ನಿರ್ಧರಿಸಲಾಗಿದೆ. ಈ ಅವಧಿಯಲ್ಲಿ 2022 ರಿಂದ 2024ರ ವರೆಗೆ ತೇರ್ಗಡೆಯಾಗಿ ಯುವನಿಧಿ ಯೋಜನೆಗೆ ನೋಂದಾಯಿತರಾಗದ ಅರ್ಹ ಅಭ್ಯರ್ಥಿಗಳು ತಮ್ಮ ಎಲ್ಲಾ ನಿಗದಿತ ದಾಖಲೆಗಳೊಂದಿಗೆ ಕಛೇರಿಗೆ ಭೇಟಿ ನೀಡಿ ಯೋಜನೆಗೆ ನೋಂದಾಯಿಸಿಕೊಳ್ಳಬಹುದು ಅಥವಾ ಕರ್ನಾಟಕ ರಾಜ್ಯ ಸರ್ಕಾರದ ಸೇವಾ ಸಿಂಧು ಪೋರ್ಟಲ್ ವಿಳಾಸ– https://sevasindhugs.karnataka.gov.inದಲ್ಲಿ ಲಾಗಿನ್ ಆಗಿ ಯೋಜನೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಲು ಹೆಚ್ಚಿನ ಮಾಹಿತಿಗಾಗಿ ಮೊ.ಸಂ:7353232456/9740154413 ಗಳನ್ನು ಅಥವಾ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಅಂತರಗಂಗೆ ರಸ್ತೆ, ಕೋಲಾರ ಕಛೇರಿಯನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯವರು ತಿಳಿಸಿದ್ದಾರೆ.

## ತಮಿಳುನಾಡು ಡಿ.ಎಂ.ಕೆ ವಿರುದ್ಧ ರೈತರ ಆಕ್ರೋಶ



**ಚಾಮರಾಜನಗರ:** ತಮಿಳುನಾಡಿನ ಸ್ಟಾಲಿನ್ ನೇತೃತ್ವದ ಡಿಎಂಕೆ ಪಕ್ಷವು ತನ್ನ ಪ್ರಣಾಳಿಕೆಯಲ್ಲಿ ಮೇಕೆದಾಟು ಜಲಾಶಯ ನಿರ್ಮಾಣ ವಿರೋಧಿಸುವ ಅಂಶ ಸೇರಿಸಿರುವುದು ಖಂಡನೀಯ ಎಂದು ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಆಕ್ರೋಶ ಪಡಿಸಿದರು.

ಚಾಮರಾಜನಗರ ತಾಲೂಕಿನ ಮರಿಯಾಲ ಗ್ರಾಮ ದಲ್ಲಿ ಸಂಘಕ್ಕೆ ಸೇರ್ಪಡೆಯಾದ ರೈತರನ್ನು ಬರಮಾಡಿಕೊಂಡು ನಂತರ ಮಾತನಾಡಿದ ಅವರು, ಕೆಆರ್ ಎಸ್ ಹಾಗೂ ಕಬಿನಿ ಜಲಾ ಶಯಗಳಿಂದ ಹರಿಯುವ ನೀರನ್ನು ಬೆಂಗಳೂರು, ರಾಮನಗರ, ಚೆನ್ನಪಟ್ಟಣಗಳಿಗೆ ಕುಡಿಯುವ ನೀರಿಗಾಗಿ ಪೂರೈಕೆ ಮಾಡುವ ಹಾಗೂ ನ್ಯಾಯಾಧೀಕರಣದ ಸಂಕಷ್ಟ ಸಂದರ್ಭದಲ್ಲಿ ನೀರನ್ನು ಬಳಕೆ ಮಾಡುವ ಉದ್ದೇಶದಿಂದ ಮೇಕೆದಾಟು ಜಲಾಶಯ ನಿ ರ್ಮಾಣ ಅವಶ್ಯಕತೆ ಇದೆ ಎಂದರು.ಆದರೆ, ಎಂ.ಕೆ. ಸ್ಟಾಲಿನ್ ನೇತೃತ್ವದ ಡಿಎಂಕೆ ಪಕ್ಷವು ತನ್ನ ಪ್ರಣಾಳಿಕೆಯಲ್ಲಿ ಮೇಕೆದಾಟು ಯೋಜನೆಗೆ ನಮ್ಮ ವಿರೋಧವಿದ್ದು ಡ್ಯಾಂ ನಿರ್ಮಾಣಕ್ಕೆ ಅವಕಾಶ ಕೊಡುವುದಿಲ್ಲ ಎಂದು ಘೋಷಣೆ ಮಾಡಿರುವುದು ಎರಡು ರಾಜ್ಯಗಳ ಸಾಮರಸ್ಯವನ್ನು ಕದಡಿದಂತಾಗುತ್ತದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಹಾಲಿ ಕಾಂಗ್ರೆಸ್ ಸರ್ಕಾರದ ನಾಯಕರು ಅಧಿಕಾರಕ್ಕೆ ಬಂದರೆ ಮೇಕೆದಾಟು ಯೋಜನೆ ಜಾರಿಗೆ ತರುವುದಾಗಿ ಭರವಸೆ ನೀಡಿದ್ದು ಅದರಂತೆ ಸರ್ಕಾರ ಕೂಡಲೇ ಕ್ರಮವಹಿಸಬೇಕು ಎಂದು ಆಗ್ರಹಿಸಿದರು.

ಈ ಯೋಜನೆಯಿಂದ ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳ ಕೆರೆ ಕಟ್ಟೆಗಳಿಗೆ ನೀರು ತುಂಬಿಸಲು ಪೂರಕವಾಗಿದೆ. ಆದ್ದರಿಂದ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ರಾಜಕೀಯ ಕೆಸರೆರಚಾಟ ನಡೆಸದೇ ಮೇಕೆದಾಟು ಯೋಜನೆಯನ್ನು ಜಾರಿಗೊಳಿಸಬೇಕು. ಮೇಕೆದಾಟು ಯೋಜನೆಗೆ ತಮಿಳುನಾಡು ಸರ್ಕಾರ ಕ್ಯಾತೆ ತೆಗೆದರೆ ರೈತರು ಹೋರಾಟಕ್ಕೆ ಇಳಿಯಬೇಕಾಗುತ್ತದೆ ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ಸಂಘದ ಜಿಲ್ಲಾಧ್ಯಕ್ಷ ಹಾಲಿನ ನಾಗರಾಜು, ಜಿಲ್ಲಾ ಕಾರ್ಯದರ್ಶಿ ಮಲೆಯೂರು ಮಹೇಂದ್ರ, ವಕೀಲ ಪೃಥ್ವಿ, ಪದಾಧಿಕಾರಿಗಳಾದ ಪ್ರಕಾಶ್ಗಾಂಧಿ, ಗುರುವಿನಪುರ ಚಂದ್ರು, ಶ್ಯಾನಾಡ್ರಹಳ್ಳಿ ಬಸವರಾಜು, ರಾಜು, ಶ್ರೀಕಂಠ, ಚಿಕ್ಕಲಿಂಗಪ್ಪ, ವೀರಭದ್ರಸ್ವಾಮಿ, ಕುಮಾರ್, ಮಹೇಂದ್ರ, ಮಂಟನಾಯಕ, ಮಾದಪ್ಪ, ನಾಗರಾಜಪ್ಪ, ಮಹದೇವಸ್ವಾಮಿ ಸೇರಿದಂತೆ ಇತರರಿದ್ದರು.

# ಸಮಾರೋಪ ಸಮಾರಂಭ

**ಚಾಮರಾಜನಗರ:** ಚಾಮರಾಜನಗರ ವಿಶ್ವ ವಿದ್ಯಾನಿಲಯದ ವತಿಯಿಂದ 2024–25 ಶೈಕ್ಷಣಿಕ ಸಾಲಿನ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ಶಿಬಿರದ ಸಮಾರೋಪ ಸಮಾರಂಭ ಕಾರ್ಯಕ್ರಮವು ತಾಲೂಕಿನ ಹೊಂಡರಬಾಳು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆಯಿತು.

ಸಮಾರೋಪ ಸಮಾರಂಭವನ್ನು ಚಾಮರಾಜನಗರ ವಿಶ್ವ ವಿದ್ಯಾನಿಲಯದ ಆಡಳಿತ ಕುಲಸಚಿವರಾದ ಲೋಕನಾಥ್ ಹಾಗೂ ಮೌಲ್ಯಮಾಪನ ಕುಲಸಚಿವರಾದ ವೆಂಕಟರಮಣ ಅವರು ಕಾರ್ಯಕ್ರಮ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಚಾಮರಾಜನಗರ ವಿಶ್ವವಿದ್ಯಾನಿಲಯದ ಎನ್.ಎಸ್.ಎಸ್ ಕಾರ್ಯಕ್ರಮಾಧಿಕಾರಿ ಡಾ. ಆರ್. ಮಹೇಶ್ ಅವರು ವಿಶೇ? ವಾರ್ಷಿಕ ಶಿಬಿರದ ವರದಿಯನ್ನು ಮಂಡಿಸಿದರು.

ಈ ಸಂದರ್ಭದಲ್ಲಿ ಹೊಂಡರಬಾಳು ಗ್ರಾಮ ಪಂಚಾಯಿತಿ ಸದಸ್ಯರಾದ ಚಂದ್ರಕಲಾ, ಸರ್ಕಾರಿ ಶಾಲೆಯ ಮುಖ್ಯ ಶಿಕ್ಷಕರಾದ ತುಳಸಿ, ಗ್ರಾಮದ ಯಜಮಾನರಾದ ಶಿವಕುಮಾರ್, ಚಂದ್ರು, ಕಾಂತರಾಜು, ಮುಖಂಡರಾದ ರಮೇಶ್, ಎಐಬಿಎಸ್‌ಪಿ ಜಿಲ್ಲಾ ಅಧ್ಯಕ್ಷರಾದ ರಾಜೇಂದ್ರ, ಅಂಬೇಡ್ಕರ್ ಸಂಘದ ಅಧ್ಯಕ್ಷರಾದ ಕೃ?ಸ್ವಾಮಿ, ಸಿದ್ದರಾಜೇಗೌಡ, ಮಾಜಿ ಗ್ರಾಮ ಪಂಚಾಯಿತಿ ಸದಸ್ಯರಾದ ಮಂಜುಳ, ಮಹದೇವಸ್ವಾಮಿ, ರೈತ ಮುಖಂಡರಾದ ಶಿವನಂಜಯ್ಯ, ಅಮೃತಭೂಮಿಯ ನಾಗೇಶ್, ಆಶಾ ಕಾರ್ಯಕರ್ತೆ ಶಾಂತಮ್ಮ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



## ಸಾಯಿಬಾಬಾ ಮೂರ್ತಿಗೆ ವಿಶೇಷ ಪೂಜೆ



**ಮೈಸೂರು:** ರಾಮಕೃಷ್ಣನಗರದ ಇ ಮತ್ತು ಎಫ್ ಬ್ಲಾಕ್ ನಲ್ಲಿರುವ ಶ್ರೀ ಪ್ರಸನ್ನ ಗಣಪತಿ ಮತ್ತು ಶ್ರೀ ಶಿರಡಿ ಸಾಯಿ ಶಕ್ತಿ ಸನ್ನದಿ ಟ್ರಸ್ಟ್ ವತಿಯಿಂದ ಗುರುಪೂರ್ಣಿಮೆ ನಿಮಿತ್ತ ಸಾಯಿಬಾಬಾ ಮೂರ್ತಿಗೆ ವೇದಘೋಷಗಳೊಂದಿಗೆ ಜಲಭಿಷೇಕ, ವಿಶೇಷ ಪೂಜೆ ಧಾರ್ಮಿಕ ಕಾರ್ಯಕ್ರಮಗಳು ನಡೆದವು. ಈ ಸಂದರ್ಭದಲ್ಲಿ ಶಾಸಕರಾದ ಜಿ ಟಿ ದೇವೇಗೌಡ ರವರು ದೇವಸ್ಥಾನಕ್ಕೆ ಭೇಟಿ ನೀಡಿ, ಸಾಯಿಬಾಬ ದರ್ಶನ ಪಡೆದರು. ಬಳಿಕ ಮಾತನಾಡಿದ ಅವರು ಪ್ರತಿಯೊಬ್ಬರೂ ಜೀವನದಲ್ಲಿ ಒಂದಲ್ಲ ಒಂದು ರೀತಿಯಲ್ಲಿ ಗುರುವಿನ ಅನುಗ್ರಹಕ್ಕೆ ಒಳಗಾಗಿರುತ್ತಾರೆ ಗುರುವಿನ ಗುಲಾಮನಾಗುವ ತನಕ ದೊರೆಯದಣ್ಣ ಮುಕುತಿ ಎಂಬ ಮಾತಿದೆ, ಗುರುಗಳ ಆಶೀರ್ವಾದ ಮಾರ್ಗದರ್ಶನ, ಆಶೀರ್ವಾದ ಇಲ್ಲದಿದ್ದರೆ ಏನು ಮಾಡಲು ಸಾಧ್ಯವಿಲ್ಲ, ಎಲ್ಲರೂ ಗುರುವಿನ ಪ್ರೀತಿಗೆ ಪಾತ್ರರಾಗಿ, ಅವರ ಆಶೀರ್ವಾದ ಪಡೆದು ಪುನೀತರಾಗಬೇಕು ಎಂದರು. ಬೆಳಗ್ಗೆಯಿಂದ ಸಂಜೆಯವರೆಗೂ ಸಾವಿರಾರು ಭಕ್ತರು ಕುಟುಂಬ ಸಮೇತ ಸಾಯಿಬಾಬಾ ದೇವಸ್ಥಾನಕ್ಕೆ ಭೇಟಿ ನೀಡಿ ಸಾಯಿಬಾಬಾ ದರ್ಶನ ಪಡೆದರು, ಭಕ್ತರಿಗೆ ಪ್ರಸಾದದ ವ್ಯವಸ್ಥೆ ಕಲ್ಪಿಸಲಾಗಿತ್ತು, ಈ ಸಂದರ್ಭದಲ್ಲಿ ಟ್ರಸ್ಟ್ ಅಧ್ಯಕ್ಷರಾದ ಚಾಮಯ್ಯ, ಗೌರವ ಅಧ್ಯಕ್ಷರಾದ ಡಾಕ್ಟರ್ ಸೀತಾ ಲಕ್ಷ್ಮಿ, ಖಜಾಂಚಿ ಗಂಗಾಧರ್, ಮಹದೇವ್ ಗೌಡ, ಶ್ಯಾಮ್, ಮಿರ್ಲೆ ಪಣೀಶ್ ಹಾಗೂ ಇನ್ನಿತರರು ಹಾಜರಿದ್ದರು.

# ಸಂಜೆ ಟಿಪ್ಸ್

## ಜೀವಂತ ಪಳೆಯುಳಿಕೆ ಖ್ಯಾತಿಯ ಮುಳ್ಳು ಬಾಲದ ಮರ ಇಲಿ ಪತ್ತೆ

ಭಾರತೀಯ ಪ್ರಾಣಿ ಸಂಸ್ಥಾನದ ವಿಜ್ಞಾನಿಗಳು ಪಶ್ಚಿಮಘಟ್ಟಗಳಿಗೆ ಸೀಮಿತವಾಗಿರುವಜೀವಂತ ಪಳೆಯುಳಿಕೆ ಖ್ಯಾತಿಯ ಮಲ ಬಾರ್ಮುಳ್ಳು ಬಾಲದಮರಇಲಿಯ ವೈಜ್ಞಾನಿಕವಿಕಸನದಇತಿಹಾಸವನ್ನುವಿವರಿಸುವ ಸಲುವಾಗಿಇದೇಪ್ರಪ್ರಥಮಬಾರಿಗೆಜೈವಿಕತಂತ್ರಜ್ಞಾನದಸಹಯೋಗದಿಂದ ಆಓಂ ಬಾರ್ಕೋಡ್ಗಳನ್ನೂ ರಚಿಸಲಾಗಿದೆ. ಈಅಧ್ಯಯನವು ಪ್ರಾಣಿಯ ಉನ್ನತ ಮಟ್ಟದವರ್ಗೀಕರಣ ಶಸ್ತ್ರದ ಸ್ಪಷ್ಟತೆ ಒದಗಿಸುವಲ್ಲಿ ಸಹಾಯಮಾಡಿದೆ. ಇದುಭಾರತೀಯಜೀವಶಾಸ್ತ್ರೀಯಸಮೀಕ್ಷೆಯವಿವಿಧಪ್ರಾದೇಶಿಕ ಕೇಂದ್ರಗಳ ವಿಜ್ಞಾನಿಗಳ ಸಹಯೋಗದಪ್ರಯತ್ನವಾಗಿದೆ.ಈ ಮಹತ್ವದಆವಿಷ್ಕಾರವನ್ನು ಚಖಖ, ಪಶ್ಚಿಮಪ್ರಾದೇಶಿಕ ಕೇಂದ್ರ (ಪುಣೆ) ನ ಡಾ. ಎಸ್. ಎಸ್. ತಾಳ್ಮಲೆ, ಡಾ. ಕೆ.ಪಿ. ದಿನೇಶ್ಮತ್ತುಶ್ರೀಮತಿ ಎ. ಶಬ್ನಂ; ZSI ಪಶ್ಚಿಮಘಟ್ಟಪ್ರಾದೇಶಿಕಕೇಂದ್ರ (ಕೋಝಿಕೋಡ್) ನ ಡಾ. ಜಾಫರ್ಪಲೋಟ್ಮತ್ತು ದಕ್ಷಿಣಪ್ರಾದೇಶಿಕಕೇಂದ್ರ (ಚೆನ್ನೈ) ನ ಡಾ. ಕೆ. ಎ. ಸುಬ್ರಹ್ಮಣಿಯನ್ಅವರುಸಂಯುಕ್ತವಾಗಿಕೈಗೊಂಡಿದ್ದಾರೆ. ಈ ಸಂಶೋಧನೆಗಳು ಅಂತರ ರಾಷ್ಟ್ರೀಯ ಖ್ಯಾತಿಯ ಸಮೀಕ್ಷಿತಪೀರ್-ರಿವ್ಯೂ ಜರ್ನಲ್



"Journal of Animal Diversity" (ಲೊರೆಸ್ತಾನ್ವಿಶ್ವವಿದ್ಯಾಲಯ, ಇರಾನ್) ಇತ್ತೀಚಿನಸಂಚಿಕೆಯಲ್ಲಿಪ್ರಕಟಿಸಲಾಗಿದೆ. ವೈಜ್ಞಾನಿಕವಾಗಿ ಪ್ಲಾಟಾಕ್ಯಾಂಥಮಿಸ್ಲಾಸಿಯೂರಸ್ ಎಂದು ಕರೆಯಲಾಗುವ ಮಲಬಾರ್ಮುಳ್ಳು ಬಾಲದಮರ ಇಲಿಮೊದಲಬಾರಿ 1859ರಲ್ಲಿ ವಿವರಿಸಲ್ಪಟ್ಟಿದ್ದರೂ, ಪ್ರಜಾತಿಯ ಉದ್ಭವಮತ್ತುವೈಜ್ಞಾನಿಕವಿಕಸನದ ಇತಿಹಾಸವನ್ನುಅರ್ಥಮಾಡಿಕೊಳ್ಳಲು ಅಗತ್ಯವಾದಆಓಂ ಬಾರ್ಕೋಡ್ಗಳನ್ನೂ ಸೃಜಿಸಲು ಸುಮಾರು 166 ವರ್ಷಗಳಕಾಲಕಾಯಬೇಕಾಯಿತುಎಂದುಡಾ.ದಿನೇಶ್ ತಿಳಿಸಿದ್ದಾರೆ. ವಿಕಸನದಇತಿಹಾಸ ಹಾಗುಆಣ್ವಿಕತಂತ್ರಜ್ಞಾನದ, ಅಧ್ಯಯನಗಳಪ್ರಕಾರ, ಪ್ರಸ್ತುತ ಮಲಬಾರ್ಮುಳ್ಳು ಬಾಲದಮರಇಲಿಯಯ ಪೂರ್ವಜರುಇಓಸಿನ್ ಯುಗದಲ್ಲಿ (ಕ್ರಿಸ್ತಪೂರ್ವ 56 ರಿಂದ 33.9 ಮಿಲಿಯನ್ವರ್ಷಗಳಹಿಂದೆ) ವಿಕಾಸನಗೊಂಡಿರಬಹುದುಎಂದು ಸೂಚಿಸುತ್ತದೆ.ಪ್ಲಾಟಾ ಕ್ಯಾಂಥಮಿಸ್ಎಂಬ ಪ್ರಜಾತಿಗೊಂಡ್ವಾನಾ ಖಂಡದ ಉಳಿದಿರುವಜೀವಂತ ಅವಶೇಷವಾಗಿದ್ದು ಪಶ್ಚಿಮಘಟ್ಟಗಳಲ್ಲಿಯಾವುದೇಬಾಹ್ಯರೂಪವಿಜ್ಞಾನ ಬದಲಾವಣೆಯಿಲ್ಲದೇಉಳಿದಿರುವಸಾಧ್ಯತೆಇದೆ.

## ಮೈಸೂರು ಬೋಂಡಾ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಮೈದಾ ಹಿಟ್ಟು- ಕಾಲು ಕೆ.ಜಿ ಮೊಸರು- 200 ಎಂಎಲ್ ಸೋಡಾ ಹಸಿರು ಮೆಣಸಿನಕಾಯಿ - 5 ಶುಂಠಿ ಕೊತ್ತಂಬರಿ ಜಿರಿಗೆ ಉಪ್ಪು ಚಟ್ನಿ ಮಾಡಲು ಬೇಕಾಗುವ ಪದಾರ್ಥಗಳು ತೆಂಗಿನಕಾಯಿ- ಒಂದು ಮುಷ್ಟಿ ಹುರಿಗಡಲೆ- 4 ಟಿಸ್ಪೂನ್ ಹಸಿ ಮೆಣಸು ಹುಣಸೆ ಹುಳಿ ಶುಂಠಿ ಕೊತ್ತಂಬರಿ ಸೊಪ್ಪು ಉಪ್ಪು

### ಮಾಡುವ ವಿಧಾನ

ಮೊದಲು ಒಂದು ಬೌಲ್ಗೆ ಮೈದಾ ಹಿಟ್ಟು ಹಾಕಿಕೊಂಡು ಅದನ್ನು ಜರಡಿ ಹಿಡಿದುಕೊಳ್ಳಿ. ಬಳಿಕ ಇದಕ್ಕೆ ಉಪ್ಪು, ಶುಂಠಿ, ಕೊತ್ತಂಬರಿ ಸೊಪ್ಪು ಹೆಚ್ಚಿಕೊಂಡು ಇದಕ್ಕೆ ಹಾಕಿ. ಇದಕ್ಕೆ ಮೊಸರು ಸಹ ಹಾಕಿಕೊಂಡು ಚೆನ್ನಾಗಿ ಮಿಕ್ಸ್ ಮಾಡಿ. ಸ್ವಲ್ಪ ಸ್ವಲ್ಪ ನೀರು ಹಾಕಿಕೊಳ್ಳುತ್ತಾ ಕೈಯಿಂದಲೇ ಮಿಕ್ಸ್ ಮಾಡಿ. ಈ ಹಿಟ್ಟು ಗಂಟು ಗಂಟಾಗಬಾರದು. ಹೀಗೆ ಮಿಕ್ಸ್ ಮಾಡಿದ ಬಳಿಕ ಹಿಟ್ಟನ್ನು ಒಂದು ಪಾತ್ರೆಗೆ ಹಾಕಿ ಮುಚ್ಚಿಟ್ಟುಕೊಳ್ಳಿ. 15 ನಿಮಿಷ ಮುಚ್ಚಿ ಇಟ್ಟರೆ ಸಾಕಾಗುತ್ತದೆ. ಹೀಗೆ ಹಿಟ್ಟು ಮಾಡಿಟ್ಟ ಬಳಿಕ ಬಳಿಕ ಈ ಸಮಯದಲ್ಲಿ ಚಟ್ನಿ ರೆಡಿ ಮಾಡಿಕೊಳ್ಳಿ. ಈಗ ಒಂದು ಮಿಕ್ಸಿ ಜಾರ್ ತೆಗೆದುಕೊಂಡು ಸ್ವಲ್ಪ ತೆಂಗಿನಕಾಯಿ, ಹುರಿಗಡಲೆ, ಹುಣಸೆಹುಳಿ, ಕೊತ್ತಂಬರಿ ಸೊಪ್ಪು, ಶುಂಠಿ, ಹಸಿ ಮೆಣಸು ರುಚಿಗೆ ತಕ್ಕಷ್ಟು ಉಪ್ಪು ಹಾಕಿಕೊಂಡು ರುಬ್ಬಿಕೊಳ್ಳಿ. ಸ್ವಲ್ಪವೇ ಸ್ವಲ್ಪ ನೀರು ಹಾಕಿಕೊಂಡು ರುಬ್ಬಿಕೊಳ್ಳಿ. ಇದಕ್ಕೆ ಒಗ್ಗರಣೆ ಹಾಕಬೇಕು ಎಂದೇನಿಲ್ಲ. ಇಷ್ಟಾದರೆ ಚಟ್ನಿ ರೆಡಿಯಾಗುತ್ತೆ. ಈಗ ಒಲೆ ಮೇಲೆ ಪಾತ್ರೆ ಇಟ್ಟು ಎಣ್ಣೆ ಕಾಯಲು ಬಿಡಿ. ಮಧ್ಯಮ ಉರಿಯಲ್ಲಿ ನಿಮಗೆ ಯಾವ ಗಾತ್ರಕ್ಕೆ ಬೇಕೋ ಆ ಗಾತ್ರದಲ್ಲಿ ಹಿಟ್ಟು ತೆಗೆದುಕೊಂಡು ಎಣ್ಣೆಗೆ ಬಿಡಿ. ನಿಂಬೆ ಹಣ್ಣಿನ ಗಾತ್ರದಲ್ಲಿ ಮೈಸೂರು ಬೋಂಡಾ ಮಾಡಿಕೊಂಡರೆ ಉತ್ತಮ. ಇಷ್ಟಾದರೆ ನಿಮ್ಮ ಮುಂದೆ ಮೈಸೂರು ಬೋಂಡಾ ರೆಡಿಯಾಗುತ್ತದೆ.

## ಹಸಿ ಬೆಳ್ಳುಳ್ಳಿ ಎಸಳು ತಿನ್ನಿ?



### ಹೆಲ್ತ್ ಟಿಪ್ಸ್

ಮಳೆಗಾಲದಲ್ಲಿ ಅನೇಕ ಜನರು ಅನೇಕ ಕಾಲೋಚಿತ ಕಾಯಿಲೆಗಳಿಗೆ ಬಲಿಯಾಗುತ್ತಾರೆ. ಬೆಳ್ಳುಳ್ಳಿ ಅನೇಕ ರೋಗಗಳನ್ನು ನಿಯಂತ್ರಿಸುವ ಗುಣಗಳಿಂದ ಸಮೃದ್ಧವಾಗಿದೆ. ಪ್ರತಿದಿನ ರಾತ್ರಿ ಎರಡು ಬೆಳ್ಳುಳ್ಳಿ ಎಸಳು ತಿನ್ನುವುದು ಚಯಾಪಚಯ ಕ್ರಿಯೆಯನ್ನು ಸುಧಾರಿಸುತ್ತದೆ. ನೀವು ಪ್ರತಿದಿನ ಬೆಳ್ಳುಳ್ಳಿ ಎಸಳುಗಳನ್ನು ಸೇವಿಸಿದರೆ.. ನಿಮಗೆ ಮಲಬದ್ಧತೆಯಂತಹ ಸಮಸ್ಯೆಗಳು ಇರುವುದಿಲ್ಲ.

ಪ್ರತಿ ರಾತ್ರಿ ಎರಡು ಹಸಿ ಬೆಳ್ಳುಳ್ಳಿ ಎಸಳು ತಿನ್ನುವುದರಿಂದ ನಿಮ್ಮ ರೋಗನಿರೋಧಕ ಶಕ್ತಿ ಹೆಚ್ಚಾಗುತ್ತದೆ ಎಂದು ತಜ್ಞರು ಹೇಳುತ್ತಾರೆ. ಇದು ನಿಮ್ಮನ್ನು ಹಲವು ರೀತಿಯ ಸೋಂಕುಗಳಿಂದ ರಕ್ಷಿಸುತ್ತದೆ. ಚರ್ಮದ ಸಮಸ್ಯೆಗಳು ಮತ್ತು ಕೂದಲು ಉದುರುವಿಕೆ ಮುಂತಾದ ಸಮಸ್ಯೆಗಳು ಸಹ ದೂರವಾಗುತ್ತವೆ ಎಂದು ಅವರು ಹೇಳುತ್ತಾರೆ.

ಬೆಳ್ಳುಳ್ಳಿ ಎಸಳು ತಿನ್ನುವುದರಿಂದ ಕೆಟ್ಟ ಕೊಲೆಸ್ಟ್ರಾಲ್ ಕರಗುತ್ತದೆ. ಇದು ನಿಮ್ಮನ್ನು ಆರೋಗ್ಯವಾಗಿರಿಸುತ್ತದೆ. ರಕ್ತ ಪರಿಚಲನೆ ಸುಧಾರಿಸುತ್ತದೆ. ಅಧಿಕ ರಕ್ತದೊತ್ತಡದಿಂದ ಬಳಲುತ್ತಿರುವ ಜನರು ಪ್ರತಿದಿನ ಬೆಳಿಗ್ಗೆ ಎರಡು ಬೆಳ್ಳುಳ್ಳಿ ಎಸಳುಗಳನ್ನು ಅಗಿಯಬೇಕು. ಇದು ನಿಮ್ಮ ರಕ್ತದೊತ್ತಡವನ್ನು ನಿಯಂತ್ರಣದಲ್ಲಿಡುತ್ತದೆ.

ಬೆಳ್ಳುಳ್ಳಿ ತಿನ್ನುವುದರಿಂದ ಜೀರ್ಣಾಂಗದಲ್ಲಿ ಕಿಣ್ವಗಳ ಉತ್ಪಾದನೆ ಸುಧಾರಿಸುತ್ತದೆ. ಇದು ಜೀರ್ಣಕ್ರಿಯೆಯನ್ನು ಹೆಚ್ಚಿಸುತ್ತದೆ. ಆಸಿಡಿಟಿ ಸಮಸ್ಯೆಗಳನ್ನು ತಡೆಯಬಹುದು. ತೂಕ ಇಳಿಸಿಕೊಳ್ಳಲು ಬಯಸುವವರು ಪ್ರತಿದಿನ ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಎರಡು ಎಸಳು ಬೆಳ್ಳುಳ್ಳಿ ತಿನ್ನಬೇಕು. ಇದು ಚಯಾಪಚಯ ದರವನ್ನು ಹೆಚ್ಚಿಸುತ್ತದೆ ಮತ್ತು ಕ್ಯಾಲೋರಿ ವೆಚ್ಚವನ್ನು ಹೆಚ್ಚಿಸುತ್ತದೆ. ತೂಕ ನಿಯಂತ್ರಣದಲ್ಲಿರುತ್ತದೆ. ಇದರಲ್ಲಿರುವ ಸೆಲೆನಿಯಮ್ ಉತ್ತಮ ನಿದ್ರೆಗೆ ಕಾರಣವಾಗುತ್ತದೆ.

ಬೆಳ್ಳುಳ್ಳಿ ಎಸಳು ಕೊಲೆಸ್ಟ್ರಾಲ್ ಅನ್ನು ಕರಗಿಸುತ್ತದೆ. ಹೃದಯಕ್ಕೆ ರಕ್ತ ಪರಿಚಲನೆಯನ್ನು ಸುಧಾರಿಸುತ್ತದೆ. ಹೃದಯ ರಕ್ತನಾಳದ ಸಮಸ್ಯೆಗಳನ್ನು ತಡೆಯಬಹುದು. ಯಕೃತ್ತು ಬೆಳ್ಳುಳ್ಳಿ ಎಸಳುಗಳು ದೇಹದಿಂದ ವಿಷವನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ. ಹೀಗಾಗಿ, ಯಕೃತ್ತು ಆರೋಗ್ಯಕರವಾಗಿರುತ್ತದೆ. ಬೆಳ್ಳುಳ್ಳಿಯಲ್ಲಿರುವ ಪೋಷಕಾಂಶಗಳು ನರಮಂಡಲವನ್ನು ಶಾಂತಗೊಳಿಸುತ್ತವೆ. ಇದು ಒತ್ತಡವನ್ನು ನಿವಾರಿಸುತ್ತದೆ. ಮಾನಸಿಕ ಆರೋಗ್ಯವನ್ನು ಸುಧಾರಿಸುತ್ತದೆ.

## ಬೇವಿನ ಸ್ಕಬ್

### ಬ್ಯೂಟಿ ಟಿಪ್ಸ್



ಅತಿಯಾದ ಎಣ್ಣೆಯುಕ್ತ ಚರ್ಮದ ಮೇಲೆ ಮೊಡವೆಗಳು ಮತ್ತು ದದ್ದುಗಳು ಕಾಣಿಸಿಕೊಳ್ಳಲು ಪ್ರಾರಂಭಿಸುತ್ತವೆ. ಬೇವಿನ ಸ್ಕಬ್ ಮೊಡವೆಗಳನ್ನು ತೆಗೆದುಹಾಕುವಲ್ಲಿ ಪರಿಣಾಮಕಾರಿ ಎಂದು ಸಾಬೀತಾಗಿದೆ. ಇದು ಚರ್ಮದ ಕಿರಿಕಿರಿಯನ್ನು ಕಡಿಮೆ ಮಾಡುತ್ತದೆ. ಬೇವಿನ ಸ್ಕಬ್ ಮೊಡವೆ ಉಂಟುಮಾಡುವ ಬ್ಯಾಕ್ಟೀರಿಯಾವನ್ನು ಕಡಿಮೆ ಮಾಡುತ್ತದೆ.

ಬೇವಿನ ಎಲೆಗಳು ಮೆಲನಿನ್ ಉತ್ಪಾದನೆಯನ್ನು ನಿಯಂತ್ರಿಸುವ ಗುಣಗಳನ್ನು ಸಹ ಹೊಂದಿವೆ. ಇದು ಹೈಪರ್ಪಿಗ್ಮೆಂಟೇಶನ್ ಸಮಸ್ಯೆಯನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ. ಬೇವಿನ ಸ್ಕಬ್ ಅನ್ನು ಅನ್ವಯಿಸುವುದರಿಂದ ಚರ್ಮದ ಬಣ್ಣವನ್ನು ತೆರವುಗೊಳಿಸಲು ಸಹಾಯ ಮಾಡುತ್ತದೆ ಮತ್ತು ಕಲೆಗಳನ್ನು ತೆಗೆದುಹಾಕುತ್ತದೆ.

ಬೇವಿನ ನಂಜುನಿರೋಧಕ ಮತ್ತು ಬ್ಯಾಕ್ಟೀರಿಯಾ ವಿರೋಧಿ ಗುಣಗಳಿಂದ ಇದು ಚರ್ಮದ ಕಿರಿಕಿರಿಯನ್ನು ಸಹ ಶಮನಗೊಳಿಸುತ್ತದೆ. ಬೇವಿನ ಫೇಸ್ಪ್ಯಾಕ್ ಅನ್ನು ಹಚ್ಚುವುದರಿಂದ ಚರ್ಮವು ಹೈಡ್ರೇಟ್ ಆಗಿರುತ್ತದೆ. ತುರಿಕೆ ಮತ್ತು ಕಿರಿಕಿರಿಯನ್ನು ಕಡಿಮೆ ಮಾಡುತ್ತದೆ.

ಬೇವಿನ ಸ್ಕಬ್ ಮಾಡಲು ಎಲೆಗಳನ್ನು ತೊಳೆದು ನುಣ್ಣಗೆ ಪುಡಿಮಾಡಿ. ಬಯಸಿದರೆ ಬೇವಿನ ಎಲೆಗಳಿಗೆ ಸ್ವಲ್ಪ ಓಟ್ಸ್ ಮತ್ತು ಜೇನುತುಪ್ಪವನ್ನು ಕೂಡ ಸೇರಿಸಬಹುದು. ಇದನ್ನು ಮುಖಕ್ಕೆ ಹಚ್ಚಿ ನಂತರ ಲಘುವಾಗಿ ಸ್ಕಬ್ ಮಾಡುವಾಗ ಉಜ್ಜಿಕೊಳ್ಳಿ. 10 ನಿಮಿಷಗಳ ನಂತರ ನೀರಿನಿಂದ ಮುಖ ತೊಳೆಯಿರಿ. ಇದರಿಂದ ಮೊಡವೆಗಳಿಂದ ಮುಕ್ತಿ ಸಿಗುವುದರ ಜೊತೆಗೆ ಫಳ ಫಳ ಹೊಡೆಯುವ ತ್ವಚೆ ನಿಮ್ಮದಾಗುತ್ತದೆ

## ನಟಿ ರೆಜಿನಾ ಕಸ್ಸಂದ್ರ ಬಗ್ಗೆ ಏನದ್ರು ಗೊತ್ತೇ?



ಸಾಮಾಜಿಕ ಮಾಧ್ಯಮದಲ್ಲಿ ಸಕ್ರಿಯವಾಗಿರುವ ರೆಜಿನಾ ಇತ್ತೀಚಿನ ಸಂದರ್ಶನಗಳಲ್ಲಿ ಅವರು ಆಸಕ್ತಿದಾಯಕ ಕಾಮೆಂಟ್ಗಳನ್ನು ಮಾಡುತ್ತಿದ್ದಾರೆ. ಇತ್ತೀಚೆಗೆ, ಅವರು ಮದುವೆಯ ಬಗ್ಗೆ ತಮ್ಮ ಅಭಿಪ್ರಾಯವನ್ನು ಹಂಚಿಕೊಂಡಿದ್ದು, ಮದುವೆ ಸೆಟ್ ಆಗುವುದಿಲ್ಲ ಎಂದು ಹೇಳುವ ಮೂಲಕ ಶಾಕ್ ನೀಡಿದ್ದಾರೆ.. ನಟಿ ರೆಜಿನಾ ಕಸ್ಸಂದ್ರ, ಡಿಸೆಂಬರ್ 13, 1990 ರಂದು ತಮಿಳುನಾಡಿನ ಮದ್ರಾಸ್ನಲ್ಲಿ ಜನಿಸಿದರು. ಅವರಿಗೆ ಪ್ರಸ್ತುತ 34 ವರ್ಷ. ಅವರು ಮದ್ರಾಸ್ ವಿಶ್ವವಿದ್ಯಾಲಯದಿಂದ ಮನೋವಿಜ್ಞಾನದಲ್ಲಿ ಬಿ.ಜಿ.ಎಸ್ಸಿ ಪದವಿ ಪಡೆದರು. ತಮಿಳು ಕುಟುಂಬದ ಈ ಮುದ್ದಾದ ಹುಡುಗಿ ತೆಲುಗು ಭಾಷೆಯನ್ನು ನಿರರ್ಗಳವಾಗಿ ಮಾತನಾಡುತ್ತಾರೆ. ಅವರು ತೆಲುಗು, ತಮಿಳು ಮತ್ತು ಹಿಂದಿ ಚಿತ್ರಗಳಲ್ಲಿ ನಟಿಸುವ ಮೂಲಕ ಪ್ರೇಕ್ಷಕರನ್ನು ರಂಜಿಸುತ್ತಿದ್ದಾರೆ. ಅವರು 2005 ರಿಂದ ನಾಯಕಿಯಾಗಿ ಸತತವಾಗಿ ಚಲನಚಿತ್ರಗಳನ್ನು ಮಾಡುತ್ತಿದ್ದಾರೆ. ಪ್ರಸ್ತುತ, ಅವರು ಮಹಿಳಾ ಪ್ರಧಾನ ಚಿತ್ರಗಳು ಮತ್ತು ಮಹಿಳಾ ಕೇಂದ್ರಿತ ಕಥೆಗಳಲ್ಲಿ ನಟಿಸಲು ಪ್ರಯತ್ನಿಸುತ್ತಿದ್ದಾರೆ.



ಅನೇಕ ಸಂದರ್ಶನಗಳಲ್ಲಿ ರೆಜಿನಾ ತಮ್ಮ ವೈಯಕ್ತಿಕ ವಿಷಯಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಹಂಚಿಕೊಳ್ಳುತ್ತಾರೆ ಎಂದು ತಿಳಿದಿದೆ. ಅವರು ಯಾವುದೇ ವಿಷಯದ ಬಗ್ಗೆಯೂ ಅದು ಮಡಕೆ ಒಡೆಯುವಷ್ಟು ಸ್ಪಷ್ಟವಾಗಿ ಮಾತನಾಡುತ್ತಾರೆ. ಹೀಗಿರುವಾಗ ರೆಜಿನಾ ಇತ್ತೀಚೆಗೆ ಮದುವೆಯ ಬಗ್ಗೆ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. 'ಯಾವುದೇ ಪುರುಷ ನನ್ನನ್ನು ಶಾಶ್ವತವಾಗಿ ಸಹಿಸಿಕೊಳ್ಳಲು ಸಾಧ್ಯವಿಲ್ಲ. ನಾನು ಯಾರ ಕಂಡೀಷನ್ ಮೇಲೆಯೂ ಬದಲಕು ಇಚ್ಚಿಸುವುದಿಲ್ಲ.. ಆದರೆ ನನಗೆ ಡೇಟಿಂಗ್ ಪರವಾಗಿಲ್ಲ? ಎಂದು ಹೇಳಿದರು. ಅವರ ಕಾಮೆಂಟ್ಗಳು ಈಗ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿವೆ. ರೆಜಿನಾ ಮೊದಲು ತಮಿಳು ಚಿತ್ರಗಳಲ್ಲಿ ನಟಿಸಿ ಹೆಸರು ಮಾಡಿದರು.. ನಂತರ ಅವರು ಸುಧೀರ್ ಬಾಬು ಜೊತೆ ಶಿವ ಮನಸ್ಸಲೋ ಶ್ರುತಿ (ಎಸ್ಎಂಎಸ್) ಚಿತ್ರದಲ್ಲಿ ಟಾಲಿವುಡ್ಗೆ ಪ್ರವೇಶ ಮಾಡಿದರು. ಅವರು ತಮ್ಮ ಮೊದಲ ಚಿತ್ರದಿಂದಲೇ ತೆಲುಗು ಪ್ರೇಕ್ಷಕರನ್ನು ಮೆಚ್ಚಿಸಿದರು. ಅದಾದ ನಂತರ, ಅವರು ರುಟೀನ್ ಲವ್ ಸ್ಟೋರಿ, ಪಿಲ್ಲಾ ನುವ್ವು ಲೇನಿ ಜೀವಂತ, ಪವರ್, ಎ, ವೌರಿ, ಶಾಕಿನಿ ಡಾಕಿನಿ ಮುಂತಾದ ಚಿತ್ರಗಳಲ್ಲಿ ನಟಿಸುವ ಮೂಲಕ ರಂಜಿಸಿದರು. ಅಂತಿಮವಾಗಿ, ಅವರು ವಿದಮುಯಾರ್ಚಿ, ಜಟ್, ಕೇಸರಿ ಅಧ್ಯಾಯ 2 ನಂತಹ ಚಿತ್ರಗಳಲ್ಲಿ ಪೋಷಕ ಪಾತ್ರಗಳಲ್ಲಿ ಮಿಂಚಿದರು. ಆ 3 ಚಿತ್ರಗಳು ಉತ್ತಮ ಯಶಸ್ಸನ್ನು ಕಂಡವು. ರೆಜಿನಾ ಕೊನೆಯದಾಗಿ ತೆಲುಗು ಚಿತ್ರ, ಕಸ್ಸಂದ್ರ ಉತ್ಸವಂನಲ್ಲಿ ನಟಿಸಿದ್ದರು. ಅದಕ್ಕೂ ಮೊದಲು, ಅವರು ಶಾಕಿನಿ ಡಾಕಿನಿ ಚಿತ್ರದ ಮೂಲಕ ಮನರಂಜನೆ ನೀಡಿದರು. ಮೆಗಾಸ್ಟಾರ್ ಚಿರಂಜೀವಿ ಅವರ ಆಚಾರ್ಯ ಚಿತ್ರದಲ್ಲಿ ವಿಶೇಷ ನೃತ್ಯದ ಮೂಲಕವೂ ಅವರು ಸದ್ದು ಮಾಡಿದರು. ಪ್ರಸ್ತುತ, ಅವರು ತಮಿಳಿನಲ್ಲಿ ಎರಡು ಚಿತ್ರಗಳಾದ ಮೌಕ್ತಿ ಅಮ್ಮನ್ 2, ಫ್ಲ್ಯಾಶ್ಬ್ಯಾಕ್ ಮತ್ತು ಹಿಂದಿಯಲ್ಲಿ ಸೆಕ್ಷನ್ 108 ನಲ್ಲಿ ನಟಿಸುವಲ್ಲಿ ನಿರತರಾಗಿದ್ದಾರೆ.

## ಗಿಫ್ಟ್ ಕಾರ್ಡ್ ಹಗರಣ: ನಿಮ್ಮ ಮಾಹಿತಿಯನ್ನು ಯಾವಾಗ ಹಂಚಿಕೊಳ್ಳಬೇಕೆಂದು ತಿಳಿಯಿರಿ

ಗಿಫ್ಟ್ ಕಾರ್ಡ್ಗಳು, ಅಥವಾ ನಿರ್ದಿಷ್ಟವಾಗಿ ಹೇಳಬೇಕಾದರೆ, ಇ-ಗಿಫ್ಟ್ ಕಾರ್ಡ್ಗಳು ಜನಪ್ರಿಯ ಉಡುಗೊರೆಯಾಗಿದ್ದು, ಹುಟ್ಟುಹಬ್ಬಗಳು, ಮದುವೆಗಳಿಗಷ್ಟೇ ಸೀಮಿತವಾಗಿರದೆ ಇತರ ಸಂದರ್ಭಗಳಲ್ಲಿಯೂ, ಗಡಿಬಿಡಿಯಲ್ಲಿ ಉಡುಗೊರೆ ತರಲು ಮರೆತಾಗ ಕೊನೆಯ ಕ್ಷಣದಲ್ಲಿ ಉಡುಗೊರೆಯಾಗಿ ನೀಡಲೂ ಹೇಳಿ ಮಾಡಿಸಿದಂತಾಗಿದೆ. ಆದರೆ, ಗಿಫ್ಟ್ ಕಾರ್ಡ್ಗಳು ಅನಾಮಧೇಯವಾಗಿದ್ದು, ಪತ್ತೆಹಚ್ಚಲಾಗದ ಕಾರಣ ಮತ್ತು ಒಬ್ಬ ವ್ಯಕ್ತಿಗೆ ಶಾಶ್ವತವಾಗಿ ಲಿಂಕ್ ಆಗಿಲ್ಲದ ಕಾರಣ, ದುರದೃಷ್ಟವಶಾತ್ ಇದು ಸ್ಕ್ಯಾಮರ್ಗಳಿಗೆ ವರವಾಗಿದೆ. ಇದು ಗಿಫ್ಟ್ ಕಾರ್ಡ್ಗಳನ್ನು ಆಮಿಷವಾಗಿ ಬಳಸಿಕೊಂಡು ಮುಗ್ಧರಿಂದ ಹಣ ವಂಚಿಸಲು ಸ್ಕ್ಯಾಮರ್ಗಳಿಗೆ ದಾರಿ ಮಾಡಿಕೊಟ್ಟಿದೆ. ಗಿಫ್ಟ್ ಕಾರ್ಡ್ ಹಗರಣಗಳು ಸಾಮಾನ್ಯವಾಗಿ ನಿಮ್ಮನ್ನು ಮೋಸಗೊಳಿಸಲು ಊಹಿಸಬಹುದಾದ ಒಂದು ಮಾದರಿಯನ್ನು ಅನುಸರಿಸುತ್ತವೆ. ವಂಚಕರು ಸಾಮಾನ್ಯವಾಗಿ ನಿಮ್ಮ ಸಹೋದ್ಯೋಗಿ, ತೊಂದರೆಗೀಡಾದ ಕುಟುಂಬ ಸದಸ್ಯರು, ಸರ್ಕಾರಿ ಅಧಿಕಾರಿ, ತಾಂತ್ರಿಕ ಬೆಂಬಲ ಅಥವಾ ಉದ್ಯೋಗದ ಆಫರ್ ಹೊಂದಿರುವ ನೇಮಕಾತಿದಾರರಂತಹ ನೀವು ನಂಬುವ ವ್ಯಕ್ತಿಯಂತೆ ನಟಿಸುತ್ತಾರೆ. ಸಭೆಗೆ ತಕ್ಷಣವೇ ನಿಮಗೆ ಗಿಫ್ಟ್ ಕಾರ್ಡ್ಗಳು ಬೇಕು ಎಂದು ಹೇಳಿಯೋ ಅಥವಾ ಖಾತೆ ಅಮಾನತು ತಪ್ಪಿಸಲೋ, ಕಾನೂನು ಸಮಸ್ಯೆಯನ್ನು ಪರಿಹರಿಸಲೋ ಅಥವಾ ಉದ್ಯೋಗಕ್ಕೆ ಸಂಬಂಧಿಸಿದ ಕಿಟ್ ಅನ್ನು ಪೂರ್ಣಗೊಳಿಸುವಂತಹ ತುರ್ತು ಪರಿಸ್ಥಿತಿಯನ್ನು ಸೃಷ್ಟಿಸಿ ಒತ್ತಡ ಹೇರುತ್ತಾರೆ.

ಗ್ರಾಹಕರು ಇಂತಹ ವಂಚನೆಗಳಿಗೆ ಬಲಿಯಾಗದಂತೆ ರಕ್ಷಿಸಲು PhonePeಯ ಸೈಬರ್ ಸುರಕ್ಷತಾ ತಜ್ಞರು ಕೆಲವು ಸಲಹೆಗಳು ಇಂತಿವೆ. ಉಡುಗೊರೆ ಕಾರ್ಡ್ ವಂಚನೆಗಳಿಂದ ನಿಮ್ಮನ್ನು ರಕ್ಷಿಸಿಕೊಳ್ಳಲು, ನಿಮಗೆ ಪರಿಚಯವಿಲ್ಲದ ಅಥವಾ ನಂಬದ ಯಾರೊಂದಿಗೂ ಗಿಫ್ಟ್ ಕಾರ್ಡ್ ಕೋಡ್ಗಳನ್ನು ಎಂದಿಗೂ ಹಂಚಿಕೊಳ್ಳಬೇಡಿ.

PhonePeನಲ್ಲಿ ನೀವು ಇಂತಹ ವಂಚನೆಗೆ ಗುರಿಯಾಗಿದ್ದರೆ, ನೀವು ಅಂತಹ ವಂಚನೆಗಳನ್ನು PhonePe ಆಪ್ನಲ್ಲಿ ಅಥವಾ ಗ್ರಾಹಕ ಸೇವಾ ಸಂಖ್ಯೆ 080?68727374 / 022?68727374 ಗೆ ಕರೆ ಮಾಡುವ ಮೂಲಕ ಅಥವಾ ಕ್ಷಂಟಿಜಕಜ ಯ ಅಧಿಕೃತ ಸಾಮಾಜಿಕ ಮಾಧ್ಯಮ ಹ್ಯಾಂಡಲ್ಗಳಿಗೆ ತಕ್ಷಣ ವರದಿ ಮಾಡಬಹುದು.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ವಾಹನ, ಭೂಮಿಯಿಂದ ಅನುಕೂಲ, ಅನಾರೋಗ್ಯ, ವಿಪರೀತ ಕೋಪ

**ವೃಷಭ:** ಯಂತ್ರೋಪಕರಣಗಳಿಗೆ ಖರ್ಚು, ಆತುರದ ನಿರ್ಧಾರದಿಂದ ಸಂಕಷ್ಟ, ಸಂಗಾತಿಯ ಬೇಜವಾಬ್ದಾರಿತನ,

**ಮಿಥುನ:** ದುಃಸ್ವಪ್ನಗಳು, ಶತ್ರು ಕಾಟ , ಕುಟುಂಬಸ್ಥರಿಂದ ವಿರೋಧ, ತಂದೆಯಿಂದ ಅಸಹಕಾರ, ಅಕ್ರಮ ಆಲೋಚನೆ

**ಕಟಕ:** ಉದ್ಯೋಗ ಲಾಭ, ಸ್ನೇಹಿತರಿಂದ ಸಹಕಾರ, ಸ್ತ್ರೀಯರಿಂದ ನೋವು, ಮಕ್ಕಳಿಂದ ಅದೃಷ್ಟ ಮತ್ತು ಯೋಗ

**ಸಿಂಹ:** ಸ್ಥಿರಾಸ್ತಿ ಯೋಗ, ಕೈಗಾರಿಕೆಯವರಿಗೆ ಅನುಕೂಲ, ಉದ್ಯೋಗ ಬದಲಾವಣೆಯ ಅದೃಷ್ಟ,

**ಕನ್ಯಾ:** ಕೋರ್ಟ್ ಕೇಸ್ಗಳ ಒದ್ದಾಟ, ಕಲಹಗಳು ಅಪವಾದ ಅಪನಿಂದನೆ, ಸೋಲು ನಷ್ಟ ನಿರಾಸೆ, ಅನಗತ್ಯ ತಿರುಗಾಟ

**ತುಲಾ:** ಅನಿರೀಕ್ಷಿತ ಧನಾಗಮನ, ಸಂಗಾತಿಯಿಂ ಆರ್ಥಿಕ ನೆರವು, ಪಾಲುದಾರಿಕೆಯಲ್ಲಿ ಬೇಸರ, ದಾಂಪತ್ಯದಲ್ಲಿ ತೊಂದರೆ

**ವೃಶ್ಚಿಕ:** ಆಲಸ್ಯ, ಬೇಸರ ಉಡಾಫೆಯ ನಡವಳಿಕೆ, ದಾಂಪತ್ಯದಲ್ಲಿ ವಿರಸ, ಶತ್ರುಗಳು ಮತ್ತು ಸಾಲದ ಗಾಬರಿ,

**ಧನಸ್ಸು:** ಶತ್ರು ದಮನ, ಭಾವನಾತ್ಮಕ ಅಸಮಾಧಾನದಿಂದ ಕೋಪ, ಮಕ್ಕಳಿಂದ ಅನುಕೂಲ,

**ಮಕರ:** ಸ್ಥಿರಾಸ್ತಿ ಯಿಂದ ಶುಭಫಲ, ದೂರದ ವ್ಯಕ್ತಿಗಳಿಂದ ಅನುಕೂಲ, ರಕ್ತಸಂಬಂಗಳಿಂದ ನೋವು, ಮಾಟ ಮಂತ್ರ ತಂತ್ರದ ಸನ್ನಿವೇಶ

**ಕುಂಭ:** ದಾಯಾದಿಗಳಿಂದ ತೊಂದರೆ, ಸ್ಥಿರಾಸ್ತಿ ವಾಹನ ಲಾಭ, ಮಹಿಳೆಯರಿಂದ ಅನುಕೂಲ,

**ಮೀನ:** ಆರ್ಥಿಕ ಚೇತರಿಕೆ, ಉದ್ಯೋಗ ಬದಲಾವಣೆಯಿಂದ ಅವಕಾಶ ಪ್ರಾಪ್ತಿ, ಮಹಿಳೆಯರಿಂದ ತೊಂದರೆಯಾಗುವ ಆತಂಕ, ಪ್ರೇಮಿಗಳಲ್ಲಿ ಮನಸ್ತಾಪ

## ಮಲಾಲಾ ದಿನ

ಪ್ರತಿ ವರ್ಷ ಜುಲೈ 12 ರಂದು ಆಚರಿಸಲಾಗುವ ಮಲಾಲಾ ದಿನವು ಜಾಗತಿಕ ಕಾರ್ಯಚಟುವಟಿಕೆಯಲ್ಲಿ ಒಂದು ಪ್ರಮುಖ ದಿನವಾಗಿದೆ ಏಕೆಂದರೆ ಇದು ಜಾಗತಿಕ ಐಕಾನ್ ಮಲಾಲಾ ಯೂಸಫ್ಜೈ ಅವರನ್ನು ಗೌರವಿಸುತ್ತದೆ ಮತ್ತು ಆಚರಿಸುತ್ತದೆ. ಅವರು ರೂಢಿಯನ್ನು ಮುರಿದು ಚಿಕ್ಕ ವಯಸ್ಸಿನಲ್ಲಿಯೇ ಮಾನವ ಹಕ್ಕುಗಳಿಗಾಗಿ, ವಿಶೇಷವಾಗಿ ಮಹಿಳೆಯರ ಶಿಕ್ಷಣದ ಹಕ್ಕನ್ನು ಪ್ರತಿಪಾದಿಸುವ ಮೂಲಕ ಪ್ರಾಮುಖ್ಯತೆಯನ್ನು ಪಡೆದರು. ಈ ದಿನವು ಮಲಾಲಾ ಅವರ ಜನ್ಮವನ್ನು ಸ್ಮರಿಸುತ್ತದೆ ಮತ್ತು ಅಂತರರಾಷ್ಟ್ರೀಯ ಮಾನವ ಹಕ್ಕುಗಳ ಸಂಸ್ಥೆಗಳು, ವಿಶ್ವಸಂಸ್ಥೆ ಮತ್ತು ಇತರ ಪ್ರಮುಖ ಜಾಗತಿಕ ನಾಗರಿಕರಿಂದ ಜಾಗತಿಕವಾಗಿ ಆಚರಿಸಲ್ಪಡುತ್ತದೆ. ಮಲಾಲಾ ದಿನವು ಅಂತಹ ಮಹತ್ವವನ್ನು ಹೊಂದಿದೆ ಏಕೆಂದರೆ ಅದರ ಹಿಂದೆ ವಿನಮ್ರ ಹಿನ್ನೆಲೆಯಿಂದ ಬಂದ ಯುವಕನೊಬ್ಬ ಜಾಗತಿಕ ಬದಲಾವಣೆಯ ಏಜೆಂಟ್ ಆಗಿ ವಿಕಸನಗೊಳ್ಳುವ ಅಸಾಮಾನ್ಯ ಕಥೆ ಇದೆ. ಮಲಾಲಾ ಯೂಸಫ್ಜೈ ಜುಲೈ 12, 1997 ರಂದು ಕೆಳ ಮಧ್ಯಮ ವರ್ಗದ ಕುಟುಂಬದಲ್ಲಿ ಜನಿಸಿದರು. ಆಕೆಯ ತಂದೆ ಶಿಕ್ಷಕಿ ಮತ್ತು ಶೈಕ್ಷಣಿಕ ಕಾರ್ಯಕರ್ತ. ಆಸ್ಪತ್ರೆಗೆ ಹೋಗಲು ಕುಟುಂಬದಲ್ಲಿ ಸಾಕಷ್ಟು ಹಣವಿಲ್ಲದ ಕಾರಣ ಆಕೆಯ ತಾಯಿ ಮನೆಯಲ್ಲಿಯೇ ಆಕೆಗೆ ಜನ್ಮ ನೀಡಿದರು. ಆಕೆಯ ಹೆಸರು 'ಮಲಾಲಾ' ಎಂದರೆ 'ದುಃಖಿತ' ಎಂದರ್ಥ. ಬೆಳೆದು ಬಂದ ನಂತರ, ಅವಳು ತನ್ನ ಪೋಷಕರು ಮತ್ತು ಇಬ್ಬರು ಕಿರಿಯ ಸಹೋದರರೊಂದಿಗೆ ವಾಸಿಸುತ್ತಿದ್ದಳು. ಮಲಾಲಾ ಯೂಸಫ್ಜೈ ಹೆಚ್ಚಾಗಿ ಶಾಲಾ ಮಾಲೀಕ ಮತ್ತು ಶೈಕ್ಷಣಿಕ ಕಾರ್ಯಕರ್ತರಾಗಿರುವ ಅವರ ತಂದೆಯಿಂದ ಶಿಕ್ಷಣ ಪಡೆದರು, ಅವರು ಖುಶಾಲ್ ಪಬ್ಲಿಕ್ ಸ್ಕೂಲ್ ಎಂದು ಕರೆಯಲ್ಪಡುವ ಖಾಸಗಿ ಶಾಲೆಗಳ ಸರಪಣಿಯನ್ನು ನಡೆಸುತ್ತಿದ್ದಾರೆ, ಖುಶಾಲ್ ಅವರ ಒಬ್ಬ ಮಗನ ಹೆಸರು. ಮಲಾಲಾ ಪಾಷ್ಟೋ, ಉರ್ದು ಮತ್ತು ಇಂಗ್ಲಿಷ್ ಭಾಷೆಗಳಲ್ಲಿ ನಿರರ್ಗಳವಾಗಿ ಮಾತನಾಡುತ್ತಾರೆ ಮತ್ತು ಅವರು ಒಮ್ಮೆ ವೈದ್ಯೆಯಾಗಬೇಕೆಂದು ಬಯಸಿದ್ದರು ಎಂದು ಹೇಳಿದ್ದಾರೆ.

ಮಲಾಲಾ ಯೂಸಫ್ಜೈ ವಿಶ್ವದ ಅತ್ಯಂತ ಕಿರಿಯ ನೊಬೆಲ್ ಪ್ರಶಸ್ತಿ ಪುರಸ್ಕೃತೆ, ಜೊತೆಗೆ ನೊಬೆಲ್ ಪ್ರಶಸ್ತಿ ಪಡೆದ ಎರಡನೇ ಪಾಕಿಸ್ತಾನಿ. ಅವರು ತಮ್ಮ ವಕಾಲತ್ತು ವಹಿಸಿದ್ದಕ್ಕಾಗಿ, ವಿಶೇಷವಾಗಿ ವಾಯುವ್ಯ ಪಾಕಿಸ್ತಾನದ ತನ್ನ ಸ್ಥಳೀಯ ಸ್ವಾತ್ ಕಣಿವೆಯಲ್ಲಿ ಮಹಿಳೆಯರು ಮತ್ತು ಮಕ್ಕಳ ಶಿಕ್ಷಣಕ್ಕಾಗಿ ಪ್ರಸಿದ್ಧರಾಗಿದ್ದಾರೆ ಮತ್ತು ಜಾಗತಿಕವಾಗಿ ಗುರುತಿಸಲ್ಪಟ್ಟಿದ್ದಾರೆ, ಅಲ್ಲಿ ತೆಹ್ರಿಕ್-ಇ-ತಾಲಿಬಾನ್ ಪಾಕಿಸ್ತಾನ್ ಎಂದು ಕರೆಯಲ್ಪಡುವ ಪಾಕಿಸ್ತಾನಿ ಮೂಲಭೂತವಾದಿಗಳ ಗುಂಪು ಹುಡುಗಿಯರು ಶಾಲೆಗೆ ಹೋಗುವುದನ್ನು ನಿಷೇಧಿಸುತ್ತಿತ್ತು. ಮಲಾಲಾ ಯೂಸಫ್ಜೈ ಅವರ ವಕಾಲತ್ತು ಅಂದಿನಿಂದ ಸಂಪೂರ್ಣವಾಗಿ ಅಂತರರಾಷ್ಟ್ರೀಯ ಚಳುವಳಿಯಾಗಿ ವಿಕಸನಗೊಂಡಿದೆ, ಇದು ಅವರನ್ನು ಪಾಕಿಸ್ತಾನದ ಪ್ರಮುಖ ನಾಗರಿಕರನ್ನಾಗಿ ಮಾಡಿದೆ.ಅಕ್ಟೋಬರ್ 9, 2012 ರಂದು, ಪರೀಕ್ಷೆಯಿಂದ ಹಿಂದಿರುಗುತ್ತಿದ್ದಾಗ, ಮಲಾಲಾ ಯೂಸಫ್ಜೈ ಮತ್ತು ಇತರ ಇಬ್ಬರು ಹುಡುಗಿಯರ ಮೇಲೆ ತೆಹ್ರಿಕ್-ಐ ತಾಲಿಬಾನ್ ಸದಸ್ಯನೊಬ್ಬ ಗುಂಡು ಹಾರಿಸಿದನು, ಇದು ಮಲಾಲಾಳ ಚಟುವಟಿಕೆಗೆ ಪ್ರತಿಕ್ರಿಯೆಯಾಗಿ ನಡೆದ ಹತ್ಯೆಯ ಪ್ರಯತ್ನ ಎಂದು ಬಹಿರಂಗವಾಯಿತು.

ಸಂಜೆ ಮುಗಿಲು
ಶನಿವಾರ
12.7.2025



# ಕೇಂದ್ರ ಸರ್ಕಾರದ ವಿರುದ್ಧ ರಾಹುಲ್ ಗಾಂಧಿ ವಾಗ್ದಾಳಿ



**ಒಡಿಶಾ:** ಕೇಂದ್ರ ಸರ್ಕಾರದ ವಿರುದ್ಧ ಪ್ರತಿ ಪಕ್ಷದ ನಾಯಕ ರಾಹುಲ್ ಗಾಂಧಿ ಶುಕ್ರವಾರ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಮಹಾರಾಷ್ಟ್ರದಲ್ಲಿ ಮಾಡಿದಂತೆ ಬಿಹಾರದಲ್ಲಿ ಮುಂಬರುವ ಚುನಾವಣೆಗಳನ್ನು ಹೈಜಾಕ್ ಮಾಡಲು ಬಿಜೆಪಿ ರಣತಂತ್ರ ರೂಪಿಸಿದೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ಭುವನೇಶ್ವರದಲ್ಲಿ ನಡೆದ ಪಕ್ಷದ 'ಸಂವಿಧಾನ್ ಬಚಾವೊ ಸಮಾವೇಶ'ದಲ್ಲಿ ಮಾತನಾಡಿದ ರಾಹುಲ್ ಬಿಹಾರ ವಿಧಾನಸಭಾ ಚುನಾವಣೆಯನ್ನು ಬಿಜೆಪಿ 'ಹೈಜಾಕ್' ಮಾಡುವುದನ್ನು ತಡೆಯಲು ಇಂಡಿಯಾ ಒಕ್ಕೂಟದ ಪಕ್ಷಗಳು ನಿರ್ಧರಿಸಿವೆ ಎಂದು ಘೋಷಿಸಿದರು.

ಮಹಾರಾಷ್ಟ್ರದಂತೆಯೇ, ಬಿಹಾರದಲ್ಲಿ ಚುನಾವಣೆಗಳನ್ನು ಹೈಜಾಕ್ ಮಾಡಲು ಪ್ರಯತ್ನಗಳು ನಡೆಯುತ್ತಿವೆ. ಬಿಜೆಪಿ ದೇಶಾದ್ಯಂತ ಸಂವಿಧಾನದ ಮೇಲೆ ದಾಳಿ ಮಾಡುತ್ತಿದೆ ಎಂದು ಗಾಂಧಿ ಹೇಳಿದ್ದಾರೆ. ಒಡಿಶಾದಲ್ಲಿ ಪಕ್ಷವನ್ನು ಬಲಗೊಳಿಸಲು ಪ್ರಯತ್ನದ ಭಾಗವಾಗಿ ಈ ರ್ಯಾಲಿ ನಡೆಸಲಾಗುತ್ತಿದೆ. ರಾಹುಲ್ ಗಾಂಧಿ ಜತೆಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸಹ ಪಾಲ್ಗೊಂಡಿದ್ದರು.

ರ್ಯಾಲಿ ಉದ್ದೇಶಿಸಿ ಮಾತನಾಡಿದ ಗಾಂಧಿ, ಬಿಜೆಪಿ ಮತ್ತು ಒಡಿಶಾ ರಾಜ್ಯ ಸರ್ಕಾರದ ವಿರುದ್ಧ ತೀವ್ರ ದಾಳಿ ನಡೆಸಿದರು, ಬುಡಕಟ್ಟು ಜನಾಂಗದವರು, ರೈತರು ಮತ್ತು ಬಡವರ ಹಿತಾಸಕ್ತಿಗಳಿಗಿಂತ ಅದಾನಿಯಂತಹ ಕೈಗಾರಿಕೋದ್ಯಮಿಗಳಿಗೆ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಆರೋಪಿಸಿದರು. ಅದಾನಿಯ ಲಾಭಕ್ಕಾಗಿ ಜಗನ್ನಾಥ ರಥಯಾತ್ರೆ ರಥವನ್ನು ನಿಲ್ಲಿಸಲಾಗಿದೆ ಮತ್ತು ಬುಡಕಟ್ಟು ಜನಾಂಗದವರಿಗೆ ಭೂ ಹಕ್ಕುಗಳ ನಿರಾಕರಣೆ ಮಾಡಲಾಗುತ್ತಿದೆ ಎಂದು ಟೀಕಿಸಿದರು. ಮಹಿಳೆಯರ ವಿರುದ್ಧ ಹೆಚ್ಚುತ್ತಿರುವ ಅಪರಾಧಗಳ ಬಗ್ಗೆಯೂ ಅವರು ಕಳವಳ ವ್ಯಕ್ತಪಡಿಸಿದರು. ಒಡಿಶಾದಲ್ಲಿ 40,000 ಜನರು ಕಾಣೆಯಾಗಿದ್ದಾರೆ ಎಂದು ಅವರು ಹೇಳಿಕೊಂಡರು. ತಳ ಅಂಚಿನಲ್ಲಿರುವ ಸಮುದಾಯಗಳಿಗೆ ಪ್ರಾತಿನಿಧ್ಯವನ್ನು ಖಚಿತಪಡಿಸಿಕೊಳ್ಳಲು ಜಾತಿ ಜನಗಣತಿ ಮಾಡುವಂತೆ ರಾಹುಲ್ ಕರೆ ನೀಡಿದರು. ಬುಡಕಟ್ಟು ಜನಾಂಗದವರಿಗೆ ಭೂಮಿಯನ್ನು ಹಿಂದಿರುಗಿಸುವುದಾಗಿ ಅವರು ಇದೇ ವೇಳೆ, ಭರವಸೆ ನೀಡಿದರು. ಕಾಂಗ್ರೆಸ್ ಸಂವಿಧಾನ ಮತ್ತು ತುಳಿತಕ್ಕೊಳಗಾದವರನ್ನು ರಕ್ಷಿಸುತ್ತದೆ ಎಂದು ಪ್ರತಿಜ್ಞೆ ಮಾಡಿದರು.

## ದೇಶಿ ಮಾಧ್ಯಮಗಳಿಗೆ ಸವಾಲು ಹಾಕಿದ ಅಜಿತ್ ದೋವಲ್

**ಚೆನ್ನೈ (ತಮಿಳುನಾಡು):** ದೇಶ ಉತ್ತಮ ಪ್ರಗತಿಯಲ್ಲಿದ್ದು, 2047ರ ವೇಳೆಗೆ ಭಾರತದ ಜಿಡಿಪಿ ಎಂಟು ಪಟ್ಟು ಬೆಳೆಯಬಹುದು ಎಂದು ರಾಷ್ಟ್ರೀಯ ಭದ್ರತಾ (ಎನ್ಎಸ್ಎ) ಸಲಹೆಗಾರ ಅಜಿತ್ ದೋವಲ್ ಭವಿಷ್ಯ ನುಡಿದಿದ್ದಾರೆ. ಶುಕ್ರವಾರ ನಡೆದ ಐಐಟಿ-ಮದ್ರಾಸ್ನ 62ನೇ ಘಟಿಕೋತ್ಸವ ಸಮಾರಂಭದಲ್ಲಿ ಭಾಗಿಯಾಗಿ ಮಾತನಾಡಿದ ದೋವಲ್, ವಿದ್ಯಾರ್ಥಿಗಳು ಭವಿಷ್ಯದ ಭಾರತವನ್ನು ಕಟ್ಟಲು ತಮ್ಮನ್ನು ತಾವು ಕ್ರಿಯಾತ್ಮಕವಾಗಿ ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ದೇಶದ ಈ ಹಿಂದಿನ ಆರ್ಥಿಕ ಸ್ಥಿತಿ ಮತ್ತು ಸದ್ಯ ಏರುಗತಿಯಲ್ಲಿರುವ ಜಿಡಿಪಿ, ಭಾರತದ ರಕ್ಷಣಾ ವ್ಯವಸ್ಥೆ, ತಂತ್ರಜ್ಞಾನ ಮತ್ತು ಪಾಕ್ ವಿರುದ್ಧದ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಸೇರಿದಂತೆ ಹಲವು ವಿಚಾರಗಳ ಕುರಿತು ಇದೇ ವೇದಿಕೆಯಲ್ಲಿ ಪ್ರಸ್ತಾಪ ಮಾಡಿದರು. ಪಾಕ್ ವಿರುದ್ಧದ ಆಪರೇಷನ್ ಸಿಂಧೂರ್ ಬಗ್ಗೆ ನಮಗೆ ಹೆಮ್ಮೆ ಇದೆ. ಈ ಕಾರ್ಯಾಚರಣೆ ವೇಳೆ ನಾವು ಸ್ಥಳೀಯ (ದೇಶೀಯ) ತಂತ್ರಜ್ಞಾನವನ್ನು ಬಳಸಿರುವುದು ನಮಗೆ ಹೆಮ್ಮೆ ಇದೆ. ಗಡಿಯಾಚೆಗಿನ ಒಂಭತ್ತು ಪಾಕಿಸ್ತಾನಿ ನೆಲೆಗಳ ಮೇಲೆ ನಿಖರವಾದ ದಾಳಿ ಮಾಡಲು ನಾವು ನಿರ್ಧರಿಸಿದ್ದೆವು. ಇವುಗಳಲ್ಲಿ, ಗಡಿ ಪ್ರದೇಶದಲ್ಲಿ ಒಂದೇ ಒಂದು ನೆಲೆ ಇರಲಿಲ್ಲ. ನಮ್ಮ ಎಲ್ಲಾ ಗುರಿಗಳು ನಿಖರವಾಗಿದ್ದವು. ಅಂದುಕೊಂಡಂತೆ ನಾವು ಭಯೋತ್ಪಾದಕ ನೆಲೆಗಳನ್ನು ಮಾತ್ರ ನಾಶಪಡಿಸಿದ್ದೇವೆ. ಅದನ್ನು ಬಿಟ್ಟು ಬೇರೆಲ್ಲಿಯೂ ದಾಳಿ ಮಾಡಿಲ್ಲ. ಯಾರು ಎಲ್ಲಿದ್ದಾರೆಂಬ ಮಾಹಿತಿ ನಿಖರವಾಗಿತ್ತು. ಇಡೀ ಕಾರ್ಯಾಚರಣೆಯನ್ನು ಕೇವಲ 23 ನಿಮಿಷಗಳಲ್ಲಿ ಮಾತ್ರ ಪೂರ್ಣಗೊಳಿಸಲಾಗಿದೆ. ಯಾವುದೇ ತಪ್ಪಿಗೆ ಅವಕಾಶವಿಲ್ಲ, ಯಾವುದೇ ಅನಿರೀಕ್ಷಿತ ಹಾನಿಯನ್ನುಂಟು ಮಾಡಿಲ್ಲ. ಈ ಕಾರ್ಯಾಚರಣೆಯಲ್ಲಿ ಭಾರತಕ್ಕೆ ಹಾನಿಯುಂಟಾಗಿದೆ ಎಂದು ತೋರಿಸುವ ಒಂದು ಚಿತ್ರವಿದ್ದರೆ ನನಗೆ ತೋರಿಸಿ ಎಂದು ಸವಾಲು ಹಾಕಿದರು.



## ಕೆನಡಾದಲ್ಲಿ ಕಪಿಲ್ ಶರ್ಮಾ ಒಡೆತನದ ಕೆಫೆ ಮೇಲೆ ಭೀಕರ ಗುಂಡಿನ ದಾಳಿ

ಸರ್ರೆ (ಕೆನಡಾ): ಕೆನಡಾದ ಬ್ರಿಟಿಷ್ ಕೊಲಂಬಿಯಾದ ಸರ್ರೆಯಲ್ಲಿರುವ ಹಾಸ್ಯನಟ ಕಪಿಲ್ ಶರ್ಮಾ ಒಡೆತನದ ಕ್ಯಾಪ್ಸ್ ಕೆಫೆ ರೆಸ್ಟೋರೆಂಟ್ ಮೇಲೆ ಬುಧವಾರ ತಡರಾತ್ರಿ ಗುಂಡಿನ ದಾಳಿ ನಡೆದಿದೆ. ಕೆಫೆ ಆರಂಭಿಸಿದ ಕೆಲವೇ ದಿನಗಳಲ್ಲಿ ಈ ಘಟನೆ ಸಂಭವಿಸಿದ್ದು, ತೀವ್ರ ಕಳವಳಕ್ಕೆ ಕಾರಣವಾಗಿದೆ. ಅದೃಷ್ಟವಶಾತ್, ಯಾರಿಗೂ ಗಾಯಗಳಾಗಿಲ್ಲ ಎಂದು ವರದಿಯಾಗಿದೆ.

ಅಧಿಕಾರಿಗಳ ಪ್ರಕಾರ, ಕಟ್ಟಡದ ಮೇಲೆ ಕನಿಷ್ಠ ಒಂಬತ್ತು ಗುಂಡು ಹಾರಿಸಲಾಗಿದೆ. ದಾಳಿಯ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ. ಕಾರಿನೊಳಗೆ ಕುಳಿತಿದ್ದ ವ್ಯಕ್ತಿಯೊಬ್ಬ ಕೆಫೆಯ ಗಾಜಿನ ಕಿಟಕಿಗಳ ಮೇಲೆ ನಿರಂತರ ಗುಂಡು ಹಾರಿಸುತ್ತಿರುವುದು ವಿಡಿಯೋದಲ್ಲಿ ಸೆರೆಯಾಗಿದೆ. ಪಕ್ಕದ ವಸತಿ ಕಟ್ಟಡಗಳ ಮೇಲೂ ಗುಂಡುಗಳ ಗುರುತುಗಳು ಕಂಡುಬಂದಿವೆ. ದಾಳಿಕೋರರು ಕಾರಿನಲ್ಲಿ ಬಂದು ಕೃತ್ಯ ಎಸಗಿ ತಕ್ಷಣ ಸ್ಥಳದಿಂದ ಪರಾರಿಯಾಗಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

ಈ ದಾಳಿಯ ಹೊಣೆಯನ್ನು ಖಲಿಸ್ತಾನಿ ಭಯೋತ್ಪಾದಕ ಹರ್ಜೀತ್ ಸಿಂಗ್ ಲಡ್ಡಿ ಹೊತ್ತುಕೊಂಡಿದ್ದಾರೆ. ಭಾರತದ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್ಐಎ) ಪಟ್ಟಿ ಮಾಡಿರುವ ವಾಂಟೆಡ್ ವ್ಯಕ್ತಿ ಲಡ್ಡಿ, ನಿಷೇಧಿತ ಉಗ್ರಗಾಮಿ ಗುಂಪು ಬಬ್ಬರ್ ಖಾಲ್ಸಾ ಇಂಟರ್ನ್ಯಾಷನಲ್ (ಬಿಕೆಐ) ಜೊತೆ ಸಂಪರ್ಕ ಹೊಂದಿದ್ದಾನೆ. ಕಪಿಲ್ ಶರ್ಮಾ ಈ ಹಿಂದೆ ನೀಡಿದ ಹೇಳಿಕೆಗೆ ಪ್ರತಿಯಾಗಿ ಲಡ್ಡಿ ಈ ದಾಳಿ ಎಸಗಿರುವ ಶಂಕೆ ವ್ಯಕ್ತವಾಗಿದೆ ಎಂದು ವರದಿಗಳಾಗಿವೆ. 2023ರ ಏಪ್ರಿಲ್ನಲ್ಲಿ ಪಂಜಾಬ್ನ ರೂಪನಗರ ಜಿಲ್ಲೆಯಲ್ಲಿ ಕೊಲೆಯಾದ ವಿಶ್ವ ಹಿಂದೂ ಪರಿಷತ್ (ವಿಎಚ್ಪಿ) ನಾಯಕ ವಿಕಾಸ್ ಪ್ರಭಾಕರ್ ಹತ್ಯೆ ಪ್ರಕರಣದಲ್ಲಿ ಹರ್ಜೀತ್ ಸಿಂಗ್ ಲಡ್ಡಿ ಕೂಡ ಎನ್ಐಎಗೆ ಬೇಕಾಗಿದ್ದಾರೆ.




## ನಾನು ಎಂಜಿನ್ ಆಫ್ ಮಾಡಿಲ್ಲ; ಪೈಲಟ್‌ಗಳ ನಡುವಿನ ಸಂಭಾಷಣೆ ಬಹಿರಂಗ– ಪ್ರಾಥಮಿಕ ವರದಿಯಲ್ಲಿ ಆಘಾತಕಾರಿ ಅಂಶ

# ಏರ್ ಇಂಡಿಯಾ ಪತನಕ್ಕೆ ಟ್ವಿಸ್ಟ್



**ಗುಜರಾತ್:** ಅಹಮದಾಬಾದ್‌ನಲ್ಲಿ ಜೂನ್ 12 ರಂದು ಸಂಭವಿಸಿದ್ದ ಏರ್ ಇಂಡಿಯಾ ವಿಮಾನ ಅಪಘಾತದ ಪ್ರಾಥಮಿಕ ತನಿಖಾ ವರದಿ ಸಲ್ಲಿಕೆಯಾಗಿದ್ದು, ಅದರಲ್ಲಿರುವ ಮಾಹಿತಿ ಬಹಿರಂಗವಾಗಿದೆ.

ಈ ಘಟನೆಯ ಕುರಿತು ವಿಮಾನ ಅಪಘಾತ ತನಿಖಾ ಬ್ಯೂರೋ ಪ್ರಾಥಮಿಕ ವರದಿ ಬಹಿರಂಗಗೊಂಡಿದ್ದು, ಹಲವು ಅಂಶಗಳು ಬೆಳಕಿಗೆ ಬಂದಿವೆ. ಬೋಯಿಂಗ್ 787 ಡ್ರೀಮ್‌ಲೈನರ್ ವಿಮಾನದಲ್ಲಿ ಏನೆಲ್ಲಾ ಆಯ್ತು ಎಂಬುದನ್ನು15 ಪುಟಗಳ ವರದಿ ಬಹಿರಂಗಪಡಿಸಿದೆ.

AAIBಸಲ್ಲಿಸಿರುವ 15 ಪುಟಗಳ ಪ್ರಾಥಮಿಕ ತನಿಖಾ ವರದಿಯಲ್ಲಿ ಹಲವು ಆಘಾತಕಾರಿ ಮಾಹಿತಿ ಬಹಿರಂಗವಾಗಿದೆ. ವರದಿಯ ಪ್ರಕಾರ, ಟೇಕ್ ಆಫ್ ಆದ ಕೆಲವೇ ಸೆಕೆಂಡುಗಳಲ್ಲಿ ವಿಮಾನದ ಎರಡೂ ಎಂಜಿನ್‌ಗಳು ಸ್ಥಗಿತಗೊಂಡಿವೆ, ಆ ನಂತರ ವಿಮಾನ ಪತನವಾಗಿದೆ.

ವಿಮಾನದ ಎಂಜಿನ್‌ಗೆ ಇಂಧನ ಪೂರೈಕೆ ಸ್ಥಗಿತಗೊಂಡಿರುವುದು ಸೇರಿದಂತೆ ಹಲವಾರು ಪ್ರಮುಖ ವಿಷಯಗಳನ್ನು ಎಎಐಬಿ ಗಮನಸೆಳೆದಿದೆ. ಆದಾಗ್ಯೂ, ತನಿಖಾ ಬ್ಯೂರೋ, ಈ ವರದಿ ಪ್ರಾಥಮಿಕ ಎಂದು ಹೇಳಿದೆ. ಪ್ರಸ್ತುತ, ಅಪಘಾತದ ವಿವರವಾದ ತನಿಖೆ ನಡೆಯುತ್ತಿದೆ.

ಎಎಐಬಿ ಪ್ರಾಥಮಿಕ ವರದಿಯ ಪ್ರಕಾರ, ಟೇಕಾಫ್ ನಂತರ ಎಂಜಿನ್‌ಗಳ ಇಂಧನ ಸ್ವಿಚ್‌ಗಳು ಇದ್ದಕ್ಕಿದ್ದಂತೆ RUN ನಿಂದ CUTOFF ಗೆ ಬದಲಾದವು. ಈ ಘಟನೆ ಕೇವಲ 1 ಸೆಕೆಂಡ್ ಅಂತರದಲ್ಲಿ ಸಂಭವಿಸಿದೆ. ಈ ಸಮಯದಲ್ಲಿ, ಎಂಜಿನ್‌ಗಳಿಗೆ ಇಂಧನ ಬರುವುದನ್ನು ನಿಂತುಹೋಗಿದೆ.

ಕಾಕ್‌ಪಿಟ್‌ನಲ್ಲಿ ಪೈಲಟ್‌ಗಳ ನಡುವೆ ನಡೆದ ಸಂಭಾಷಣೆಯ ಬಗ್ಗೆಯೂ ವರದಿಯಲ್ಲಿ ಉಲ್ಲೇಖಿಸಲಾಗಿದೆ. ಕಾಕ್‌ಪಿಟ್ ವಾಯ್ಸ್ ರೆಕಾರ್ಡರ್ ಪ್ರಕಾರ, ಒಬ್ಬ ಪೈಲಟ್ ಮತ್ತೊಬ್ಬ ಪೈಲಟ್ ಬಳಿ, 'ನೀವು ಎಂಜಿನ್ ಅನ್ನು ಏಕೆ ಆಫ್ ಮಾಡಿದ್ದೀರಿ' ಎಂದು ಕೇಳಿದ್ದಾರೆ. ಆಗ ಮತ್ತೊಬ್ಬ ಪೈಟಲ್, 'ನಾನು ಏನನ್ನೂ ಮಾಡಲಿಲ್ಲ' ಎಂದು ಹೇಳಿದ್ದಾರೆ. ಇಬ್ಬರು ಪೈಲಟ್ ಗಳ ನಡುವಿನ ಈ ಸಂಭಾಷಣೆ ಗಮನಿಸಿದರೆ, ಯಾರೂ ಉದ್ದೇಶಪೂರ್ವಕವಾಗಿ ಇಂಧನ ಸ್ವಿಚ್ ಕಡಿತಗೊಳಿಸಿಲ್ಲ ಎಂಬುದು ಸ್ಪಷ್ಟವಾಗುತ್ತದೆ.

ತುರ್ತು ಪರಿಸ್ಥಿತಿ ಅರಿವಿಗೆ ಬರುತ್ತಿದ್ದಂತೆಯೇ ವಿಮಾನದ ಸ್ವಯಂಚಾಲಿತ ವ್ಯವಸ್ಥೆಯನ್ನು ಸಕ್ರಿಯಗೊಳಿಸಲು ಪ್ರಯತ್ನಿಸಲಾಯಿತು. ಆದಾಗ್ಯೂ, ರಾಮ್ ಏರ್ ಟರ್ಬೈನ್ ಅಂದರೆ, ತುರ್ತು ಫ್ಯಾನ್ ಮತ್ತು ಎಪಿಯುನಂತಹ ವ್ಯವಸ್ಥೆಗಳನ್ನು ಸಕ್ರಿಯಗೊಳಿಸಿದ ನಂತರವೂ, ವಿಮಾನವನ್ನು ಅಪಘಾತದಿಂದ ರಕ್ಷಿಸಲು ಪೈಟಲ್‌ಗಳಿಗೆ ಸಾಧ್ಯವಾಗಲಿಲ್ಲ. ವಿಮಾನದಲ್ಲಿ ವಿದ್ಯುತ್ ಸರಬರಾಜಿನಲ್ಲಿ ಸಮಸ್ಯೆ ಇದ್ದಾಗ ಮಾತ್ರ ರಾಮ್ ಏರ್ ಟರ್ಬೈನ್ ಸಕ್ರಿಯವಾಗುತ್ತದೆ. ಇದರರ್ಥ, ಎಂಜಿನ್ ಸ್ಥಗಿತಗೊಂಡಿದ್ದು ವಿಮಾನದ ವಿದ್ಯುತ್ ಪೂರೈಕೆ ಮೇಲೂ ಪರಿಣಾಮ ಬೀರಿತ್ತು.

ಏರ್ ಇಂಡಿಯಾ ಬೋಯಿಂಗ್ 787-8 ವಿಮಾನ ಜೂನ್ 12 ರಂದು ಅಹಮದಾಬಾದ್‌ನಿಂದ ಲಂಡನ್ ಗ್ಯಾಟ್ವಿಕ್‌ಗೆ ಹೊರಟ ಸ್ವಲ್ಪ ಸಮಯದ ನಂತರ ವೈದ್ಯಕೀಯ ಕಾಲೇಜಿನ ಹಾಸ್ಟೆಲ್ ಆವರಣಕ್ಕೆ ಅಪ್ಪಳಿಸಿತ್ತು. ವಿಮಾನದಲ್ಲಿದ್ದ 241 ಪ್ರಯಾಣಿಕರು ಸೇರಿದಂತೆ 275 ಜನರು ಸಾವನ್ನಪ್ಪಿದ್ದರು. ವಿಮಾನವು ಏರ್‌ಪೋರ್ಟ್‌ನ ಹೊರಗಿನ ಕಟ್ಟಡಗಳಿಗೆ ಡಿಕ್ಕಿ ಹೊಡೆಯುವ ಕೆಲವೇ ಸೆಕೆಂಡುಗಳ ಮೊದಲು, 08:09:05 ಯುಟಿಸಿ ಗೆ ತುರ್ತು ಕರೆ ಮಾಡಲಾಯಿತು. ಈ ವೇಳೆ ಮೇ ಡೇ ಎಂಬ ಸಂದೇಶವನ್ನು ಪೈಲಟ್ ಕೊಟ್ಟಿದ್ದರು.

## ಎಕ್ಸ್ ಸಿಇಒ ಹುದ್ದೆಗೆ ಲಿಂಡಾ ಯಾಕರಿನೊ ರಾಜೀನಾಮೆ

ಟ್ವಿಟರ್ ಎಂದು ಕರೆಯಲಾಗುತ್ತಿದ್ದ ಸಾಮಾಜಿಕ ಮಾಧ್ಯಮ ವೇದಿಕೆಯಾದ ಎಕ್ಸ್‌ನ ಸಿಇಒ ಲಿಂಡಾ ಯಾಕರಿನೊ ಬುಧವಾರ ತಮ್ಮ ದೀರ್ಘ ಎಕ್ಸ್ ಪೋಸ್ಟ್‌ನಲ್ಲಿ ತಮ್ಮ ರಾಜೀನಾಮೆಯ ನಿರ್ಧಾರವನ್ನು ಪ್ರಕಟಿಸಿದ್ದಾರೆ. ಮಸ್ಕ್ ತನ್ನ ವೇದಿಕೆಯನ್ನು ಪರಿವರ್ತಿಸುವ ದೃಷ್ಟಿಕೋನವನ್ನು ಕಾರ್ಯಗತಗೊಳಿಸಲು ಸಹಾಯ ಮಾಡಲು 2023 ರಲ್ಲಿ ಯಾಕರಿನೊ ಫಿ ನಲ್ಲಿ ಉನ್ನತ ಹುದ್ದೆಯನ್ನು ವಹಿಸಿಕೊಂಡರು. ತಮ್ಮ ಪೋಸ್ಟ್‌ನಲ್ಲಿ, ಯಾಕರಿನೊ ಹೀಗೆ ಹೇಳಿದರು, ''ಎರಡು ಅದ್ಭುತ ವರ್ಷಗಳ ನಂತರ, ನಾನು ನ ಅಇಔ ಹುದ್ದೆಯಿಂದ ಕೆಳಗಿಳಿಯಲು ನಿರ್ಧರಿಸಿದ್ದೇನೆ. ಜಟಂಟಿಟಣಇ ಮತ್ತು ನಾನು ಮೊದಲು ಅವರ ಫಿ ಗಾಗಿ ದೃಷ್ಟಿಕೋನದ ಬಗ್ಗೆ ಮಾತನಾಡಿದಾಗ, ಈ ಕಂಪನಿಯ ಅಸಾಧಾರಣ ಧ್ಯೇಯವನ್ನು ನಿರ್ವಹಿಸಲು ಇದು ಜೀವಮಾನದ ಅವಕಾಶ ಎಂದು ನನಗೆ ತಿಳಿದಿತ್ತು. ವಾಕ್ ಸ್ವಾತಂತ್ರ್ಯವನ್ನು ರಕ್ಷಿಸುವ, ಕಂಪನಿಯನ್ನು ತಿರುಗಿಸುವ ಮತ್ತು ಫಿ ಅನ್ನು ಎವೆರಿಥಿಂಗ್ ಅಪ್ಲಿಕೇಶನ್ ಆಗಿ ಪರಿವರ್ತಿಸುವ ಜವಾಬ್ದಾರಿಯನ್ನು ನನಗೆ ವಹಿಸಿದ್ದಕ್ಕಾಗಿ ನಾನು ಅವರಿಗೆ ಅಪಾರವಾಗಿ ಕೃತಜ್ಞನಾಗಿದ್ದೇನೆ.'' ''ಫಿ ತಂಡದ ಬಗ್ಗೆ ನನಗೆ ನಂಬಲಾಗದಷ್ಟು ಹೆಮ್ಮೆಯಿದೆ ? ನಾವು ಒಟ್ಟಾಗಿ ಸಾಧಿಸಿದ ಐತಿಹಾಸಿಕ ವ್ಯವಹಾರ ತಿರುವು ಗಮನಾರ್ಹವಾಗಿದೆ'' ಎಂದು ಅವರು ಹೇಳಿದರು.

## 15 ಅಡಿ ಉದ್ದದ ಹೆಬ್ಬಾವನ್ನು ಬರಿಗೈಯಲ್ಲಿ ಹಿಡಿದು 3 ಕಿ.ಮೀ ಮೆರವಣಿಗೆ ಮಾಡಿದ ಮಕ್ಕಳು

**ಬುಲಂದ್‌ಶಹರ್:** ಉತ್ತರ ಪ್ರದೇಶದ ಬುಲಂದ್‌ಶಹರ್‌ನಲ್ಲಿ ಒಂದು ಅಚ್ಚರಿಯ ಘಟನೆ ನಡೆದಿದೆ. 15 ಅಡಿ ಉದ್ದದ ಭೀಮಾಕಾಯದ ಕಾಡು ಹಾವೊಂದನ್ನು ಗ್ರಾಮದ ಮಕ್ಕಳ ಗುಂಪು ಆಟದ ಆಟಿಕೆಯಂತೆ ಎತ್ತಿಹಿಡಿದು ಊರಿನ ರಸ್ತೆಗಳಲ್ಲಿ ಮೆರವಣಿಗೆ ಮಾಡಿದ ಘಟನೆ ಈಗ ವಿಡಿಯೋದಲ್ಲಿ ಸೆರೆಯಾಗಿದೆ. ಮಕ್ಕಳು



ಈ ಬೃಹತ್ ಸರೀಸೃಪವನ್ನು ಕೈಯಲ್ಲಿ ಹಿಡಿದು, ತಲೆ, ದೇಹ ಮತ್ತು ಬಾಲದ ಭಾಗವನ್ನು ಎತ್ತಿಹಿಡಿದು ಸೆಲ್ಫಿಗಳನ್ನು ತೆಗೆದುಕೊಂಡಿದ್ದಾರೆ. ಕೆಲವರು ಹಾವನ್ನು ಹಿಡಿದರೆ, ಇನ್ನೂ ಕೆಲವರು ಅದರ ಪಕ್ಕದಲ್ಲಿ ಸಾಮಾನ್ಯವಾಗಿ ನಡೆದುಕೊಂಡಿದ್ದಾರೆ. ಸ್ಥಳೀಯರ ಪ್ರಕಾರ, ಈ ಮಕ್ಕಳು ಸುಮಾರು 3 ಕಿಲೋಮೀಟರ್ ದೂರದವರೆಗೆ ಹಾವನ್ನು ಎತ್ತಿಹಿಡಿದು ಗ್ರಾಮದಾದ್ಯಂತ ಸಂಚರಿಸಿದ್ದಾರೆ. ಈ ವಿಚಿತ್ರ ದೃಶ್ಯವನ್ನು ಕಂಡ ಜನರು ದೊಡ್ಡ ಸಂಖ್ಯೆಯಲ್ಲಿ ಗುಂಪುಗೂಡಿದ್ದಾರೆ. ವೈರಲ್ ಆಗಿರುವ ವಿಡಿಯೊದಲ್ಲಿ ಮಕ್ಕಳು ಈ ದೈತ್ಯಾಕಾರದ ಹಾವನ್ನು ಎತ್ತಿಹಿಡಿದು ಸಂಚರಿಸುವ ದೃಶ್ಯ ಸೆರೆಯಾಗಿದೆ. ಆಶ್ಚರ್ಯಕರವೆಂದರೆ, ಈ ಘಟನೆಯ ಬಗ್ಗೆ ಯಾರೂ ಸ್ಥಳೀಯ ಅಧಿಕಾರಿಗಳಿಗೆ ಅಥವಾ ಅರಣ್ಯ ಇಲಾಖೆಗೆ ಮಾಹಿತಿ ನೀಡಿಲ್ಲ. ಕೊನೆಗೆ ಮಕ್ಕಳು ಈ ಹಾವನ್ನು ಸಮೀಪದ ಅರಣ್ಯ ಪ್ರದೇಶಕ್ಕೆ ಬಿಟ್ಟುಬಿಟ್ಟಿದ್ದಾರೆ ಎಂದು ವರದಿಯಾಗಿದೆ. ಆದರೆ, ಈ ಘಟನೆಯ ಕುರಿತು ಯಾವುದೇ ಮಾಹಿತಿ ತಮಗೆ ಲಭಿಸಿಲ್ಲ ಎಂದು ಅಧಿಕಾರಿಗಳು ದೃಢಪಡಿಸಿದ್ದಾರೆ.

## ಶಸ್ತ್ರಸಜ್ಜಿತ ವ್ಯಕ್ತಿಗಳಿಂದ ಬಸ್ ಅಪಹರಣ; ಒಂಬತ್ತು ಒತ್ತೆಯಾಳುಗಳ ಹತ್ಯೆ

**ಇಸ್ಲಾಮಾಬಾದ್:** ಪಾಕಿಸ್ತಾನದ ನೈಋತ್ಯ ಬಲೂಚಿಸ್ತಾನ್ ಪ್ರಾಂತ್ಯದಲ್ಲಿ ಶಸ್ತ್ರಸಜ್ಜಿತ ವ್ಯಕ್ತಿಗಳ ಗುಂಪೊಂದು ಒಂಬತ್ತು ಬಸ್ ಪ್ರಯಾಣಿಕರನ್ನು ಅಪಹರಿಸಿ ಹತ್ಯೆ ಮಾಡಲಾಗಿದೆ ಎಂದು ಅಧಿಕಾರಿಗಳು ಶುಕ್ರವಾರ ದೃಢಪಡಿಸಿದ್ದಾರೆ. ಪ್ರಾಂತೀಯ ಸರ್ಕಾರದ ವಕ್ತಾರ ಶಾಹಿದ್ ರಿಂಡ್ ಅವರ ಪ್ರಕಾರ, ಗುರುವಾರ ಸಂಜೆ ಹಲವಾರು ಬಸ್ಗಳಿಂದ ಪ್ರಯಾಣಿಕರನ್ನು ಅಪಹರಿಸಲಾಗಿದೆ. ನಂತರ ದಾಳಿಕೋರರು ಅವರನ್ನು ಹತ್ತಿರದ ಪರ್ವತ ಪ್ರದೇಶಕ್ಕೆ ಕರೆದೊಯ್ದು ಹತ್ಯೆ ಮಾಡಿದ್ದಾರೆ ಎಂದು ತಿಳಿದು ಬಂದಿದೆ.

ಈ ಹತ್ಯೆಗಳಿಗೆ ಯಾವುದೇ ಗುಂಪು ಇದುವರೆಗೆ ಹೊಣೆ ಹೊತ್ತಿಲ್ಲ. ಆದಾಗ್ಯೂ, ಹಿಂದೆ ನಡೆದ ಇದೇ ರೀತಿಯ ಘಟನೆಗಳು ಪ್ರತ್ಯೇಕತಾವಾದಿ ಬಲೂಚ್ ಉಗ್ರಗಾಮಿಗಳಿಗೆ ಸಂಬಂಧಿಸಿವೆ. ಬಲೂಚ್ ಉಗ್ರರು ಪಾಕಿಸ್ತಾನದಲ್ಲಿ ಪದೇ ಪದೇ ದಾಳಿ ನಡೆಸುತ್ತಿದ್ದಾರೆ. ಈ ಹಿಂದೆ ಬಲೂಚಿಸ್ತಾನದ ಟರ್ಬತ್ ಜಿಲ್ಲೆಯ ಸ್ಯಾಟಲೈಟ್ ಪಟ್ಟಣದ ವಿಮಾನ ನಿಲ್ದಾಣ ರಸ್ತೆಯಲ್ಲಿ ಪಾಕಿಸ್ತಾನಿ ಸೇನಾ ಬೆಂಗಾವಲು ಪಡೆಯನ್ನು ಗುರಿಯಾಗಿಸಿಕೊಂಡು ಐಇಡಿ ದಾಳಿ ನಡೆಸಲಾಗಿತ್ತು. ಈ ದಾಳಿಯಲ್ಲಿ ಕನಿಷ್ಠ 10 ಮಂದಿ ಪಾಕ್ ಸೈನಿಕರು ಸಾವು ಕಂಡಿರಬಹುದು ಎದು ಅಂದಾಜಿಸಲಾಗಿದೆ. ಬಲೂಚ್ ಲಿಬರೇಷನ್ ಆರ್ಮಿ ಇದರ ವಿಡಿಯೋವನ್ನು ಕೂಡ ರಿಲೀಸ್ ಮಾಡಿದ್ದು, ಮಿಲಿಟರಿ ಟ್ರಕ್ನ ಮೇಲೆ ನೇರವಾಗಿ ದಾಳಿ ನಡೆಸಲಾಗಿದೆ.

ಬಲೂಚಿಸ್ತಾನ್ ಪ್ರಾಂತ್ಯದ ರಾಜಧಾನಿ ಕ್ವೆಟ್ಟಾದಲ್ಲಿ ಗುರುವಾರ ಸೇನಾ ಬೆಂಗಾವಲು ಪಡೆಯ ಮೇಲೆ ರಿಮೋಟ್ ಕಂಟ್ರೋಲ್ಡ್ ಸುಧಾರಿತ ಸ್ಫೋಟಕ ಸಾಧನ ಬಳಸಿ ನಡೆಸಿದ ದಾಳಿಯಲ್ಲಿ ಕನಿಷ್ಠ ಹತ್ತು ಪಾಕಿಸ್ತಾನಿ ಸೈನಿಕರು ಸಾವನ್ನಪ್ಪಿದ್ದಾರೆ. ದಂಗೆಕೋರ ಚಟುವಟಿಕೆಗೆ ಹೆಸರುವಾಸಿಯಾದ ಅಸ್ಥಿರ ಪ್ರದೇಶದಲ್ಲಿ ನಡೆದ ಈ ದಾಳಿಯನ್ನು ನಿಷೇಧಿತ ಪ್ರತ್ಯೇಕತಾವಾದಿ ಗುಂಪು ಬಲೂಚ್ ಲಿಬರೇಶನ್ ಆರ್ಮಿ ಮಾಡಿರುವುದಾಗಿ ಹೇಳಿಕೊಂಡಿದೆ. ಆಕ್ರಮಿತ ಪಾಕಿಸ್ತಾನಿ ಸೈನ್ಯ ವಿರುದ್ಧ ನಡೆಯುತ್ತಿರುವ ಪ್ರತಿರೋಧದ ಭಾಗವಾಗಿ ತನ್ನ ಸ್ವಾತಂತ್ರ್ಯ ಹೋರಾಟಗಾರರು ಈ ಸ್ಫೋಟವನ್ನು ನಡೆಸಿದ್ದಾರೆ ಎಂದು ಃಐಂ ಹೇಳಿಕೆಯಲ್ಲಿ ತಿಳಿಸಿದೆ.

## ತನ್ವಿ: ದಿ ಗ್ರೇಟ್ ಚಿತ್ರ ರಾಷ್ಟ್ರಪತಿ ವೀಕ್ಷಣೆಗೆ ಸಿದ್ಧ!

**ನವದೆಹಲಿ:** ಬಾಲಿವುಡ್ನ ಖ್ಯಾತ ಮತ್ತು ಹಿರಿಯ ನಟ ಅನುಪಮ್ ಖೇರ್ 'ತನ್ವಿ: ದಿ ಗ್ರೇಟ್' ಎನ್ನುವ ಸಿನಿಮಾ ನಿರ್ದೇಶನ ಮಾಡಿದ್ದಾರೆ. ಈ ಚಿತ್ರವನ್ನು ಅನುಪಮ್ ಖೇರ್ ಸ್ಟುಡಿಯೋಸ್ ಮತ್ತು ನ್ಯಾಷನಲ್ ಫಿಲ್ಮ್ ಡೆವಲಪ್ಮೆಂಟ್ ಕಾರ್ಪೊರೇಶನ್ ನಿರ್ಮಿಸಿದ್ದು ಜುಲೈ 18 ರಂದು ಚಿತ್ರ ವಿಶ್ವದಾದ್ಯಂತ ಬಿಡುಗಡೆಗೊಳ್ಳಲಿದೆ. ಇತ್ತೀಚೆಗಷ್ಟೇ ತನ್ವಿ: ದಿ ಗ್ರೇಟ್' ಸಿನಿಮಾದ ಪ್ರೀಮಿಯರ್ ಶೋ ವನ್ನು ಸೈನ್ಯಾಧಿಕಾರಿಗಳು ಹಾಗೂ ಸೈನಿಕರ ಕುಟುಂಬಕ್ಕಾಗಿ ಆಯೋಜನೆ ಮಾಡಲಾಗಿದ್ದು ಸಿನಿಮಾ ನೋಡಿ ಕೊಂಡಾಡಿದ್ದಾರೆ. ಇದೀಗ ಇದೇ ಚಿತ್ರವನ್ನು ಭಾರತದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ವೀಕ್ಷಿಸಲಿದ್ದು ಚಿತ್ರ ತಂಡ ಈ ಬಗ್ಗೆ ಸಂತಸ ವ್ಯಕ್ತ ಪಡಿಸಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ರಾಷ್ಟ್ರಪತಿ ಭವನದಲ್ಲಿ ತನ್ವಿ: ದಿ ಗ್ರೇಟ್ ಸಿನಿಮಾದ ವಿಶೇಷ ಪ್ರದರ್ಶನ ಏರ್ಪಡಿಸಲಾಗಿದೆ. ಇದೇ ಶನಿವಾರ ದ್ರೌಪದಿ ಮುರ್ಮುಈ ಸಿನಿಮಾ ವೀಕ್ಷಿಸ ಲಿದ್ದಾರೆ. ಈ ಖುಷಿ ವಿಚಾರ ಹಂಚಿಕೊಂಡ ಅನುಪಮ್



ಖೇರ್ ಈ ಬಗ್ಗೆ ನಾವು ಅತ್ಯಂತ ಉತ್ಸಾಹ ದಲ್ಲಿದ್ದೇವೆ..ದ್ರೌಪದಿ ಮುರ್ಮು ಅವರು ಈ ಸಿನಿಮಾ ವೀಕ್ಷಿಸಲಿರುವುದು ಅತ್ಯಂತ ಗೌರವದ ಕ್ಷಣ ಎಂದು ಸಂತಸ ವ್ಯಕ್ತ ಪಡಿಸಿದ್ದಾರೆ. ಚಿತ್ರದ ಈ ವಿಶೇಷ ಪ್ರದರ್ಶನದಲ್ಲಿ ತಾನ್ವಿ ಪಾತ್ರದಲ್ಲಿ ಅಭಿನಯಿಸಿ ರುವ ನಟಿ ಶುಭಾಂಗಿ , ಕರಣ್ ಟ್ಯಾಕರ್, ಬೋಮನ್ ಇರಾನಿ, ಜೊತೆಗೆ ಸಹ ಲೇಖಕರಾದ ಅಂಕುರ್ ಹಾಗೂ ಸಿನಿ ತಂಡದವರು ಭಾಗಿಯಾಗಲಿದ್ದಾರೆ. ಆಟಿಸ್ಟಿಕ್ ಯುವತಿಯೊಬ್ಬಾಕೆ ಭಾರತೀಯ ಸೇನೆ ಸೇರುವ ಕತೆಯನ್ನು ಈ ಸಿನಿಮಾ ಹೊಂದಿದೆ. ಆಟಿಸ್ಟಿಕ್ ಯುವತಿ, ತನ್ನ ತಂದೆಯ ಕನಸನ್ನು ಈಡೇರಿಸಲು ಹಲವು ಅಡೆತಡೆ ಗಳನ್ನು ದಾಟಿ ಸೈನ್ಯಕ್ಕೆ ಸೇರಲು ಮುಂದಾಗುವ ಕತೆ ಇದರಲ್ಲಿದೆ.' ತನ್ವಿ ದಿ ಗ್ರೇಟ್' ಸಿನಿಮಾದ ಪ್ರಮುಖ ಪಾತ್ರವಾದ ಆಟಿಸ್ಟಿಕ್ ಯುವತಿಯ ಪಾತ್ರದಲ್ಲಿ ಶುಭಾಂಗಿ ನಟಿಸಿದ್ದಾರೆ. ಆಟಿಸ್ಟಿಕ್ ಯುವತಿಯ ತಾತನ ಪಾತ್ರ ದಲ್ಲಿ ಅನುಪಮ್ ಖೇರ್ ನಟಿಸಿದ್ದಾರೆ. ಚಿತ್ರದ ತಾರಾಗಣದಲ್ಲಿ ಜಾಕಿ ಶ್ರಾಫ್, ಅರವಿಂದ್ ಸ್ವಾಮಿ, ಪಲ್ಲವಿ ಜೋಶಿ, ಸೇರಿ ಭಾರತದ ಹಾಗೂ ಅಂತಾರಾಷ್ಟ್ರೀಯ ಕಲಾವಿದರು ಇದ್ದಾರೆ. ಸಿನಿಮಾ ಜುಲೈ 18 ರಂದು ಬಿಡುಗಡೆ ಆಗಲಿದೆ.



# ಡೊನಾಲ್ಡ್ ಟ್ರಂಪ್‌ಗೆ ಹಿನ್ನಡೆ

ವಾಷಿಂಗ್ಟನ್, ಯುಎಸ್ಗೆ ವಲಸೆ ಹೋಗಿ ವಾಸ ಮಾಡುತ್ತಿರುವ ಪೋಷಕರ ಅಮೆರಿಕದಲ್ಲಿ ಹುಟ್ಟಿದ ಮಕ್ಕಳಿಗೆ ಪೌರತ್ವ ನಿರಾಕರಿಸುವ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಮಹತ್ವಕಾಂಕ್ಷಿ ಜನ್ಮದತ್ತ ಪೌರತ್ವ ರದ್ದು ಆದೇಶಕ್ಕೆ ನ್ಯಾಯಾಲಯವು ತಡೆ ನೀಡಿದೆ.

ಅಮೆರಿಕದ ಯಾವುದೇ ಸ್ಥಳದಲ್ಲೂ ಜನ್ಮದತ್ತ ಪೌರತ್ವವನ್ನು ನಿರಾಕರಿಸುವ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಕಾರ್ಯನಿರ್ವಾಹಕ ಆದೇಶ ಜಾರಿಗೊಳಿಸುವುದನ್ನು ನಿಷೇಧಿಸಿ ನ್ಯೂ ಹ್ಯಾಂಪ್ಶೈರ್ನ ಫೆಡರಲ್ ನ್ಯಾಯಾಧೀಶರು ತೀರ್ಪು ನೀಡಿದ್ದಾರೆ. ನ್ಯಾಯಾಧೀಶರು, ಟ್ರಂಪ್ ಆದೇಶಕ್ಕೆ ತಡೆ ನೀಡಿ ಪ್ರಾಥಮಿಕ ತಡೆಯಾಜ್ಞೆ ಹೊರಡಿಸಿದ್ದಾರೆ. ಇದರೊಂದಿಗೆ ಅಮೆರಿಕ ಅಧ್ಯಕ್ಷರ ವಿವಾದಾತ್ಮಕ ಆದೇಶಕ್ಕೆ ತಡೆ ಬಿದ್ದಿದೆ.

ನ್ಯಾಯಾಧೀಶರು ಹೊರಡಿಸಿರುವ ಈ ರಾಷ್ಟ್ರವ್ಯಾಪಿ ತಡೆಯಾಜ್ಞೆಯನ್ನು ಅಲ್ಲಿನ ಸುಪ್ರೀಂ ಕೋರ್ಟ್ನಲ್ಲಿ ಪ್ರಶ್ನಿಸಬಹುದಾಗಿದೆ. ಕಾರಣ ಜಿಲ್ಲಾ ನ್ಯಾಯಾಧೀಶರು ಸಾಮಾನ್ಯವಾಗಿ ರಾಷ್ಟ್ರವ್ಯಾಪಿ ಅಥವಾ ಸಾರ್ವತ್ರಿಕ ತಡೆಯಾಜ್ಞೆಗಳನ್ನು ಹೊರಡಿಸಲು ಸಾಧ್ಯವಿಲ್ಲ ಎಂದು ಈ ಹಿಂದೆಯೇ ಸುಪ್ರೀಂ ಕೋರ್ಟ್ ತಿಳಿಸಿದೆ. ಆದರೆ ನ್ಯಾಯಾಧೀಶರು ಬೇರೆ ಕಾನೂನು ವಿಧಾನದ ಮೂಲಕ ಈ ರೀತಿ ತೀರ್ಪು ನೀಡಬಹುದು ಎಂಬುದನ್ನೂ ಕೂಡ ಸುಪ್ರೀಂ ಕೋರ್ಟ್ ತಳ್ಳಿ ಹಾಕಿಲ್ಲ. ಟ್ರಂಪ್ ಆದೇಶ ಪ್ರಶ್ನಿಸಿ ಗರ್ಭಿಣಿ, ಇಬ್ಬರು ಪೋಷಕರು ಮತ್ತು ಅವರ ಮಕ್ಕಳು ಅರ್ಜಿ ಸಲ್ಲಿಸಿದ್ದರು. ಅಮೆರಿಕದಲ್ಲಿ ಅಕ್ರಮವಾಗಿ ಅಥವಾ ತಾತ್ಕಾಲಿಕವಾಗಿ ವಾಸಿಸುವ ಪೋಷಕರಿಗೆ ಜನಿಸಿದ ಮಕ್ಕಳಿಗೆ ಪೌರತ್ವ ನಿರಾಕರಿಸುವ ಬಗ್ಗೆ ಟ್ರಂಪ್ ಕಳೆದ ಜನವರಿಯಲ್ಲಿ ಹೊರಡಿಸಿದ್ದ ಆದೇಶವನ್ನು ಪ್ರಶ್ನಿಸಿ ಸಲ್ಲಿಕೆಯಾದ ಹಲವಾರು ಅರ್ಜಿಗಳಲ್ಲಿ ಇದು ಒಂದಾಗಿದೆ. ಅರ್ಜಿದಾರರ ಪರವಾಗಿ ಅಮೆರಿಕನ್ ಸಿವಿಲ್ ಲಿಬರ್ಟೀಸ್ ಯೂನಿಯನ್ ಮತ್ತು ಇತರರು ಪ್ರತಿನಿಧಿಸಿದ್ದರು.

## ನಾಸಾ ಹಿರಿಯ ಅಧಿಕಾರಿಗಳ ರಾಜೀನಾಮೆ

ವಾಷಿಂಗ್ಟನ್: ನಾಸಾದಲ್ಲಿ ಉನ್ನತ ಹುದ್ದೆಯಲ್ಲಿರುವ 2145 ಮಂದಿ ಸಾಮೂಹಿಕ ರಾಜೀನಾಮೆ ನೀಡಿರುವ ಹಿನ್ನೆಲೆಯಲ್ಲಿ ಅತ್ಯುನ್ನತ ಬಾಹ್ಯಾಕಾಶ ಸಂಶೋಧನಾ ಕೇಂದ್ರ, ಇದೀಗ ಅನುಭವಿಗಳ ಕೊರತೆಯನ್ನು ಎದುರಿಸುತ್ತಿದೆ ಎಂದು ಆಂತರಿಕ ದಾಖಲೆಗಳನ್ನು ಉಲ್ಲೇಖಿಸಿ ಪೊಲಿಟಿಕೊ ವರದಿ ಮಾಡಿದೆ. ಉನ್ನತ ವ್ಯವಸ್ಥಾಪನಾ ಮತ್ತು ತಾಂತ್ರಿಕ ನೈಪುಣ್ಯತೆ ಹುದ್ದೆಯಲ್ಲಿದ್ದ ಜಿಎಸ್-13 ಶ್ರೇಣಿಯಿಂದ ಜಿಎಸ್-15 ಶ್ರೇಣಿಯವರೆಗಿನ ಅಧಿಕಾರಿಗಳು ನಾಸಾ ತ್ಯಜಿಸಲಿದ್ದು, ಇವರಲ್ಲಿ 875 ಮಂದಿ ಜಿಎಸ್-15 ಸಿಬ್ಬಂದಿ ಸೇರಿದ್ದಾರೆ. ಉದ್ಯೋಗಿಗಳ ಸಂಖ್ಯೆಯನ್ನು ಕಡಿಮೆ ಮಾಡುವ ವಿಸ್ತೃತ ಪ್ರಯತ್ನದ ಭಾಗವಾಗಿ ನಾಸಾದಿಂದ ಅವಧಿಪೂರ್ವ ನಿವೃತ್ತಿ, ಮುಷ್ಕರ ಅಥವಾ ವಿಳಂಬಿತ ರಾಜೀನಾಮೆಗೆ ಮುಂದಾಗಿರುವ 2694 ಮಂದಿಯ ಪೈಕಿ ಬಹುತೇಕ ಮಂದಿ ತಾಂತ್ರಿಕ ತಜ್ಞರು ಸೇರಿದ್ದಾರೆ. ನಾಸಾದ ಮಹತ್ವಾಕಾಂಕ್ಷಿ ಸೈನ್ಸ್ ಅಂಡ್ ಹ್ಯೂಮನ್ ಸ್ಪೇಸ್ ಫ್ಲೈಟ್ ಯೋಜನೆಯ ಕರ್ತವ್ಯದಿಂದ 1818 ಮಂದಿ ನಿರ್ಗಮಿಸುತ್ತಿದ್ದಾರೆ. ಇದರ ಜತೆಗೆ ಐಟಿ ಮತ್ತು ಹಣಕಾಸು ವಿಭಾಗದ ಹಲವು ಮಂದಿಯೂ ನಾಸಾ ತೊರೆಯುತ್ತಿದ್ದಾರೆ. ಏಜೆನ್ಸಿಯ ಪ್ರಮುಖ ವ್ಯವಸ್ಥಾಪನಾ ಮತ್ತು ತಾಂತ್ರಿಕ ನೈಪುಣ್ಯತೆಯನ್ನು ನಾವು ಕಳೆದುಕೊಳ್ಳುತ್ತಿದ್ದೇವೆ ಎಂದು ಪ್ಲಾನಿಟರಿ ಸೊಸೈಟಿಯ ಬಾಹ್ಯಾಕಾಶ ನೀತಿ ವಿಭಾಗದ ಮುಖ್ಯಸ್ಥ ಕ್ಯಾಸಿ ಡ್ರೀಯರ್ ಎಚ್ಚರಿಸಿದ್ದಾರೆ. ಉದ್ಯೋಗ ಕಡಿತ ತಂತ್ರಗಾರಿಕೆಯನ್ನು ಅವರು ಪ್ರಶ್ನಿಸಿದ್ದಾರೆ.ಆ

## ಶುಭಾಂಶು ಶುಕ್ಲಾ ತಂಡ ಭೂಮಿಗೆ ಹಿಂದಿರುಗಲು ಡೇಟ್ ಫಿಕ್ಸ್...!

**ನವದೆಹಲಿ:** ಭಾರತೀಯ ಗಗನಯಾತ್ರಿ, ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಸೇರಿದ ಆಕ್ಸಿಯಮ್-4 ತಂಡವು ಜುಲೈ 14ರಂದು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಮರಳಲಿದ್ದಾರೆ ಎಂದು ಆಕ್ಸಿಯಮ್ ಸ್ಪೇಸ್ ಸಾಮಾಜಿಕ ಜಾಲತಾಣದಲ್ಲಿ ಘೋಷಿಸಿದೆ. ''ಅನುಕೂಲಕರ ಹವಾಮಾನವಿದ್ದರೆ, ಆಕ್ಸಿಯಮ್ ಮಿಷನ್ 4 ತಂಡವು ಜುಲೈ 14, ಸೋಮವಾರ ಬೆಳಿಗ್ಗೆ 7:05ಕ್ಕೆ (ಭಾರತೀಯ ಕಾಲಮಾನ 4:35 ಕಒ) ಐಎಸ್‌ಎಸ್ನಿಂದ ಬೇರ್ಪಡಲಿದೆ'' ಎಂದು ಕಂಪನಿಯು ಎಕ್ಸ್‌ನಲ್ಲಿ ತಿಳಿಸಿದೆ. ಕಮಾಂಡರ್ ಪೆಗ್ಗಿ ವಿಟ್ಸನ್, ಪೈಲಟ್ ಶುಭಾಂಶು ಶುಕ್ಲಾ, ಮಿಷನ್ ಸ್ಪೆಶಲಿಸ್ಟ್‌ಗಳಾದ ಸ್ಲಾವೊಸ್ಜ್ ಉಜ್ನಾನ್ಸ್ಕಿ-ವಿಸ್ನಿಯೆವ್ಸ್ಕಿ ಮತ್ತು ಟಿಬೋರ್ ಕಪು ಅವರು ಕಕ್ಷೆಯಲ್ಲಿನ ಕೊನೆಯ ದಿನಗಳಲ್ಲಿ 60 ಪ್ರಯೋಗಗಳನ್ನು ನಡೆಸಲಿದ್ದಾರೆ. ಯುರೋಪಿಯನ್ ಸ್ಪೇಸ್ ಏಜೆನ್ಸಿಯು ಪೋಲಿಷ್ ಗಗನಯಾತ್ರಿ ಉಜ್ನಾನ್ಸ್ಕಿ-ವಿಸ್ನಿಯೆವ್ಸ್ಕಿಯನ್ನು ನಿಯೋಜಿಸಿದ್ದು, ಜುಲೈ 14ರಂದು ಮರಳುವ ದಿನಾಂಕವನ್ನು ಈಗಾಗಲೇ ಸೂಚಿಸಿತ್ತು. ಸ್ಪೇಸ್‌ಎಕ್ಸ್ ಡ್ರಾಗನ್ ಗ್ರೇಸ್ ಬಾಹ್ಯಾಕಾಶ ನೌಕೆ ಜೂನ್ 26ರಂದು ಐಎಸ್‌ಎಸ್ಗೆ ತಲುಪಿದ್ದರಿಂದ, ತಂಡವು ಎರಡು ವಾರಗಳ ಕಾಲ ಕಡಿಮೆ ಕಕ್ಷೆಯ ಪ್ರಯೋಗಾಲಯದಲ್ಲಿ ಕಾರ್ಯನಿರ್ವಹಿಸಿತು.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಸೋಮವಾರ ಥೈಲ್ಯಾಂಡ್‌ಗೆ ಹಾರಲಿದ್ದಾರೆ ದರ್ಶನ್

ಕೊಲೆ ಕೇಸ್ ಜೊತೆ ಸಿನಿಮಾ ವಿಚಾರದಲ್ಲೂ ದರ್ಶನ್ ಸೌಂಡ್ ಜೋರಾಗಿದೆ. ಇದೀಗ ಡೆವಿಲ್ ಚಿತ್ರದ ಶೂಟಿಂಗ್ ಮುಗಿಸಿರುವ ದರ್ಶನ್ ಬಾಕಿ ಇರುವ ಒಂದೇ ಒಂದು ಹಾಡಿನ ಚಿತ್ರೀಕರಣಕ್ಕಾಗಿ ವಿದೇಶಕ್ಕೆ ತೆರಳಲು ಅನುಮತಿ ಪಡೆದುಕೊಂಡಿದ್ದಾರೆ. ಕೋರ್ಟ್ ಆದೇಶದಂತೆ ದರ್ಶನ್ ಸೋಮವಾರ ಥಾಯ್ಲೆಂಡ್‌ಗೆ ತೆರಳಲಿದ್ದಾರೆ.

ದರ್ಶನ್ ಅವರು ಗುರುವಾರ ರಾತ್ರಿ ಸಿನಿಮಾ ತಂಡದ ಜೊತೆ ಥೈಲ್ಯಾಂಡ್ ಹೋಗಬೇಕಿತ್ತು. ಆದರೆ ಶೂಟಿಂಗ್ ತಂಡ ಮಾತ್ರ ಥಾಯ್ಲೆಂಡ್ ವಿಮಾನ ಹತ್ತಿರುವ ಮಾಹಿತಿ ಸಿಕ್ಕಿದೆ.

ಡೆವಿಲ್ ಚಿತ್ರದ ಡ್ಯುಯೆಟ್ ಹಾಡೊಂದರ ಚಿತ್ರೀಕರಣಕ್ಕೆ ಥೈಲ್ಯಾಂಡ್ ದೇಶದ ಬ್ಯಾಂಕಾಕ್, ಪುಕೆಟ್, ಕ್ರಾಬಿಯಲ್ಲಿ ದರ್ಶನ್ ಹಾಡಿನ ಚಿತ್ರೀಕರಣದಲ್ಲಿ



ಭಾಗಿಯಾಗಲಿದ್ದು ಇದು ಕೊಲೆ ಪ್ರಕರಣದ ಬಳಿಕ ದರ್ಶನ್ ತೆರಳುತ್ತಿರುವ ಮೊದಲ ವಿದೇಶ ಪ್ರಯಾಣ.

**ಡೆವಿಲ್ ಶೂಟಿಂಗ್‌ನಲ್ಲಿ ದರ್ಶನ್:** ಸೋಮವಾರ ಟಿಕೆಟ್ ಬುಕ್ ಆಗಿದ್ದು ಸಿನಿಮಾ ಟೀಮ್ ಜೊತೆಗೂಡಿ ತೆರಳಲಿದ್ದಾರೆ. ಪತ್ನಿ ವಿಜಯಲಕ್ಷ್ಮಿ ಅವರು ಪತಿ ಜೊತೆ ಹೋಗುವ ಸಾಧ್ಯತೆ ಇದೆ.

ಕಳೆದ ಬಾರಿ ಯುರೋಪ್ ಹಾಗೂ ದುಬೈಗೆ ತೆರಳಲು ದರ್ಶನ್ ಅನುಮತಿ ಪಡೆದುಕೊಂಡಿದ್ದರು. ಆದರೆ ಇಸ್ರೇಲ್-ಇರಾನ್ ಯುದ್ಧದ ಕಾರಣದಿಂದ ದರ್ಶನ್ ಆ ಜಾಗ ಬದಲಿಸಿ ಇದೀಗ ಬದಲಿ ದೇಶ ಕಂಡುಕೊಂಡಿದ್ದಾರೆ.

ಈ ತಿಂಗಳು ಕೊನೆವರೆಗೂ ದರ್ಶನ್‌ಗೆ ಥೈಲ್ಯಾಂಡ್ ನಲ್ಲಿರಲು ಕೋರ್ಟ್ ಅನುಮತಿ ನೀಡಿದೆ. ಸೋಮವಾರ ತೆರಳಲಿರುವ ದರ್ಶನ್ ಒಂದು ವಾರ ಚಿತ್ರೀಕರಣದಲ್ಲಿ ಭಾಗಿಯಾಗಲಿದ್ದಾರೆ.

# ಯಶ್ ತಾಯಿ ನಿರ್ಮಾಣದ ಕೊತ್ತಲವಾಡಿ ಸಿನಿಮಾದ ಟೈಟಲ್ ಟ್ರ್ಯಾಕ್ ರಿಲೀಸ್

ಯಶ್ ತಾಯಿ ಪುಷ್ಪಾ ಅರುಣ್ ಕುಮಾರ್ ನಿರ್ಮಾಣದ ಚೊಚ್ಚಲ ಚಿತ್ರ ಕೊತ್ತಲವಾಡಿ ಸಿನಿಮಾದ ಟೀಸರ್ ಪ್ರೇಕ್ಷಕ ವಲಯದಿಂದ ಭರಪೂರ ಮೆಚ್ಚುಗೆ ಪಡೆದುಕೊಂಡಿದೆ. ಇದೀಗ ಚಿತ್ರತಂಡ ಕೊತ್ತಲವಾಡಿ ಟೈಟಲ್ ಟ್ರ್ಯಾಕ್ ಅನಾವರಣ ಮಾಡಿದೆ.

ಕಿನ್ನಾಲ್ ರಾಜ್ ಸಾಹಿತ್ಯ ಬರೆದಿರುವ ಗೀತೆಗೆ ವ್ಯಾಸರಾಜ್ ಸೋಸಲೆ ಕಂಠ ಕುಣಿಸಿದ್ದಾರೆ. ವಿಕಾಸ್ ವಸಿಷ್ಠ ಸಂಗೀತ ಹಾಡಿನ ತೂಕ ಹೆಚ್ಚಿಸಿದೆ. ನಾಯಕನ ಶೌರ್ಯವನ್ನು ವರ್ಣಿಸುವ ಹಾಡು ಸಖತ್ ಪವರ್ ಫುಲ್ ಆಗಿ ಮೂಡಿ ಬಂದಿದೆ.

ಪುಷ್ಪ ಅರುಣ್ ಕುಮಾರ್ ತಮ್ಮದೇ ಪ್ರೊಡಕ್ಷನ್‌ನಡಿ ಕೊತ್ತಲವಾಡಿ ಚಿತ್ರಕ್ಕೆ ಬಂಡವಾಳ ಹೂಡಿದ್ದಾರೆ. ಚಿತ್ರಕ್ಕೆ ಯುವ ಪ್ರತಿಭೆ ಶ್ರೀರಾಜ್ ಆಕ್ಷನ್ ಕಟ್ ಹೇಳಿದ್ದು, ಪೃಥ್ವಿ ಅಂಬರ್ ನಾಯಕನಾಗಿ ಹಾಗೂ ಕಿರುತೆರೆ ನಟಿ ಕಾವ್ಯಾ ಶೈವ ನಾಯಕಿಯಾಗಿ ನಟಿಸುತ್ತಿದ್ದಾರೆ. ಗೋಪಾಲಕೃಷ್ಣ ದೇಶಪಾಂಡೆ, ರಾಜೇಶ್ ನಟರಂಗ



ಅವರಂತಹ ಅನುಭವಿ ತಾರಾಬಳಗ ಚಿತ್ರದಲ್ಲಿದೆ. ಇಲ್ಲಿಯವರೆಗೂ ಲವರ್ ಬಾಯ್ ಆಗಿ ಕಾಣಿಸಿಕೊಳ್ಳುತ್ತಿದ್ದ ಪೃಥ್ವಿ 'ಕೊತ್ತಲವಾಡಿ' ಚಿತ್ರದಲ್ಲಿ ಕಂಪ್ಲೀಟ್ ಮಾಸ್ ಗೆಟಪ್‌ನಲ್ಲಿ ಕಾಣಿಸಿಕೊಂಡಿದ್ದಾರೆ.

ಸಿನಿಮಾದ ಹಾಡುಗಳಿಗೆ ವಿಕಾಸ್ ವಸಿಷ್ಠ ಸಂಗೀತ ಸಂಯೋಜಿಸಿದ್ದಾರೆ. ಕಾರ್ತಿಕ್ ಎಸ್. ಛಾಯಾಗ್ರಹಣ ಮಾಡಿದ್ದಾರೆ. ರಾಮಿಸೆಟ್ಟಿ ಪವನ್ ಸಂಕಲನ ಮಾಡಿದ್ದಾರೆ. ರಘು ನಿಡುವಳ್ಳಿ ಸಂಭಾಷಣೆ ಬರೆದಿದ್ದಾರೆ. ವಿ. ನಾಗೇಂದ್ರ ಪ್ರಸಾದ್, ಕಿನ್ನಾಳ್ ರಾಜ್, ಪ್ರಮೋದ್ ಮರವಂತೆ, ಗೌಸ್ ಪಿರ್ ಸಾಹಿತ್ಯ ಬರೆದಿದ್ದಾರೆ. ಅಭಿನಂದನ್ ಕಶ್ಯಪ್ ಹಿನ್ನೆಲೆ ಸಂಗೀತ ನೀಡಿದ್ದಾರೆ.

# ದಳಪತಿ ವಿಜಯ್ ಚಿತ್ರದಲ್ಲಿ ನನ್ನ ಪಾತ್ರ ವೇಸ್ಟ್ ಮಾಡಿದರು

ನಟ ಸಂಜಯ್ ದತ್ ಅವರು ಈಗ ಬಾಲಿವುಡ್ ನಿಂದ ದಕ್ಷಿಣದತ್ತ ಮುಖ ಮಾಡಿದ್ದಾರೆ. ಇಲ್ಲಿ ಅವರು ವಿಲನ್ ಪಾತ್ರಗಳ ಮೂಲಕ ಗುರುತಿಸಿಕೊಳ್ಳುತ್ತಿದ್ದಾರೆ. ಅವರಿಗೆ ಮೊದಲು ಇಂಥ ಆಫರ್ ಕೊಟ್ಟಿದ್ದು ಪ್ರಶಾಂತ್ ನೀಲ್. 'ಕೆಜಿಎಫ್ 2' ಚಿತ್ರದಲ್ಲಿ ಅಧೀರನ ಪಾತ್ರವನ್ನು ನೀಡಿದರು. ಈ ಪಾತ್ರ ಸಾಕಷ್ಟು ಗಮನ ಸೆಳೆಯಿತು. ಈ ಕಾರಣದಿಂದಲೇ ದಕ್ಷಿಣದಲ್ಲಿ ಅವರಿಗೆ ಸಾಕಷ್ಟು ಆಫರ್ ಗಳು ಬರುತ್ತಿವೆ. ಆದರೆ, ಅವರು ದಕ್ಷಿಣದಲ್ಲಿ ನಟಿಸಿದ ಎಲ್ಲಾ ಸಿನಿಮಾಗಳು ಹಿಟ್ ಆಗಿಲ್ಲ. ಇದರಲ್ಲಿ 'ಲಿಯೋ' ಕೂಡ ಸೇರಿದೆ. ಅವರ ಪಾತ್ರದ ಬಗ್ಗೆಯೇ ಸಂಜಯ್ ದತ್ ಗೆ ಬೇಸರ ಇದೆ.





## ಸಂಜಯ್ ದತ್ ಬೇಸರ

ಸಂಜಯ್ ದತ್ ಅವರು ವಿಜಯ್ ನಟನೆಯ, ಲೋಕೇಶ್ ಕನಗರಾಜ್ ನಿರ್ಮಾಣದ 'ಲಿಯೋ' ಚಿತ್ರದಲ್ಲಿ ಆ ಯಂಟನಿ ದಾಸ್ ಹೆಸರಿನ ಪಾತ್ರ ಮಾಡಿದರು. ಈ ಚಿತ್ರದ ಟ್ರೇಲರ್ ನೋಡಿದವರಿಗೆ ಈ ಪಾತ್ರದಲ್ಲಿ ಏನೋ ಇದೆ ಎಂದೇ ಭಾವಿಸಿದ್ದರು. ಆದರೆ, ಅದು ಸುಳ್ಳಾಗಿದೆ. ಈ ಪಾತ್ರ ಕಮಾಲ್ ಮಾಡುವಲ್ಲಿ ವಿಫಲವಾಯಿತು. ಎಲ್ಲರೂ ಲೋಕೇಶ್ ನ ಬೈದರು. ಈಗ ಸಂಜಯ್ ದತ್ ಕೂಡ ಇದೇ ಕೆಲಸ ಮಾಡಿದ್ದಾರೆ.

ಚೆನ್ನೈನಲ್ಲಿ ನಡೆದ ಈವೆಂಟ್ ಒಂದರಲ್ಲಿ ಮಾತನಾಡಿದ ಸಂಜಯ್ ದಯ್, 'ನನಗೆ ಲೋಕೇಶ್ ಮೇಲೆ ಸಿಟ್ಟಿದೆ. ನನಗೆ ದೊಡ್ಡ ಆಫರ್ ನೀಡಿಲ್ಲ. ಅವರು ನನ್ನನ್ನು ವೇಸ್ಟ್ ಮಾಡಿ ಬಿಟ್ಟರು' ಎಂದು ಹೇಳಿದ್ದಾರೆ. ಅವರ ಮಾತನ್ನು ಅನೇಕರು ಒಪ್ಪಿದ್ದಾರೆ. ಅಷ್ಟು ದೊಡ್ಡ ನಟನ ಈ ರೀತಿಯಲ್ಲಿ ದುರ್ಬಳಕೆ ಮಾಡಿಕೊಳ್ಳಬಾರದಿತ್ತು ಎಂದು ಹೇಳಿದ್ದಾರೆ.

ಲೋಕೇಶ್ ಕನಗರಾಜ್ ಅವರು ತಮ್ಮದೇ ಸಿನಿಮಾ ಯೂನಿವರ್ಸ್ ಮಾಡಿದ್ದಾರೆ. ಅವರು ಯಾವಾಗಲೂ ಪಾತ್ರವನ್ನು ಸೃಷ್ಟಿಸುವಾಗ ಸ್ಟ್ರಾಂಗ್ ಆಗಿ ಆಲೋಚಿಸುತ್ತಾರೆ. ಆದರೆ, 'ಲಿಯೋ' ವಿಚಾರದಲ್ಲಿ ಒಟ್ಟಾರೆ ಕಥೆ ಹಾಗೂ ಪಾತ್ರಗಳು ಹೈಲೈಟ್ ಆಗಿರಲೇ ಇಲ್ಲ. ಸದ್ಯ 'ಕೆಡಿ: ದಿ ಡೆವಿಲ್' ಸಿನಿಮಾದಲ್ಲಿ ಸಂಜಯ್ ದತ್ ನಟಿಸುತ್ತಿದ್ದಾರೆ. ಇದು ಪ್ರೇಮ್ ನಿರ್ದೇಶನದ ಸಿನಿಮಾ. ಈ ಚಿತ್ರದಲ್ಲಿ ಧ್ರುವ ಸರ್ಜಾ ನಾಯಕ. ಅವರದ್ದು ವಿಲನ್ ಪಾತ್ರ. 'ದಿ ರಾಜಾ ಸಾಬ್' ಸಿನಿಮಾ ಹಾಗೂ ರಣವೀರ್ ಸಿಂಗ್ ನಟನೆಯ 'ಧುರಂದರ್' ಚಿತ್ರದಲ್ಲಿಯೂ ಅವರು ಬಣ್ಣ ಹಚ್ಚುತ್ತಿದ್ದಾರೆ.

# ಕಿರುತೆರೆ ನಟಿ ಶ್ರುತಿಗೆ ಮನೆಯಲ್ಲೇ ಚಾಕು ಇರಿದು ಕೊಲೆಗೆ ಯತ್ನ, ಅರೆಸ್ಟ್

ಕಿರುತೆರೆ ನಟಿ ಹಾಗೂ ಖಾಸಗಿ ವಾಹಿನಿಯ ನಿರೂಪಕಿಗೆ ಪತಿಯೇ ಚಾಕು ಇರಿದ ಘಟನೆ ಹನುಮಂತ ನಗರ ಪೊಲೀಸ್ ಠಾಣಾ ವ್ಯಾಪ್ತಿಯ ಮುನೇಶ್ವರ ಲೇಔಟ್‌ನಲ್ಲಿ ನಡೆದಿದೆ.



ಮಂಜುಳ ಶ್ರುತಿ ಚಾಕು ಇರಿತಕ್ಕೊಳಗಾದ ಕಿರುತೆರೆ ನಟಿ. ಅಮೃತಧಾರೆ ಸೇರಿದಂತೆ ಹಲವು ಸೀರಿಯಲ್‌ಗಳಲ್ಲಿ ಶ್ರುತಿ ನಟಿಸಿದ್ದಾರೆ. ಜುಲೈ 4 ರಂದು ಚೂರಿ ಇರಿದಿದ್ದು ತಡವಾಗಿ ಘಟನೆ ಬೆಳಕಿಗೆ ಬಂದಿದೆ. ಸದ್ಯ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಶ್ರುತಿ ಚಿಕಿತ್ಸೆ ಪಡೆಯುತ್ತಿದ್ದಾರೆ.

**ಏನಿದು ಘಟನೆ?:** 20 ವರ್ಷದ ಹಿಂದೆ ಅಂಬರೀಶ್ ಎಂಬಾತನ ಪ್ರೀತಿಸಿ ಶ್ರುತಿ ಮದುವೆಯಾಗಿದ್ದರು. ಮದುವೆಯಾಗಿ ದಂಪತಿಗೆ ಇಬ್ಬರು ಮಕ್ಕಳಿದ್ದಾರೆ. ಹನುಮಂತ ನಗರದಲ್ಲಿ ಲೀಸ್‌ಗೆ ಮನೆ ಪಡೆದು ದಂಪತಿ ವಾಸವಾಗಿದ್ದರು. ಕೆಲ ತಿಂಗಳಿನಿಂದ ಶ್ರುತಿ ನಡವಳಿಕೆ ಗಂಡ ಅಂಬರೀಶ್‌ಗೆ ಇಷ್ಟವಾಗುತ್ತಿರಲಿಲ್ಲ. ಶೀಲ ಶಂಕಿಸಿ ಜಗಳ ಮಾಡುತ್ತಿದ್ದ.

ಇಬ್ಬರ ಮಧ್ಯೆ ಲೀಸ್ ಹಣಕ್ಕೆ ಸಂಬಂಧಿಸಿದಂತೆ ಆಗಾಗ ಜಗಳ ನಡೆಯುತ್ತಿತ್ತು. ಈ ಸಂಬಂಧ ಹನುಮಂತ ನಗರ ಪೊಲೀಸ್ ಠಾಣೆಯಲ್ಲಿ ಹಿಂದೆ ಶ್ರುತಿ ದೂರು ನೀಡಿದ್ದರು. ಇಬ್ಬರ ನಡುವೆ ಹೊಂದಾಣಿಕೆ ಸರಿ ಇಲ್ಲದ ಕಾರಣ ಕಳೆದ ಏಪ್ರಿಲ್‌ನಲ್ಲಿ ಪತಿಯಿಂದ ದೂರವಾಗಿ ಅಣ್ಣನ ಮನೆಯಲ್ಲಿ ಶ್ರುತಿ ನೆಲೆಸಿದ್ದರು.

ಜುಲೈ 3 ರಂದು ಕುಟುಂಬಸ್ಥರ ಸಮ್ಮುಖದಲ್ಲಿ ಪತಿ, ಪತ್ನಿ ರಾಜಿಯಾಗಿ ಒಂದಾಗಿದ್ದರು. ಆದರೆ ಜುಲೈ 4 ರಂದು ಮಕ್ಕಳು ಕಾಲೇಜಿಗೆ ಹೋಗಿದ್ದಾಗ ಪೆಪ್ಪರ್ ಸ್ಪ್ರೇ ಮಾಡಿ ಪತ್ನಿಯ ಕೊಲೆಗೆ ಅಂಬರೀಶ್ ಯತ್ನಿಸಿದ್ದಾನೆ.

ಪಕ್ಕೆಲುಬು, ತೊಡೆ ಹಾಗೂ ಕುತ್ತಿಗೆಗೆ ಚಾಕುವಿನಿಂದ ಇರಿದಿದ್ದಾನೆ. ಸಿನಿಮಾ ಸ್ಟೈಲ್ ನಲ್ಲಿ ತಲೆ ಕೂದಲು ಹಿಡಿದು ಗೋಡೆ ತಲೆ ಗುದ್ದಿಸಿ ಕೊಲೆಗೆ ಅಂಬರೀಶ್ ಯತ್ನಿಸಿದ್ದಾನೆ. ಸಂಸಾರ ಮತ್ತು ಹಣಕಾಸು ವಿಚಾರಕ್ಕೆ ಕೊಲೆ ಯತ್ನ ಮಾಡಿರುವುದಾಗಿ ಶ್ರುತಿ ದೂರು ನೀಡಿದ್ದು ಹನುಮಂತ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸದ್ಯ ಕೊಲೆಯತ್ನ ಪ್ರಕರಣ ದಾಖಲಿಸಿದ ಪೊಲೀಸರು ಆರೋಪಿ ಅಂಬರೀಶ್‌ನನ್ನು ಬಂಧಿಸಿ ಜೈಲಿಗಟ್ಟಿದ್ದಾರೆ.

# ದರ್ಶನ್‌ಗೆ ಮಾದರಿಯಾದ ಸಂಜು ಬಸಯ್ಯ

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣ ಇಡೀ ರಾಜ್ಯಾದ್ಯಂತ ಸದ್ದು ಮಾಡಿತ್ತು. ನಟಿ ಹಾಗೂ ದರ್ಶನ್ ಆಪ್ತೆ ಪವಿತ್ರಾ ಗೌಡ ಅವರಿಗೆ ಅಶ್ಲೀಲ ಮೆಸೇಜ್ ಕಳಿಸಿದ್ದಕ್ಕೆ ದರ್ಶನ್ ಅಂಡ್ ಗ್ಯಾಂಗ್ ಭೀಕರವಾಗಿ ಹತ್ಯೆ ನಡೆಸಿದ ಆರೋಪ ಈಗಲೂ ಇದೆ. ಇದೇ ರೀತಿ ಪ್ರಕರಣವೊಂದು ಈಗ ಬೆಳಗಾವಿಯಲ್ಲಿ ನಡೆದಿದೆ. ಆದ್ರೆ ಪತ್ನಿಗೆ ಇನ್ಸ್ಟಾಗ್ರಾಮ್ ಅಶ್ಲೀಲವಾಗಿ ಮೆಸೇಜ್ ಕಳಿಸಿದ್ದ ಯುವಕನಿಗೆ ಬುದ್ಧಿ ಹೇಳಿ ಕಳುಹಿಸುವ ಮೂಲಕ ಹಾಸ್ಯನಟ ಸಂಜು ಬಸಯ್ಯ ದರ್ಶನ್‌ಗೆ ಮಾದರಿಯಾಗಿದ್ದಾರೆ.

ಹೌದು, ಸಂಜು ಬಸಯ್ಯ ಅವರ ಪತ್ನಿ ನಟಿ ಪಲ್ಲವಿ ಸಂಜು ಬಸಯ್ಯ ಅವರಿಗೆ ವಿಜಯನಗರ ಮೂಲದ ಮನೋಜ್ ಎಂಬ ಪಿಯುಸಿ ವ್ಯಾಸಂಗ ಮಾಡುತ್ತಿದ್ದ ಯುವಕ ಇನ್ಸ್ಟಾಗ್ರಾಮ್ ಮೂಲಕ ಅಶ್ಲೀಲ ಸಂದೇಶ ಕಳುಹಿಸಿದ್ದ.

ಅಶ್ಲೀಲ ಮೆಸೇಜ್ ಜೊತೆಗೆ ಅಶ್ಲೀಲ ಫೋಟೊಗಳನ್ನೂ ಕಳಿಸಿದ್ದ. ಇದರಿಂದ ಸಂಯಮ ಕಳೆದುಕೊಳ್ಳದ ಸಂಜು ಬಸಯ್ಯ ಅವರು ಬೈಲಹೊಂಗಲ ಪೊಲೀಸ್



ಠಾಣೆಗೆ ದೂರು ನೀಡಿದ್ದರು. ದೂರು ದಾಖಲಾಗುತ್ತಿದ್ದಂತೆ ಅಲರ್ಟ್ ಆದ ಪೊಲೀಸರು, ಅಶ್ಲೀಲ ಸಂದೇಶ ಕಳಿಸಿದ ಯುವಕನಿಗೆ ಬುದ್ಧಿ ಹೇಳಿ ಕಳುಹಿಸಿದ್ದಾರೆ.

ಯುವಕನ ಭವಿಷ್ಯ ಹಾಳಾಗಬಾರದೆಂದು ಸಂಜು ಬಸಯ್ಯ ಅವರು ಬುದ್ಧಿ ಹೇಳಿ ಕಳುಹಿಸಿದ್ದಾರೆ. ಇಂತಹದೇ ಪ್ರಕರಣದಲ್ಲಿ



ಸದ್ಯ ಬಂಧಿಯಾಗಿದ್ದ ನಟ ದರ್ಶನ್‌ಗೆ ಸಂಜು ಬಸಯ್ಯ ಮಾದರಿಯಾಗಿದ್ದಾರೆ.

ಇದೀಗ ಯುವಕ, ನಾನು ಬಹಳ ದಿವಸದಿಂದ ಇನ್ ಸ್ಟಾಗ್ರಾಂ ಬಳಸುತ್ತಿದ್ದೆ. ಪಲ್ಲು ಸಂಜು ಅಫಿಷಿಯಲ್ ಖಾತೆಗೆ ಕೆಟ್ಟ ಕಾಮೆಂಟ್ ಹಾಗೂ ಅಶ್ಲೀಲ ವಿಡಿಯೋ ಕಳುಹಿಸಿದ್ದೆ. ಈ ಬಗ್ಗೆ ಸಂಜು ಬಸಯ್ಯ ಅವರು ಬೈಲಹೊಂಗಲ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದರು. ಪೊಲೀಸರು ನನ್ನನ್ನ ಕರೆಸಿ, ಶಿಕ್ಷೆ ಕೊಟ್ಟಿದ್ದಾರೆ. ನನಗೆ ನನ್ನ ತಪ್ಪಿನ ಅರಿವಾಗಿದೆ. ನಾನು ಮಾಡಿದಂತೆ ಇನ್ಯಾರೂ ಈ ರೀತಿ ಮಾಡಬೇಡಿ. ಎಲ್ಲರಲ್ಲೂ ಕ್ಷಮೆ ಕೇಳ್ತೀನಿ ಎಂದು ತಪ್ಪೊಪ್ಪಿಕೊಂಡಿದ್ದಾನೆ.

# 23 ಸಾವಿರ ಎಸೆತಗಳನ್ನು ಎದುರಿಸಿದ ಜೋ ರೂಟ್

ಟೆಸ್ಟ್ ಕ್ರಿಕೆಟ್‌ನಲ್ಲಿ ಜೋ ರೂಟ್ ಮತ್ತೊಂದು ಮೈಲುಗಲ್ಲು ದಾಟಿದ್ದಾರೆ. ಅದು ಕೂಡ ಕ್ರೀಸ್ ಕಚ್ಚಿ ನಿಲ್ಲುವ ಮೂಲಕ. ಅಂದರೆ ಟೆಸ್ಟ್ ಕ್ರಿಕೆಟ್‌ನಲ್ಲಿ 23 ಸಾವಿರಕ್ಕೂ ಅಧಿಕ ಎಸೆತಗಳನ್ನು ಎದುರಿಸಿದ ವಿಶ್ವದ ಕೆಲವೇ ಕೆಲವು ಆಟಗಾರರ ಪಟ್ಟಿಗೆ ಇದೀಗ ಜೋ ರೂಟ್ ಎಂಟ್ರಿ ಕೊಟ್ಟಿದ್ದಾರೆ.

ಲಾರ್ಡ್ಸ್‌ನಲ್ಲಿ ನಡೆಯುತ್ತಿರುವ ಭಾರತದ ವಿರುದ್ಧದ ಮೂರನೇ ಟೆಸ್ಟ್ ಪಂದ್ಯದಲ್ಲಿ ಜೋ ರೂಟ್ 199 ಎಸೆತಗಳನ್ನು ಎದುರಿಸಿ 104 ರನ್ ಬಾರಿಸಿದ್ದರು. 199 ಎಸೆತಗಳೊಂದಿಗೆ ರೂಟ್ ಟೆಸ್ಟ್ ಕ್ರಿಕೆಟ್‌ನಲ್ಲಿ 23 ಸಾವಿರ ಎಸೆತಗಳನ್ನು ಎದುರಿಸಿದ ಇಂಗ್ಲೆಂಡ್‌ನ ಎರಡನೇ ಬ್ಯಾಟ್ಸ್‌ಮನ್ ಎನಿಸಿಕೊಂಡರು. ಅಷ್ಟೇ ಅಲ್ಲದೆ ಈ ಸಾಧನೆ ಮಾಡಿದ ವಿಶ್ವದ 7ನೇ ಬ್ಯಾಟರ್ ಎಂಬ ಹೆಗ್ಗಳಿಕೆಗೂ ಪಾತ್ರರಾದರು.

ಈವರೆಗೆ 156 ಟೆಸ್ಟ್ ಪಂದ್ಯಗಳನ್ನಾಡಿರುವ ಜೋ ರೂಟ್ 284 ಇನಿಂಗ್ಸ್‌ಗಳಲ್ಲಿ ಬ್ಯಾಟ್ ಬೀಸಿದ್ದಾರೆ. ಈ ವೇಳೆ 23015 ಎಸೆತಗಳನ್ನು ಎದುರಿಸಿರುವ ಅವರು



ಒಟ್ಟು 13219 ರನ್ ಕಲೆಹಾಕಿದ್ದಾರೆ. ಇದರ ನಡುವೆ ಜೋ ರೂಟ್ ಬ್ಯಾಟ್‌ನಿಂದ 37 ಭರ್ಜರಿ ಶತಕಗಳು ಹಾಗೂ 66 ಅರ್ಧಶತಕಗಳು ಸಹ ಮೂಡಿಬಂದಿವೆ. ಇನ್ನು 23015 ಎಸೆತಗಳಲ್ಲಿ ರೂಟ್ 1408 ಫೋರ್ ಹಾಗೂ 45 ಸಿಕ್ಸ್‌ಗಳನ್ನು ಕೂಡ ಬಾರಿಸಿದ್ದಾರೆ.

ಈ ಮೂಲಕ ಟೆಸ್ಟ್ ಕ್ರಿಕೆಟ್‌ನಲ್ಲಿ 23000+ ಎಸೆತಗಳನ್ನು ಎದುರಿಸಿದ ವಿಶ್ವದ 7ನೇ ಬ್ಯಾಟರ್ ಎಂಬ ಹೆಗ್ಗಳಿಕೆಯನ್ನು ಜೋ ರೂಟ್ ತಮ್ಮದಾಗಿಸಿಕೊಂಡರು. ಅಲ್ಲದೆ ಅಲಸ್ಟೈರ್ ಕುಕ್ ಬಳಿಕ ಈ ಸಾಧನೆ ಮಾಡಿದ ಇಂಗ್ಲೆಂಡ್‌ನ ಎರಡನೇ ದಾಂಡಿಗ ಎಂಬ ಹಿರಿಮೆಗೆ ಪಾತ್ರರಾಗಿದ್ದಾರೆ. ಇನ್ನು ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವುದು ದಿ ವಾಲ್ ಖ್ಯಾತಿಯ ರಾಹುಲ್ ದ್ರಾವಿಡ್.

ಟೆಸ್ಟ್ ಕ್ರಿಕೆಟ್‌ನಲ್ಲಿ ಬರೋಬ್ಬರಿ 31258 ಎಸೆತಗಳನ್ನು ಎದುರಿಸುವ ಮೂಲಕ ರಾಹುಲ್ ದ್ರಾವಿಡ್ ವಿಶ್ವ ದಾಖಲೆ ಬರೆದಿದ್ದಾರೆ. ಆ ನಂತರದ ಸ್ಥಾನಗಳಲ್ಲಿ ಸಚಿನ್ ತೆಂಡೂಲ್ಕರ್ (29437), ಜಾಕ್ಸ್ ಕಾಲಿಸ್ (28903), ಶಿವನರೈನ್ ಚಂದ್ರಪಾಲ್ (27395), ಅಲನ್ ಬಾರ್ಡರ್ (27002), ಅಲಸ್ಟೈರ್ ಕುಕ್ (26562). ಇದೀಗ ಈ ಪಟ್ಟಿಗೆ 23015 ಎಸೆತಗಳನ್ನು ಎದುರಿಸಿರುವ ಜೋ ರೂಟ್ ಎಂಟ್ರಿ ಕೊಟ್ಟಿದ್ದಾರೆ.

# ನಾಯಕತ್ವ ಬದಲಾವಣೆ ಆಗಲ್ಲ, ಸಂಖ್ಯಾಬಲದ ಚರ್ಚೆ ಎಲ್ಲಿ ಬರುತ್ತೆ?

**ಬೆಂಗಳೂರು:** ಐಸಿಸಿ ಅಧ್ಯಕ್ಷರು, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆಶಿವಕುಮಾರ್, ಉಸ್ತುವಾರಿ ಸುರ್ಜೇವಾಲಾ ಅವರೇ ನಾಯಕತ್ವ ಬದಲಾವಣೆ ಇಲ್ಲ ಎಂದು ಸ್ಪಷ್ಟವಾಗಿ ಹೇಳಿರುವಾಗ ಚರ್ಚೆ ಯಾಕೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನೆ ಮಾಡಿದ್ದಾರೆ.



ನಾನೇ 5 ವರ್ಷ ಸಿಎಂ ಎಂಬ ಸಿದ್ದರಾಮಯ್ಯ ಹೇಳಿಕೆಗೆ ವಿಕಾಸಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಸಿದ್ದರಾಮಯ್ಯ ಅವರು ರಾಷ್ಟ್ರೀಯ ಮಾಧ್ಯಮದ ಜೊತೆ ಮಾತನಾಡಿ ಅಭಿಪ್ರಾಯ ಸಂಗ್ರಹವೇ ಮಾಡಿಲ್ಲ. ಯಾರೋ ಇಬ್ಬರು ಮಾತನಾಡಿದ್ದರೆ ಅದೇನು ದೊಡ್ಡದಲ್ಲ ಅಂತ ಹೇಳಿದ್ದಾರೆ. ನಾಯಕತ್ವದ ಬದಲಾವಣೆ ಅಭಿಪ್ರಾಯವೇ ತೆಗೆದುಕೊಳ್ಳದೇ ಇರುವಾಗ ಸಂಖ್ಯಾಬಲದ ಚರ್ಚೆ ಎಲ್ಲಿ ಬರುತ್ತದೆ ಎಂದು ಕೇಳಿದರು. ನಾನು, ಡಿಕೆ ಶಿವಕುಮಾರ್ ಹೈಕಮಾಂಡ್ ಏನ್ ಹೇಳುತ್ತದೋ ಅದನ್ನು ಪಾಲನೆ ಮಾಡುತ್ತೇವೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ. ಡಿಕೆ ಶಿವಕುಮಾರ್ ಅವರು ಸಿಎಂ ಕುರ್ಚಿ ಖಾಲಿ ಇಲ್ಲ ಅಂತ ಹೇಳಿದ್ದಾರೆ. ಹೈಕಮಾಂಡ್ ಸ್ಪಷ್ಟವಾಗಿ ನಾಯಕತ್ವದ ಬಗ್ಗೆ ಹೇಳಿದ ಮೇಲೆ ಎಲ್ಲವೂ ಮುಗಿಯಿತು ಎಂದು ಸ್ಪಷ್ಟಪಡಿಸಿದರು.

ದೆಹಲಿಗೆ ಹೋಗಬಾರದು, ಹೈಕಮಾಂಡ್‌ಗೆ ಭೇಟಿಯಾಗಬಾರದು ಅಂದರೆ ಹೇಗೆ? ನವೆಂಬರ್ ಕ್ರಾಂತಿ, ಸೆಪ್ಟೆಂಬರ್ ಕ್ರಾಂತಿ, ಡಿಸೆಂಬರ್ ಶಾಂತಿ ಎನ್ನುವುದು ವಿಷಯವೇ ಅಲ್ಲ. ಮಾಧ್ಯಮಗಳ ಮುಂದೆ ಪಕ್ಷದ ವಿಚಾರ ಹೇಳಿದರೆ ತೀರ್ಮಾನ ಆಗುವುದಿಲ್ಲ. ಮಾಧ್ಯಮಗಳು ಕೇಳೋದು ನಿಲ್ಲಿಸಿ ಸರಿ ಆಗುತ್ತೆ. ಮಾಧ್ಯಮಗಳು ಎರಡು ದಿನ ಪ್ರವಾಸಕ್ಕೆ ಹೋಗಿ ಬನ್ನಿ ನಾಳೆಯೇ ಶಾಂತಿ ಆಗುತ್ತದೆ ಅಂತ ಮಾಧ್ಯಮಗಳ ಮೇಲೆ ಆರೋಪ ಮಾಡಿದರು.

ಕಾಂಗ್ರೆಸ್ ಶಾಸಕ ರಂಗನಾಥ್ ಅವರು ಡಿಕೆ ಶಿವಕುಮಾರ್ 40 ವರ್ಷ ಪಕ್ಷಕ್ಕೆ ದುಡಿದ್ದಾರೆ. ಇಂದಲ್ಲ ನಾಳೆ ಸಿಎಂ ಆಗ್ತಾರೆ ಅಂತ ಹೇಳಿದ್ದಾರೆ. ಯಾವಾಗ ಅವಕಾಶ ಸಿಗುತ್ತೋ ಮಾಡೋಣ ಅಂತ ಹೇಳಿದ್ದಾರೆ. ಎಲ್ಲಾ ಕಡೆ ಹೀಗೆ ಬರುತ್ತದೆ. ಇದೇ ಎಲ್ಲರ ತೀರ್ಮಾನ ಅಲ್ಲ. ಯಾರ ಮುಂದೆ ಹೇಳಬೇಕೋ ಅವರ ಮುಂದೆ ಹೇಳಬೇಕು ಅಂತ ಕ್ರಾಂತಿ ಬಗ್ಗೆ, ನಾಯಕತ್ವ ಬದಲಾವಣೆ ಬಗ್ಗೆ ಮಾತನಾಡುವವರಿಗೆ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದರು.

ಕಾಂಗ್ರೆಸ್ ಶಾಸಕ ಸುಬ್ಬಾರೆಡ್ಡಿ ಮೇಲೆ ಇಡಿ ದಾಳಿ ಕುರಿತು ಮಾತನಾಡಿದ ಅವರು, ಇಡಿ, ಐಟಿ, ಸಿಬಿಐ ಸಂಸ್ಥೆಗಳು ಕೇಂದ್ರ ಸರ್ಕಾರದ ಕೈಗೊಂಬೆ ಆಗಿವೆ.10 ವರ್ಷಗಳಿಂದ ಅವರು ನಡೆಸಿರೋ ರೇಡ್ ತಗೊಳ್ಳಿ. ಸಂಸತ್ ನಲ್ಲಿ ಅವರ ಬಿಜೆಪಿ ಎಂಪಿ ಕೇಳಿರೋದಕ್ಕೆ ಉತ್ತರ ಕೊಟ್ಟಿದ್ದಾರೆ. ಇಷ್ಟು ರೇಡ್ ಮಾಡಿ 1.2% ಮಾತ್ರ ಕೇಸ್ ಬುಕ್ ಮಾಡಿದ್ದಾರೆ. ಐಟಿ, ಇಡಿಯನ್ನು ಇವರು ಪೊಲಿಟಿಕಲ್ ಟೂಲ್ ಆಗಿ ಬಳಸಿ ವಿಪಕ್ಷ ನಾಯಕರ ಮೇಲೆ ಬಳಸುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

# ಏಕದಿನ ಕ್ರಿಕೆಟ್‌ನಲ್ಲಿ ರೋಹಿತ್ ಶರ್ಮಾ ಯುಗಾಂತ್ಯ?

ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯ ಮುಕ್ತಾಯದ ಬೆನ್ನಲ್ಲೇ ಭಾರತ ಏಕದಿನ ತಂಡಕ್ಕೆ ಹೊಸ ನಾಯಕನ್ನು ಆಯ್ಕೆ ಮಾಡಲಿದ್ದಾರೆ ಎಂದು ವರದಿಯಾಗಿದೆ. ಪ್ರಸ್ತುತ ಏಕದಿನ ತಂಡದ ನಾಯಕರಾಗಿರುವ ರೋಹಿತ್ ಶರ್ಮಾ ಅವರನ್ನು ನಾಯಕತ್ವದಿಂದ ಕೆಳಗಿಳಿಸಲಿದ್ದು, ಅವರ ಬದಲಿಗೆ ಯುವ ಆಟಗಾರನಿಗೆ ಕ್ಯಾಪ್ಟನ್ ನೀಡಲಿದ್ದಾರೆ ಎಂದು ತಿಳಿದು ಬಂದಿದೆ.

ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯ ಮುಕ್ತಾಯದ ಬೆನ್ನಲ್ಲೇ ಭಾರತ ಏಕದಿನ ತಂಡಕ್ಕೆ ಹೊಸ ನಾಯಕನ್ನು ಆಯ್ಕೆ ಮಾಡಲಿದ್ದಾರೆ ಎಂದು ವರದಿಯಾಗಿದೆ. ಪ್ರಸ್ತುತ ಏಕದಿನ ತಂಡದ ನಾಯಕರಾಗಿರುವ ರೋಹಿತ್ ಶರ್ಮಾ ಅವರನ್ನು ನಾಯಕತ್ವದಿಂದ ಕೆಳಗಿಳಿಸಲಿದ್ದು, ಅವರ ಬದಲಿಗೆ ಯುವ ಆಟಗಾರನಿಗೆ ಕ್ಯಾಪ್ಟನ್ ನೀಡಲಿದ್ದಾರೆ ಎಂದು ತಿಳಿದು ಬಂದಿದೆ.

38 ವರ್ಷದ ರೋಹಿತ್ ಶರ್ಮಾ ಈಗಾಗಲೇ ಟಿ20 ಹಾಗೂ ಟೆಸ್ಟ್ ಕ್ರಿಕೆಟ್‌ಗೆ ವಿದಾಯ ಹೇಳಿದ್ದಾರೆ. ಇನ್ನುಳಿದಿರುವುದು ಏಕದಿನ ಕ್ರಿಕೆಟ್‌ನಲ್ಲಿ ಮಾತ್ರ. ಆದರೆ ಚಾಂಪಿಯನ್ಸ್ ಟ್ರೋಫಿ ಮುಕ್ತಾಯದ ಬೆನ್ನಲ್ಲೇ ನಿವೃತ್ತಿ ಘೋಷಿಸಲು ಹಿಟ್‌ಮ್ಯಾನ್‌ಗೆ ಬಿಸಿಸಿಐ ಸೂಚಿಸಿದ್ದರು ಎನ್ನಲಾಗಿದೆ. ಇದಾಗ್ಯೂ



ರೋಹಿತ್ ಶರ್ಮಾ ಏಕದಿನ ಕ್ರಿಕೆಟ್‌ನಲ್ಲಿ ಮುಂದುವರೆಯಲು ಬಯಸಿದ್ದಾರೆ. ಅಲ್ಲದೆ 2027ರ ಏಕದಿನ ವಿಶ್ವಕಪ್‌ನಲ್ಲಿ ಕಣಕ್ಕಿಳಿಯುವ ಗುರಿಯನ್ನು ಹೊಂದಿದ್ದಾರೆ.

ಆದರೆ ಅಷ್ಟರಲ್ಲಿ ರೋಹಿತ್ ಶರ್ಮಾ ಅವರ ವಯಸ್ಸು 40 ದಾಟಲಿದೆ. ಅಷ್ಟೇ ಅಲ್ಲದೆ ಅಲ್ಲಿಯವರೆಗೆ ಅವರು ಫಿಟ್ ಆಗಿರಲಿದ್ದಾರೆ ಅಥವಾ ಫಾರ್ಮ್ ಉಳಿಸಿಕೊಳ್ಳಲಿದ್ದಾರಾ ಎಂಬುದರ ಬಗ್ಗೆ ಯಾವುದೇ ಖಚಿತತೆ ಇಲ್ಲ. ಹೀಗಾಗಿ ಮುಂಬರುವ ಸರಣಿಗೂ ಮುನ್ನ ಭಾರತ ಏಕದಿನ ತಂಡಕ್ಕೆ ಹೊಸ ನಾಯಕನನ್ನು ಆಯ್ಕೆ ಮಾಡಲು ಬಿಸಿಸಿಐ ಚಿಂತಿಸಿದೆ.

ಅದರಂತೆ ಭಾರತ ಮತ್ತು ಇಂಗ್ಲೆಂಡ್ ನಡುವಣ ಟೆಸ್ಟ್ ಸರಣಿಯ ಮುಕ್ತಾಯದ ಬೆನ್ನಲ್ಲೇ ಟೀಮ್ ಇಂಡಿಯಾ ಏಕದಿನ ತಂಡದ ನೂತನ ನಾಯಕನ ಘೋಷಣೆಯಾಗುವ ಸಾಧ್ಯತೆಯಿದೆ. ಹೀಗಾಗಿ ಆಸ್ಟ್ರೇಲಿಯಾ ವಿರುದ್ಧದ ಏಕದಿನ ಸರಣಿಯಲ್ಲಿ ಭಾರತ ತಂಡವನ್ನು ಯುವ ನಾಯಕ ಮುನ್ನಡೆಸುವುದು ಬಹುತೇಕ ಖಚಿತ ಎನ್ನಲಾಗುತ್ತಿದೆ.

ಈ ಯುವ ನಾಯಕ ಯಾರೆಂಬ ಪ್ರಶ್ನೆಗೆ ಸದ್ಯ ಕೇಳಿ ಬರುತ್ತಿರುವ ಉತ್ತರ ಶುಭ್‌ಮನ್ ಗಿಲ್. ಮುಂಬರುವ ಏಕದಿನ ವಿಶ್ವಕಪ್ ಅನ್ನು ದೃಷ್ಟಿಯಲ್ಲಿಟ್ಟುಕೊಂಡು ಗಿಲ್‌ಗೆ ಕ್ಯಾಪ್ಟನ್ ಪಟ್ಟ ನೀಡಲು ಬಿಸಿಸಿಐ ಆಯ್ಕೆ ಸಮಿತಿ ನಿರ್ಧರಿಸಿದೆ. ಅದರಂತೆ ರೋಹಿತ್ ಶರ್ಮಾ ಅವರ ಉತ್ತರಾಧಿಕಾರಿಯಾಗಿ ಶುಭ್‌ಮನ್ ಗಿಲ್ ಕಾಣಿಸಿಕೊಳ್ಳುವುದು ಬಹುತೇಕ ಕನ್ಫರ್ಮ್ ಎನ್ನಬಹುದು.

# ಸರ್ಕಾರವೇ ಎಲ್ಲವನ್ನೂ ಮಾಡುವುದು ಕಷ್ಟವಾಗಬಹುದು

**ಬೆಂಗಳೂರು:** ಸರ್ಕಾರವೇ ಎಲ್ಲವನ್ನೂ ಮಾಡುವುದು ಕಷ್ಟವಾಗಬಹುದು. ಯಶಸ್ವಿ ಕೈಗಾರಿಕಾ ಮಾದರಿಗಳಿಂದ ನಾವು ಕೂಡ ಕಲಿಯಬಹುದು. ಕೈಗಾರಿಕೆ ಸಂಸ್ಥೆಗಳು ನೀಡುವ ತರಬೇತಿಯನ್ನು ಶಿಕ್ಷಣಕ್ಕೆ ಮತ್ತು ಉದ್ಯೋಗಾವಕಾಶಗಳೊಂದಿಗೆ ಹೇಗೆ ಮಿಳಿತಗೊಳಿಸಬಹುದು ಎಂಬುದನ್ನು ನಾವು ಅಳವಡಿಸಿಕೊಳ್ಳಬೇಕು ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣ ಪ್ರಕಾಶ್ ಆರ್. ಪಾಟೀಲ್ ತಿಳಿಸಿದರು.

ಪಿಇಎಸ್ ವಿಶ್ವವಿದ್ಯಾಲಯದಲ್ಲಿ ಬಜಾಜ್ ಎಂಜಿನಿಯರಿಂಗ್ ಕೌಶಲ್ಯ ತರಬೇತಿ (ಬೆಸ್ಟ್) ಕೇಂದ್ರದ ಮೊದಲ ವಾರ್ಷಿಕೋತ್ಸವ ಸಮಾರಂಭದಲ್ಲಿ ಭಾಷಣ ಮಾಡಿದ ಸಚಿವರು, ಕೌಶಲ್ಯಾಭಿವೃದ್ಧಿಗೆ ಹೆಚ್ಚು ಒತ್ತು ನೀಡಲು ಹಾಗೂ ಯುವಕರನ್ನು ಸಬಲೀಕರಣಗೊಳಿಸಲು ಸಹಯೋಗದ ಪ್ರಯತ್ನಗಳಿಗೆ ಆದ್ಯತೆ ನೀಡಲಾಗುವುದು ಎಂದರು.

ಈ ಯೋಜನೆಯು ವಿಶೇಷವಾಗಿ ಕಲ್ಯಾಣ ಮತ್ತು ಕಿತ್ತೂರು ಕರ್ನಾಟಕದ ವಿದ್ಯಾರ್ಥಿಗಳಿಗೆ ಸಾಕಷ್ಟು ಪ್ರಯೋಗವಾಗುತ್ತದೆ. ಮಹತ್ವಾಕಾಂಕ್ಷೆಯ ಜಿಲ್ಲೆಗಳ ಯುವಕರನ್ನು ಉನ್ನತೀಕರಿಸುವ ಮಾದರಿಯಾಗಿದೆ ಎಂದು ತಿಳಿಸಿದರು.





ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯೋಗ ಗುರಿಗಳನ್ನು ಸಾಧಿಸಲು ಬಲವಾದ ಸರ್ಕಾರಿ-ಶೈಕ್ಷಣಿಕ-ಉದ್ಯಮ ಪಾಲುದಾರಿಕೆಯನ್ನು ನಾವು ಇನ್ನಷ್ಟು ಅನ್ವೇಷಿಸಬೇಕಾಗಿದೆ ಎಂದು ಸಚಿವರು ತಿಳಿಸಿದರು.

ಬಜಾಜ್ ಆಟೋ ಮತ್ತು ಪಿಇಎಸ್ ವಿಶ್ವವಿದ್ಯಾಲಯದ ನಡುವಿನ ಈ ಸಹಯೋಗವು ಸಾರ್ವಜನಿಕ-ಖಾಸಗಿ ಸಹಭಾಗಿತ್ವಕ್ಕೆ ಅತ್ಯುತ್ತಮ ಉದಾಹರಣೆಯಾಗಿದೆ. ಶೈಕ್ಷಣಿಕ ಕ್ಷೇತ್ರದ ಬಲವು ಉದ್ಯಮದ ನಿಖರತೆಗೆ ಪೂರಕವಾಗಿದೆ. ವಿಶೇಷವಾಗಿ ಕರ್ನಾಟಕದ ಸೌಲಭ್ಯ ವಂಚಿತ ಪ್ರದೇಶಗಳ ಯುವಕರನ್ನು ಸಬಲೀಕರಣಗೊಳಿಸುವುದು ಪ್ರೋತ್ಸಾಹದಾಯಕ ಕ್ರಮವಾಗಬಾರದು. ಅದು ನಮ್ಮ ಭವಿಷ್ಯದ ಕಾರ್ಯತಂತ್ರದ ಭಾಗವಾಗಿರಬೇಕು ಎಂದು ಡಾ. ಪಾಟೀಲ್ ಹೇಳಿದರು.

**320 ವಿದ್ಯಾರ್ಥಿಗಳಿಗೆ ತರಬೇತಿ:** ಬಜಾಜ್ ಆಟೋ ಲಿಮಿಟೆಡ್‌ನ ಸಿಎಸ್‌ಆರ್ ಉಪಕ್ರಮವಾದ ಪಿಇಎಸ್ ವಿಶ್ವವಿದ್ಯಾಲಯದ ಬೆಸ್ಟ್ ಕೇಂದ್ರವು ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಮೆಕಾಟ್ರಾನಿಕ್ಸ್, ಮೋಷನ್ ಕಂಟ್ರೋಲ್, ರೊಬೊಟಿಕ್ಸ್, ಇಂಡಸ್ಟ್ರಿ 4.0 ಮತ್ತು ಸ್ಮಾರ್ಟ್ ಮ್ಯಾನುಫ್ಯಾಕ್ಚರಿಂಗ್‌ನಂತಹ ಸಮಕಾಲೀನ ತಂತ್ರಜ್ಞಾನಗಳಲ್ಲಿ ಸುಧಾರಿತ ತರಬೇತಿ ನೀಡುತ್ತದೆ. ಮೊದಲ ವರ್ಷದಲ್ಲಿ, ಈ ಕಾರ್ಯಕ್ರಮವು 320 ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ತರಬೇತಿ ನೀಡಿದ್ದು, ಅವರೆಲ್ಲರೂ ಉತ್ತಮ ಸಂಬಳದೊಂದಿಗೆ ಉದ್ಯೋಗ ಪಡೆದುಕೊಂಡಿದ್ದಾರೆ. ಮುಂಬರುವ ವರ್ಷಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಯನ್ನು ದ್ವಿಗುಣಗೊಳಿಸುವ ಗುರಿ ಹೊಂದಲಾಗಿದೆ.

ಪಿಇಎಸ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಡಿ. ಜವಾಹರ್, ಉಪಕುಲಪತಿ ಡಾ. ಜೆ. ಸೂರ್ಯ ಪ್ರಸಾದ್ ಮತ್ತು ಬಜಾಜ್ ಆಟೋ ಲಿಮಿಟೆಡ್‌ನ ಸಿಎಸ್‌ಆರ್ ಉಪಾಧ್ಯಕ್ಷ ಸುಧಾಕರ್ ಗುಡಿಪತಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079.
Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085,
email: sanjemugilu@gmail.com, RNI No.KARKAN/2002/08054